ಕನ್ನಡ ದಿನಪತ್ರಿಕೆ
28 ಫೆಬ್ರುವರಿ | ಬುಧವಾರ
28 February 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 10 ಪುಟ – 4 | RNI. KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ನಾಮಫಲಕಗಳಲ್ಲಿ ಶೇ. 60ರಷ್ಟು ಕನ್ನಡ ಬಳಕೆ ಕಡ್ಡಾಯಗೊಳಿಸಿದ ಸರ್ಕಾರ



ಬೆಂಗಳೂರು: ಕೈಗಾರಿಕೆ, ವಾಣಿಜ್ಯ ಸಂಸ್ಥೆಗಳು, ವಹಿವಾಟು ಕೇಂದ್ರಗಳು, ಉದ್ದಿಮೆಗಳ ನಾಮಫಲಕಗಳಲ್ಲಿ ಶೇಕಡ 60ರಷ್ಟು ಕನ್ನಡ ಭಾಷೆ ಕಡ್ಡಾಯವಾಗಿದ್ದು, ಇರದಿದ್ದರೆ, ಕ್ರಮ ಜರುಗಿಸುವ ಅಧಿಕಾರ ಸರ್ಕಾರಕ್ಕೆ ಒದಗಿದೆ.

ಈ ಉದ್ದೇಶಕ್ಕೆ, ರಾಜ್ಯ ಸರ್ಕಾರ ಮಂಡಿಸಿ ಉಭಯ ಸದನಗಳಲ್ಲೂ ಅನುಮೋದನೆ ಪಡೆದಿದ್ದ 'ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ (ತಿದ್ದುಪಡಿ) ವಿಧೇಯಕ– 2024'ಕ್ಕೆ ರಾಜ್ಯಪಾಲರು ಅಂಕಿತ ಹಾಕಿದ್ದಾರೆ. ಅದರ ಬೆನ್ನಲ್ಲೇ, ಕರ್ನಾಟಕ ರಾಜ್ಯಪತ್ರದಲ್ಲಿ ಅಧಿಸೂಚನೆಯನ್ನೂ ಹೊರಡಿಸಲಾಗಿದೆ.

ಸರ್ಕಾರ ಅಥವಾ ಸ್ಥಳೀಯ ಪ್ರಾಧಿಕಾರಗಳಿಂದ ಅನುಮತಿ, ಮಂಜೂರಾತಿ ಪಡೆದ ಎಲ್ಲ ಸಂಸ್ಥೆಗಳಿಗೂ ಇದು ಅನ್ವಯವಾಗಲಿದೆ. ಆಸ್ಪತ್ರೆಗಳು, ಪ್ರಯೋಗಾಲಯಗಳು, ಮನೋರಂಜನಾ ಕೇಂದ್ರಗಳು, ಹೋಟೆಲ್ಗಳ ನಾಮಫಲಕಗಳ ಮೇಲ್ಭಾಗದಲ್ಲಿ ಕನ್ನಡ ಭಾಷೆಯನ್ನು ಶೇಕಡ 60 ರಷ್ಟು ಪ್ರದರ್ಶಿಸಬೇಕು ಎಂದು ಸರ್ಕಾರ ಸೂಚನೆ ನೀಡಿದೆ.

## ಡ್ಯಾಮ್ ಕುಸಿದು ಇಬ್ಬರು ಮಕ್ಕಳು ದಾರುಣ ಸಾವು




ಮುಂಬೈ: ಮಹಾರಾಷ್ಟ್ರದ ರಾಯಗಢ ಜಿಲ್ಲೆಯ ಪ್ರಶಾಂತ ಪ್ರದೇಶದಲ್ಲಿ ಹೃದಯ ವಿದ್ರಾವಕ ಘಟನೆ ನಡೆದಿದೆ. ಉರಾನ್ ತಾಲೂಕಿ ಧುತಂ ಗ್ರಾಮದ ಬಳಿ ನಾಲ್ವರು ಮಕ್ಕಳು ಆಟವಾಡುತ್ತಿದ್ದ ವೇಳೆ ಡ್ಯಾಮ್ನ ಒಂದು ಬದಿ ಕುಸಿದು ಬಿದ್ದಿದೆ.

ಪರಿಣಾಮ ನಾಲ್ವರು ಮಕ್ಕಳು ಸಿಲುಕಿಕೊಂಡಿದ್ದರು. ಅದರಲ್ಲಿ ಇಬ್ಬರು ಮಕ್ಕಳು ಅಲ್ಲೇ ಸಾವನ್ನಪ್ಪಿದ್ದಾರೆ. ಇನ್ನಿಬ್ಬರು ಮಕ್ಕಳನ್ನು ರಕ್ಷಣೆ ಮಾಡಿದ್ದು, ಗಂಭೀರವಾಗಿ ಗಾಯಗೊಂಡಿದ್ದಾರೆ.

ಸದ್ಯ ಇಬ್ಬರು ಮಕ್ಕಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ದುರ್ಘಟನೆ ಸಂಬಂಧ ಅಧಿಕಾರಿಗಳು ತನಿಖೆಗೆ ಆದೇಶ ನೀಡಿದ್ದಾರೆ.

## 7ನೇ ವೇತನ ಆಯೋಗದ ವರದಿ ಬಂದ ನಂತರ ಸಕಾರಾತ್ಮಕ ತೀರ್ಮಾನ: ಸಿಎಂ ಸಿದ್ದರಾಮಯ್ಯ




ಬೆಂಗಳೂರು: ಪಂಚಗ್ಯಾರಂಟಿಗಳನ್ನು ಜಾರಿ ಮಾಡುವ ಆರ್ಥಿಕ ಹೊರೆಯ ನಡುವೆಯೂ 7ನೇ ವೇತನ ಆಯೋಗದ ಅಂತಿಮ ವರದಿ ಬಂದ ನಂತರ ಸರ್ಕಾರಿ ನೌಕರರ ಬಗ್ಗೆ ಸರ್ಕಾರ ಸಕಾರಾತ್ಮಕವಾಗಿ ತೀರ್ಮಾನವನ್ನು ಕೈಗೊಳ್ಳಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ರಾಜ್ಯ ಮಟ್ಟದ ಸರ್ಕಾರಿ ನೌಕರರ ಸಮ್ಮೇಳನವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ನಿರ್ಧ–ರಿಸಿದಂತೆ ತುಟ್ಟಿಭತ್ಯೆಯನ್ನು ಯಾವುದೇ ವಿಳಂಬವಿಲ್ಲದೇ ರಾಜ್ಯದಲ್ಲಿ ನೀಡಲಾಗುತ್ತಿದೆ. ಎನ್ ಪಿ ಎಸ್ ತೆಗೆದು ಹಳೆ ಪಿಂಚಣಿ ವ್ಯವಸ್ಥೆಯನ್ನು ಜಾರಿ ಮಾಡುವ ಬಗ್ಗೆಯೂ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು. ಸರ್ಕಾರಿ ನೌಕರರಿಗೆ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾರಿ ಮಾಡುವ ಬಗ್ಗೆಯೂ ಶೀಘ್ರದಲ್ಲಿ ತೀರ್ಮಾನಿಸಲಾಗುವುದು ಎಂದ ಮುಖ್ಯಮಂತ್ರಿಗಳು ಸರ್ಕಾರ ಮತ್ತು ಜನರ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವ ಜವಾಬ್ದಾ–ರಿಯುತ ಕೆಲಸವನ್ನು ಪರಿಣಾಮಕಾರಿಯಾಗಿ ಮಾಡುತ್ತಿರುವ ಸರ್ಕಾರಿ ನೌಕರರ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದರು.

ಕರ್ನಾಟಕದಲ್ಲಿ 7.50 ಲಕ್ಷ ಸರ್ಕಾರಿ ನೌಕರರಿದ್ದಾರೆ. ಅದರಲ್ಲಿ 5.90 ಲಕ್ಷ ಜನ ಹಾಲಿ ಕೆಲಸ ಮಾಡುತ್ತಿದ್ದಾರೆ. 2.50 ಲಕ್ಷ ಜನರನ್ನು ಭರ್ತಿ ಮಾಡಲು ಸಾಧ್ಯವಾಗಿಲ್ಲ. ಕರ್ನಾಟಕದ ಜನಸಂಖ್ಯೆ 7 ಕೋಟಿ ಇದೆ. 7.50 ಲಕ್ಷ ಮಂಜೂರಾಗಿರುವ ಹುದ್ದೆಗಳಿವೆ. 7 ಲಕ್ಷ ಜನ 7 ಕೋಟಿ ಜನರ ಕಷ್ಟ ಸುಖಗಳಲ್ಲಿ ಭಾಗಿಯಾಗುವ, ರಾಜ್ಯದ ಅಭಿವೃದ್ಧಿಯಲ್ಲಿ ಬಾಗಿಯಾಗುವ ಪ್ರಾಮಾಣಿಕ ಪ್ರಯತ್ನವನ್ನು ಮಾಡಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಜನರು ನಮ್ಮನ್ನು 5 ವರ್ಷಕ್ಕೊಮ್ಮೆ ಆಯ್ಕೆ ಮಾಡಿದರೆ, ಸರ್ಕಾರಿ ಸೇವೆಗೆ ಸೇರಿದ ಮೇಲೆ ನಿವೃತ್ತಿಯಾಗುವವರೆಗೆ ನವೀಕರಣ ಮಾಡಿಸಿಕೊಳ್ಳುವ ಪ್ರಮೇಯವಿಲ್ಲ. ರಾಜಕಾರಣಿಗಳು 5 ವರ್ಷಕ್ಕೊಮ್ಮೆ ಕರ್ನಾಟಕದ ಜನರ ಆಶೀರ್ವಾದವನ್ನು ನವೀಕರಿಸಿಕೊಳ್ಳಬೇಕು ಎಂದರು.

ರಾಜ್ಯದ ಜನ ನನಗೆ ಎರಡನೇ ಬಾರಿಗೆ ಮುಖ್ಯಮಂತ್ರಿಯಾಗುವ ಅವಕಾಶವನ್ನು ಕಲ್ಪಿಸಿಕೊಟ್ಟಿದ್ದಾರೆ. ಅದರಲ್ಲಿ ನೀವೂ, ನಿಮ್ಮ ಕುಟುಂಬದವರೂ ಇದ್ದಾರೆ. 7 ಕೋಟಿ ಕನ್ನಡಿಗರ ಭಾಗವಾದ ಸರ್ಕಾರಿ ನೌಕಕರು, ಸಾಮಾಜಿಕ ವ್ಯವಸ್ಥೆಯನ್ನು ಅರ್ಥ ಮಾಡಿಕೊಂಡಿದ್ದೀರಿ ಎಂದು ಭಾವಿಸಿದ್ದೇನೆ. ನಮ್ಮ ಸಮಾಜದಲ್ಲಿ ಸಾಮಾಜಿಕ, ಆರ್ಥಿಕ ಸಮಾನತೆ ತರಬೇಕು. ನಾವೆಲ್ಲರೂ ಪ್ರಜಾಪ್ರಭುತ್ವದ ಮಾಲೀಕರ ಪರವಾಗಿ ಕೆಲಸ ಮಾಡಲು ಇರಬೇಕು ಎಂದರು.

ರಾಜ್ಯದ ಜನರ ಪರವಾಗಿ ಕೆಲಸ ಮಾಡಬೇಕಾಗಿರುವುದು ಮೊದಲನೇ ಆದ್ಯತೆ

ಸರ್ಕಾರ ನಿಮಗೆ ನ್ಯಾಯ ಒದಗಿಸುವ ಕೆಲಸ ಮಾಡಬೇಕು ಎನ್ನುವುದರಲ್ಲಿ ಎರಡು ಮಾತಿಲ್ಲ. ಸರ್ಕಾರ ನಿಮ್ಮ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸಬೇಕು. ಆದರೆ ಅದೇ ಮೊದಲ ಆದ್ಯತೆ ಅಲ್ಲ. ಅನ್ಯಾಯಗಳನ್ನು ಸರಿಪಡಿಸುವುದು ಸರ್ಕಾರದ ಕರ್ತವ್ಯ. ರಾಜ್ಯದ ಜನರ ಪರವಾಗಿ ಕೆಲಸ ಮಾಡಬೇಕಾಗಿರುವುದು ಮೊದಲನೇ ಆದ್ಯತೆ. ಬೇಡಿಕೆಗಳು ನಂತರದ ಆದ್ಯತೆ. ಇದನ್ನು ಸ್ಪಷ್ಟವಾಗಿ ನೀವು ಅಥ–'ರ್ಮಾಡಿಕೊಂಡಿದ್ದೀರಿ ಎನ್ನುವುದು ನನ್ನ ಅನಿಸಿಕೆ ಎಂದರು.

ಸರ್ಕಾರಿ ನೌಕರರ ಸಮಸ್ಯೆಗಳನ್ನು ಅರಿತು 7ನೇ ವೇತನ ಆಯೋಗ ರಚಿಸಲಾಗಿದ್ದು, 6ನೇ ವೇತನ ಆಯೋಗವನ್ನು ನಮ್ಮ ಸರ್ಕಾರ ಜಾರಿಗೆ ತಂದಿತ್ತು. ಆ ಸಂದರ್ಭದಲ್ಲಿ ಸರ್ಕಾರಿ ನೌಕರರ ವಿರುದ್ಧವಿರುವುದಾಗಿ ನನ್ನ ಮೇಲೆ ಅರೋಪ ಮಾಡಿದ್ದರು. ಆದರೆ ನಾನೇ 6ನೇ ವೇತನ ಆಯೋಗವನ್ನು ರಚಿಸಿದ್ದೆವು. ಸರ್ಕಾರಿ ನೌಕರರ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವ ಕೆಲಸವಾಗಬೇಕು. 6ನೇ ವೇತನ ಆಯೋಗದಲ್ಲಿ ಶೇ. 30ರಷ್ಟು ಫಿಟ್ಮೆಂಟ್ ಸೌಲಭ್ಯ ನೀಡಲು 10,500 ಕೋಟಿ ರೂ.ಗಳನ್ನು ಹೆಚ್ಚುವರಿಯಾಗಿ ಬಿಡುಗಡೆ ಮಾಡಿದೆ. ಈಗ 7 ನೇ ವೇತನ ಆಯೋಗದ ಮಧ್ಯಂತರ ವರದಿಯಂತೆ 17% ಹೆಚ್ಚಳ ಮಾಡಲಾಗಿತ್ತು. ಆಯೋಗದ ಅಂತಿಮ ವರದಿ ನೀಡಲು ಇನ್ನಷ್ಟು ಕಾಲಾವಕಾಶ ಬೇಕೆಂದು ಆಯೋಗದ ಅಧ್ಯಕ್ಷರು ಕೋರಿದ್ದು, ಮಾರ್ಚ್ 15 ರವರೆಗೆ ವರದಿ ನೀಡಲು ಸಮಯಾವಕಾಶ ನೀಡಲಾಗಿದೆ. ಲೋಕಸಭಾ ಚುನಾವಣೆಯ ಹಿನ್ನಲೆ , ಆಯೋಗದ ಅಂತಿಮ ವರದಿಯನ್ನು ಆದ–'ಷ್ಟು ಜಾಗ್ರತೆ ಸಲ್ಲಿಸುವುದಾಗಿ ತಿಳಿಸಿದ್ದಾರೆ. ನಾನು ಸರ್ಕಾರಿ ನೌಕರರ ಪರವಾಗಿದ್ದೇನೆ ಎಂದು ತಿಳಿಸಿದರು.

## 2035 ರ ವೇಳೆಗೆ ಭಾರತಕ್ಕೆ ಸ್ವಂತ ಬಾಹ್ಯಾಕಾಶ ನಿಲ್ದಾಣ: ಮೋದಿ



ತಿರುವನಂತಪುರಂ: 2035 ರ ವೇಳೆಗೆ ಭಾರತಕ್ಕೆ ತನ್ನದೇ ಸ್ವಂತ ಬಾಹ್ಯಾಕಾಶ ನಿಲ್ದಾಣ ಇರಲಿದ್ದು, ಇದು ಬಾಹ್ಯಾಕಾಶದ ಅಧ್ಯಯನಕ್ಕೆ ಪೂರಕವಾಗಿರಲಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ತಿರುವನಂತಪುರಂ ನಲ್ಲಿರುವ ವಿಕ್ರಮ್ ಸಾರಾಭಾಯ್ ಬಾಹ್ಯಾಕಾಶ ಕೇಂದ್ರ (ವಿಎಸ್ಎಸ್ ಸಿ) ನಲ್ಲಿ ಮಾತನಾಡಿರುವ ಪ್ರಧಾನಿ ಮೋದಿ, ಭಾರತೀಯ ಗಗನಯಾತ್ರಿ ಚಂದ್ರನ ಮೇಲೆ ನಮ್ಮದೇ ರಾಕೆಟ್ ನಲ್ಲಿ ಇಳಿಯಲಿದ್ದಾರೆ ಎಂದು ಹೇಳಿದ್ದಾರೆ.

2035 ರ ವೇಳೆಗೆ ಭಾರತ ತನ್ನದೇ ಆದ ಬಾಹ್ಯಾಕಾಶ ನಿಲ್ದಾಣವನ್ನು ಹೊಂದಲಿದ್ದು, ಬಾಹ್ಯಾಕಾಶದ ಅಜ್ಞಾತ ವಿಸ್ತಾರಗಳ ಅಧ್ಯಯನಕ್ಕೆ ಇದು ಸಹಕಾರಿಯಾಗಲಿದೆ. ಈ ಅಮೃತಕಾಲದಲ್ಲಿ ಭಾರತೀಯ ಗಗನಯಾನಿಗಳು ಚಂದ್ರನ ಮೇಲೆ ನಮ್ಮ ಸ್ವಂತ ರಾಕೆಟ್ ನಿಂದ ಇಳಿಯಲಿದ್ದಾರೆ ಎಂದು ಹೇಳಿದ್ದಾರೆ. ಭಾರತ 21 ನೇ ಶತಮಾನದಲ್ಲಿ ಜಾಗತಿಕ ಮಟ್ಟದಲ್ಲಿ ಬಲಿಷ್ಠ ದೇಶವಾಗಿ ಹೊರಹೊಮ್ಮುತ್ತಿದ್ದು ಎಲ್ಲಾ ಕ್ಷೇತ್ರಗಳಲ್ಲಿಯೂ ಗಣನೀಯ ಅಭಿವೃದ್ಧಿ ಸಾಧಿಸುತ್ತಿದೆ ಎಂದು ಮೋದಿ ತಿಳಿಸಿದ್ದಾರೆ.

ಕಳೆದ 10 ವರ್ಷಗಳಲ್ಲಿ ಭಾರತ 400 ಕ್ಕೂ ಹೆಚ್ಚು ಉಪಗ್ರಹಗಳನ್ನು ಉಡಾವಣೆ ಮಾಡಿದೆ, 10 ವರ್ಷಗಳ ಹಿಂದೆ ಕೇವಲ 33 ಉಪಗ್ರಹಗಳನ್ನು ಉಡಾವಣೆ ಮಾಡಲಾಗಿತ್ತು ಎಂದು ಪ್ರಧಾನಿ ಮೋದಿ ಹೇಳಿದ್ದು, ಗಗನ್‌ಯಾನ್ ಮಿಷನ್‌ನಲ್ಲಿ ಬಳಸಲಾಗುತ್ತಿರುವ ಉಪಕರಣಗಳು ಹೆಚ್ಚಾಗಿ ಭಾರತದಲ್ಲಿಯೇ ತಯಾರಿಸಲ್ಪಟ್ಟಿರುವ ಬಗ್ಗೆ ಪ್ರಧಾನಿ ಮೋದಿ ತಮ್ಮ ಸಂತೋಷವನ್ನು ವ್ಯಕ್ತಪಡಿಸಿದ್ದಾರೆ.

ದೇಶದ ಚೊಚ್ಚಲ ಮಾನವ ಸಹಿತ ಬಾಹ್ಯಾಕಾಶ ಯಾನ ಗಗನಯಾನಗೆ ತರಬೇತಿ ಪಡೆಯುತ್ತಿರುವ ನಾಲ್ವರು ಗಗನಯಾತ್ರಿಗಳ ಹೆಸರನ್ನು ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ಪ್ರಕಟಿಸಿದ್ದಾರೆ.

ಪ್ರಧಾನಮಂತ್ರಿಯವರು ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ (ಇಸ್ರೋ) ದ ಮೂರು ಪ್ರಮುಖ ತಾಂತ್ರಿಕ ಸೌಲಭ್ಯಗಳನ್ನು ಉದ್ಘಾಟಿಸಲು VSSC ಗೆ ಬಂದಿದ್ದರು.

ಕೇರಳ ರಾಜ್ಯದ ರಾಜಧಾನಿ ಬಳಿಯ ತುಂಬಾದಲ್ಲಿರುವ ವಿಕ್ರಮ್ ಸಾರಾಭಾಯ್ ಬಾಹ್ಯಾಕಾಶ ಕೇಂದ್ರಕ್ಕೆ ಭೇಟಿ ನೀಡಿದ್ದ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ಗಗನಯಾನ ಮಿಷನ್ ಗೆ ಆಯ್ಕೆಯಾಗಿರುವ ನಾಲ್ಕು ಮಂದಿ ಗಗನಯಾನಿಗಳ ಹೆಸರನ್ನು ಘೋಷಣೆ ಮಾಡಿದ್ದಾರೆ.

## ಜೆಡಿಎಸ್ ಗೆಲುವಿಗೆ ಬಿಜೆಪಿ ಆಸಕ್ತಿವಹಿಸಿಲ್ಲ: ಡಿ.ಕೆ. ಶಿವಕುಮಾರ್



ಬೆಂಗಳೂರು: ಬಿಜೆಪಿ–ಜೆಡಿಎಸ್ ಮೈತ್ರಿ ಸರಿಯಿದೆಯೋ, ಇಲ್ಲವೋ ಎಂಬುದನ್ನು ರಾಜ್ಯಸಭೆ ಚುನಾವಣಾ ಫಲಿತಾಂಶ ನೀಡಲಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ. ಶಿವಕುಮಾರ್ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೆಡಿಎಸ್–ಬಿಜೆಪಿ ಮೈತ್ರಿಯನ್ನು ಮತದಾರರು ಹಾಗೂ ಶಾಸಕರು ಒಪ್ಪಿಕೊಳ್ಳಬೇಕು. ಅದು ಸರಿಯೇ ಅಥವಾ ಇಲ್ಲವೇ ಎಂಬುದನ್ನು ಜನ ತೀರ್ಮಾನಿಸಬೇಕು. ಈ ಫಲಿತಾಂಶ ಅದನ್ನು ಸಾಬೀತು ಪಡಿಸಲಿದೆ ಎಂದರು.

ಚುನಾವಣಾ ಅಭ್ಯರ್ಥಿಗಳು ಆತ್ಮಸಾಕ್ಷಿ ಮತ ಕೇಳಿದ್ದರು. ಅದರಂತೆ ಮತಗಳು ಚಲಾವಣೆಯಾಗಿರಬಹುದು. ಎಸ್.ಟಿ. ಸೋಮಶೇಖರ್ ಅವರು ಯಾರ ಪರ ಮತ ಹಾಕಿದ್ದಾರೆ ಗೊತ್ತಿಲ್ಲ.

ಅವರ ಹೇಳಿಕೆ ನೋಡಿಲ್ಲ. ಒಂದು ವೇಳೆ ಅಡ್ಡ ಮತದಾನವಾಗಿದ್ದರೆ ಅದರ ಕುರಿತು ಹೇಳಿಕೆ ನೀಡಬೇಕಿರುವುದು ಬಿಜೆಪಿ ಎಂದು ಸ್ಪಷ್ಟಪಡಿಸಿದರು.

ಜೆಡಿಎಸ್ನ ಕುಪೇಂದ್ರರೆಡ್ಡಿ ಅವರನ್ನು ಗೆಲ್ಲಿಸಲು ಬಿಜೆಪಿ ಯಾವ ಪ್ರಯತ್ನವನ್ನೂ ಮಾಡಿಲ್ಲ. ಬಿಜೆಪಿ ಅಭ್ಯರ್ಥಿ ಗೆಲ್ಲಲು 45 ಮತಗಳು ಬೇಕಿತ್ತು. ಬಾಕಿ ಉಳಿದ ಮತಗಳನ್ನು ಮೈತ್ರಿ ಅಭ್ಯರ್ಥಿ ಕುಪೇಂದ್ರ ರೆಡ್ಡಿಯವರಿಗೆ ಹಾಕಿಸಬಹುದಿತ್ತು. ಆದರೆ ಬಿಜೆಪಿ ತಮ್ಮ ಅಭ್ಯರ್ಥಿಗೆ 48 ಮತಗಳನ್ನು ಹಾಕಿಸಿದೆ. ಜೆಡಿಎಸ್ ಅಭ್ಯರ್ಥಿ ಗೆಲುವಿಗೆ ಬಿಜೆಪಿ ಆಸಕ್ತಿ ವಹಿಸಿಲ್ಲ ಎಂಬುದು ಗೊತ್ತಾಗುತ್ತದೆ ಎಂದರು.

## ಬಿಜೆಪಿಗೆ ಡಬಲ್ ಶಾಕ್ ಕೊಟ್ಟ ಶಾಸಕ ಶಿವರಾಮ್ ಹೆಬ್ಬಾರ್



ಬೆಂಗಳೂರು: ವಿಧಾನಸಭೆಯಿಂದ ರಾಜ್ಯಸಭೆಗೆ ನಡೆಯುವ ನಾಲ್ಕು ಸ್ಥಾನಗಳ ಚುನಾವಣೆಯಲ್ಲಿ ಬಿಜೆಪಿ, ಜೆಡಿಎಸ್ ಪಕ್ಷಕ್ಕೆ ಡಬಲ್ ಶಾಕ್ ಎದುರಾಗಿದೆ. ಮೈತ್ರಿ ಅಭ್ಯರ್ಥಿ ಕುಪೇಂದ್ರ ರೆಡ್ಡಿ ಅವರನ್ನು ಗೆಲ್ಲಿಸುವ ಪ್ರಯತ್ನ ಬಹುತೇಕ ವಿಫಲವಾಗಿದ್ದು, ಇಬ್ಬರು ಬಿಜೆಪಿ ಶಾಸಕರು ಮತದಾನದಲ್ಲಿ ಕೈ ಕೊಟ್ಟಿದ್ದಾರೆ.

ರಾಜ್ಯಸಭಾ ಚುನಾವಣೆಗೆ ಮತದಾನದ ಪ್ರಕ್ರಿಯೆ ಅಂತ್ಯವಾಗಿದ್ದು, ಇನ್ನು ಕೆಲವೇ ಕ್ಷಣದಲ್ಲಿ ಅಧಿಕೃತ ಫಲಿತಾಂಶ ಪ್ರಕಟವಾಗಲಿದೆ. ಅವಧಿ ಮುಗಿದರೂ ಯಲ್ಲಾಪುರ ಬಿಜೆಪಿ ಶಾಸಕ ಶಿವರಾಮ್ ಹೆಬ್ಬಾರ್ ಅವರು ಮತದಾನಕ್ಕೆ ಹಾಜರಾಗಿಲ್ಲ. ಒಂದೇ ದಿನ ಇಬ್ಬರು ಶಾಸಕರು ಬಿಜೆಪಿಗೆ ಕೈ ಕೊಡುವ ಮೂಲಕ ಬಿಜೆಪಿ–ಜೆಡಿಎಸ್ ಮೈತ್ರಿಗೆ ಮತ್ತೊಂದು ಮಾಸ್ಟರ್ ಸ್ಟ್ರೋಕ್ ಎದುರಾಗಿದೆ.

ಬೆಳಗ್ಗೆ ಮತದಾನಕ್ಕೆ ಬಂದಿದ್ದ ಬಿಜೆಪಿ ಶಾಸಕ ಎಸ್.ಟಿ ಸೋಮಶೇಖರ್ ಅವರು ಆತ್ಮಸಾಕ್ಷಿಯ ಮತ ಹಾಕುತ್ತೇನೆ ಎಂದು ಹೇಳಿ ಕಾಂಗ್ರೆಸ್ ಅಭ್ಯರ್ಥಿಗೆ ಮತ ಹಾಕಿದ್ದರು. ಯಲ್ಲಾಪುರ ಬಿಜೆಪಿ ಶಾಸಕ ಶಿವರಾಮ್ ಹೆಬ್ಬಾರ್ ವಿರುದ್ಧ ಬಿಜೆಪಿ ವಿಪ್ ಜಾರಿ ಮಾಡಿದ್ದರೂ ಸ್ವೀಕರಿಸಿರಲಿಲ್ಲ.

ಬೆಳಗ್ಗೆ ಬಿಜೆಪಿ ನಾಯಕರು ಸಂಪರ್ಕಿಸಿದಾಗ ಪಕ್ಷದ ಪರವಾಗಿ ಇರುತ್ತೇನೆ ಎಂದಿದ್ದರು. ಆದರೆ ಮತದಾನಕ್ಕೆ ಗೈರಾಗಿರುವ ಶಿವರಾಮ್ ಹೆಬ್ಬಾರ್ ಅವರು ಕೊನೆಗೂ ಬಿಜೆಪಿಗೆ ಕೈ ಕೊಟ್ಟಿದ್ದಾರೆ. ಸೋಮಶೇಖರ್ ಹಾಗೂ ಶಿವರಾಮ್ ಹೆಬ್ಬಾರ್ ಇಬ್ಬರ ಈ ನಿರ್ಧಾರದಿಂದ ಬಿಜೆಪಿ–ಜೆಡಿಎಸ್ ಮೈತ್ರಿಗೆ ಹಿನ್ನಡೆ ಆಗಿದೆ.

ರಾಜ್ಯಸಭಾ ಚುನಾವಣೆಯಲ್ಲಿ ಒಟ್ಟು 66 ಶಾಸಕರ ಪೈಕಿ ಬಿಜೆಪಿ ಪರ 64 ಮತಗಳು ಮಾತ್ರ ಚಲಾವಣೆ ಆಗಿದೆ. ಈ ಮೂಲಕ ರಾಷ್ಟ್ರೀಯ ಪಕ್ಷ ಬಿಜೆಪಿಗೆ ದೊಡ್ಡ ಮಟ್ಟದ ಹಿನ್ನೆಡೆಯಾಗಿದೆ.

## ಎಸ್.ಟಿ ಸೋಮಶೇಖರ್–ಹೆಬ್ಬಾರ್ ವಿರುದ್ಧ ಇಂದು ವಿಧಾನಸಭೆ 'ಸ್ಪೀಕರ್ ಗೆ' ದೂರು ಸಲ್ಲಿಸಲಿರುವ 'ಬಿಜೆಪಿ'



ಬೆಂಗಳೂರು: ರಾಜ್ಯಸಭಾ ನಾಲ್ಕು ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಯಶವಂತಪುರ ಕ್ಷೇತ್ರದ ಬಿಜೆಪಿ ಶಾಸಕ ಎಸ್ ಟಿ ಸೋಮಶೇಖರ್ ಅಡ್ಡ ಮತದಾನದ ಮೂಲಕ ಕಾಂಗ್ರೆಸ್ ಅಭ್ಯರ್ಥಿ ಅಜಯ್ ಮಕೇನ್ ಗೆ ಮತ ಹಾಕಿದ್ದು ಹಾಗೂ ಮತದಾನಕ್ಕೆ ಬಾರದೆ ಇರುವ ಎಲ್ಲಾಪುರ ಕ್ಷೇತ್ರದ ಶಾಸಕ ಶಿವರಾಂ ಹೆಬ್ಬಾರ್ ವಿರುದ್ಧ ಇಂದು ಬಿಜೆಪಿ ವಿಧಾನಸಭೆ ಸ್ಪೀಕರ್ಗೆ ದೂರು ಸಲ್ಲಿಸಲಿದೆ ಎಂದು ತಿಳಿದು ಬಂದಿದೆ.


ಇಂದು ವಿಧಾನಸಭೆ ಸ್ಪೀಕರ್ ಗೆ ಬಿಜೆಪಿ ದೂರು ನೀಡಲಿದೆ.ಶಾಸಕ ಸ್ಥಾನದಿಂದ ಸೋಮಶೇಖರ್ ಅನರ್ಹತೆಗೆ ಕೋರಿ ದೂರು ನೀಡಲಿದೆ. ಬಿಜೆಪಿಗೆ ದೂರು ನೀಡಲು ಹದಿನೈದು ದಿನಗಳ ಕಾಲಾವಕಾಶ ಇದೆ. ಬಿಜೆಪಿ ದೂರು ನೀಡಿದ ಬಳಿಕ ಯಾವುದೇ ಕ್ರಮ ವಾಗದಿದ್ದರೆ, ಕೋರ್ಟ್ ಮೊರೆ ಹೋಗಲು ಬಿಜೆಪಿ ಚಿಂತನೆ ನಡೆಸಿದೆ ಎಂದು ತಿಳಿದುಬಂದಿದೆ.

ಪಕ್ಷ ವಿರೋಧಿಯಾಗಿ ಶಾಸಕ ಎಸ್ ಟಿ ಸೋಮಶೇಖರ್ ಅಡ್ಡ ಮತದಾನದ ಮೂಲಕ ರಾಜ್ಯಸಭೆಯ ಕಾಂಗ್ರೆಸ್ ಅಭ್ಯರ್ಥಿ ಅಜಯ್ ಮಾಕೇನಿದೆ ಇಂದು ಮತದಾನ ಚಲಾಯಿಸಿದರು. ಯಲ್ಲಾಪುರ ಕ್ಷೇತ್ರದ ಶಾಸಕ ಶಿವರಾಂ ಹೆಬ್ಬಾರ್ ಕೂಡ ಮತ ಚಲಾಯಿಸದಿರುವುದಕೆ ಬಿಜೆಪಿ ತೀವ್ರ ಆಕ್ರೋಶ ಹೊರಹಾಕಿದೆ. ಈ ಹಿನ್ನಲೆಯಲ್ಲಿ ನಾಳೆ ವಿಧಾನಸಭೆ ಸ್ಪೀಕರ್ಗೆ ದೂರು ಸಲ್ಲಿಸಲಿದೆ.

## ವಿವಾಹಿತ ಮಹಿಳೆ ಆತ್ಮಹತ್ಯೆ: ಪೋಷಕರಿಂದ ವರದಕ್ಷಿಣೆ ಆರೋಪ

ಬೆಂಗಳೂರು: ವಿವಾಹಿತ ಮಹಿಳೆಯೊಬ್ಬಳು ನೇಣು ಬಿಗಿದ ಸ್ಥಿತಿಯಲ್ಲಿ ಸಾವನ್ನಪ್ಪಿದ ಘಟನೆ ಪೀಣ್ಯಾದಲ್ಲಿ ಬೆಳಕಿಗೆ ಬಂದಿದೆ. ಮೃತಳನ್ನು ಚೈತ್ರಾ ಎಂದು ಗುರುತಿಸಲಾಗಿದೆ. ಮೃತ ಚೈತ್ರಾ ಕುಟುಂಬಸ್ಥರು ಈ ಸಾವಿನ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದು, ಅಳಿಯ ಸಂತೋಷನೇ ಕೊಲೆ ಮಾಡಿ ನೇಣು ಹಾಕಿದ್ದಾನೆ ಅಂತ ಆರೋಪಿಸಿದ್ದಾರೆ. ರಾಮನಗರ ಮೂಲದ ಮೃತ ಚೈತ್ರಾ ಐದು ವರ್ಷಗಳ ಹಿಂದೆ ಪೀಣ್ಯಾದಲ್ಲಿ ಕ್ಯಾಬ್ ಡ್ರೈವರ್ ಆಗಿದ್ದ ದೂರದ ಸಂಬಂಧಿ ಸಂತೋಷ್ ನನ್ನ ಪ್ರೀತಿಸಿ ಮದುವೆಯಾಗಿದ್ದಳು. ಅಳಿಯ ವರದಕ್ಷಿಣೆಗಾಗಿ ಮೃತ ಚೈತ್ರಾಗೆ ಹಿಂಸೆ ನೀಡುತ್ತಿದ್ದ. ಇತ್ತೀಚೆಗೆ ಐದು ಲಕ್ಷ ರೂಪಾಯಿ ಸಹ ನೀಡಿದ್ವಿ, ಆದ್ರೂ, ಸುಮ್ಮನಾಗದೇ ಮಗಳಿಗೆ ದೈಹಿಕ ಮಾನಸಿಕವಾಗಿ ಹಿಂಸೆ ನೀಡಿ ಕೊಲೆ ಮಾಡಿದ್ದಾನೆಂದು ಆರೋಪಿಸಿದ್ದಾರೆ. ಸದ್ಯ ಮೃತ ಚೈತ್ರಾ ಕುಟುಂಬಸ್ಥರಿಂದ ಪತಿ ಸಂತೋಷ್ ಹಾಗೂ ಕುಟುಂಬಸ್ಥರ ವಿರುದ್ಧ ಪೀಣ್ಯಾ ಠಾಣೆಯಲ್ಲಿ ದೂರು ದಾಖಲಿಸಿದ್ದು, ಸಂತೋಷ್ ಹಾಗೂ ಆತನ ಮನೆಯವರನ್ನು ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ.

## ಆಳ ಸಮುದ್ರ ಮೀನುಗಾರಿಕೆ: ತಮಿಳುನಾಡಿನ ಮೀನುಗಾರರಿಂದ ಮಂಗಳೂರು ಬೋಟ್ ಗಳ ಮೇಲೆ ದಾಳಿ



ಮಂಗಳೂರು: ಆಳ ಸಮುದ್ರ ಮೀನುಗಾ–ರಿಕೆಯಲ್ಲಿ ರಿಬ್ಬನ್ ಮೀನು ಅಥವಾ ಪಾಂಬೋಲ್ ಮೀನು ಹಿಡಿಯುವುದಕ್ಕೆ ಸಂಬಂಧಿಸಿದಂತೆ ಘರ್ಷಣೆ ಉಂಟಾಗಿರುವುದು ಅಂತಾರಾಜ್ಯ ವಿವಾದಕ್ಕೆ ಕಾರಣವಾಗಿದೆ. ತಮಿಳುನಾಡಿನ ಮೀನುಗಾರರು ಮಂಗಳೂರು ಬೋಟ್ ಗಳ ಮೇಲೆ ದಾಳಿ ನಡೆಸಿದ್ದಾರೆ.

ಮೀನುಗಳ ಸಂಖ್ಯೆ ಕ್ಷೀಣಿಸುತ್ತಿರುವ ಹಿನ್ನೆಲೆಯಲ್ಲಿ, ಊಟಕ್ಕೆ ಬಳಕೆ ಮಾಡುವ ರಿಬನ್ ಮೀನು ಹಿಡಿಯಲು ಆಳ ಸಮುದ್ರದಲ್ಲಿ ಮೀನುಗಾರಿಕೆಗೆ ಮುಂದಾಗುತ್ತೇವೆ. ತಮಿಳುನಾಡಿನಲ್ಲಿ ಮಂಗಳೂ–ರಿನ ಹಲವು ಮೀನುಗಾರರ ಬೋಟ್ ಗಳ ಮೇಲೆ ದಾಳಿ ನಡೆಸಿ ಹಾನಿಗೊಳಿಸಲಾಗಿದೆ. ದೋಣಿಗಳಲ್ಲಿದ್ದ ಮೀನುಗಾರಿಕಾ ಬಲೆಗಳು, ಹಡಗುಗಳು ಮತ್ತು ಇತರ ವಸ್ತುಗಳನ್ನು ಯಾವುದೇ ಪ್ರಚೋದನೆಯಿಲ್ಲದೆ ನೀರಿಗೆ ಎಸೆಯಲಾಯಿತು. ಹಲವು ಮೀನುಗಾ–ರಿಕಾ ದೋಣಿಗಳು ಲಕ್ಷಾಂತರ ರೂಪಾಯಿ ನಷ್ಟ ಅನುಭವಿಸಿವೆ. ಈ ವಿಷಯವನ್ನು ಕೇಂದ್ರ ಮೀನುಗಾರಿಕಾ ಸಚಿವರು ಮತ್ತು ರಾಜ್ಯ ಸಚಿವ ಮಂಕಾಳ್ ವೈದ್ಯ ಅವರ ಗಮನಕ್ಕೆ ತಂದಿದ್ದೇವೆ ಎಂದು ಮೀನುಗಾರ ಮುಖಂಡರಾದ ಚೇತನ್ ಬೆಂಗ್ರೆ ಹೇಳಿದ್ದಾರೆ.

"ತಮಿಳುನಾಡು ಮತ್ತು ಇತರ ರಾಜ್ಯಗಳ ಅನೇಕ ಮೀನುಗಾರರು ನಮ್ಮ ಪ್ರದೇಶದಲ್ಲಿ ಆಳ ಸಮುದ್ರದ ಮೀನುಗಾರಿಕೆಯಲ್ಲಿ ತೊಡಗುತ್ತಾರೆ, ಆದರೆ ನಾವು ಅದನ್ನು ಎಂದಿಗೂ ವಿರೋಧಿಸಲಿಲ್ಲ. 12 ನಾಟಿಕಲ್ ಮೈಲುಗಳ ಆಚೆಗೆ ಯಾವುದೇ ನಿರ್ಬಂಧಗಳಿಲ್ಲ.

ನಾನು ಕೇಂದ್ರ ಮೀನುಗಾರಿಕಾ ಸಚಿವರನ್ನು ಭೇಟಿಯಾದಾಗ, ಅಂತಹ ಸಮಸ್ಯೆಗಳನ್ನು ಪರಿಹ–ರಿಸಲು ಮೀನುಗಾರಿಕೆಗಾಗಿ ಎಲ್ಲಾ ಕರಾವಳಿ ರಾಜ್ಯಗಳಿಗೆ 'ಒಂದು ರಾಷ್ಟ್ರ, ಒಂದು ಕಾನೂನು' ತರಲು ನಾನು ಅವರಿಗೆ ಮನವಿ ಮಾಡಿದ್ದೇನೆ. ಆಳವಾದ ಸಮುದ್ರದಲ್ಲಿ ಯಾವುದೇ ನಿರ್ಬಂಧಗಳನ್ನು ಹೊಂದಿರಬಾರದು, "ಎಂದು ಅವರು ಹೇಳಿದರು. ತಮಿಳುನಾಡು ಮೀನುಗಾರರ ದಾಳಿಯ ನಂತರ ಮಂಗಳೂರಿನ ಬೋಟ್‌ಗಳು ವಿಶೇಷವಾಗಿ ಕನ್ಯಾಕುಮಾರಿ ಮತ್ತು ಇತರ ಸ್ಥಳಗಳಲ್ಲಿ ಆಳ ಸಮುದ್ರಕ್ಕೆ ಇಳಿಯುವುದನ್ನು ನಿಲ್ಲಿಸಿವೆ ಎಂದು ಮೀನುಗಾರಿಕಾ ದೋಣಿ ಮಾಲೀಕರು ತಿಳಿಸಿದ್ದಾರೆ.

"ನವೆಂಬರ್ ಮತ್ತು ಡಿಸೆಂಬರ್‌ನಲ್ಲಿ ಮಂಗಳೂ–ರಿನಿಂದ ಹಲವಾರು ದೋಣಿಗಳ ಮೇಲೆ ದಾಳಿ ನಡೆಸಲಾಗಿತ್ತು.

ಮೀನುಗಾರಿಕೆ ಕ್ಷೀಣಿಸುತ್ತಿರುವ ಕಾರಣ ಮೀನುಗಾರರು ನಷ್ಟಕ್ಕೆ ಒಳಗಾಗಿದ್ದರೂ, ಅವರು ಕೇರಳ ಮತ್ತು ತಮಿಳುನಾಡು ಬಳಿ ಸಮುದ್ರಕ್ಕೆ ಇಳಿಯುತ್ತಿಲ್ಲ ಎಂದು ಅವರು ಹೇಳಿದರು.

ಅನೇಕ ಮೀನುಗಾರಿಕಾ ದೋಣಿ ಮಾಲೀಕರು ದಾಳಿಯ ಬಗ್ಗೆ ಇಲಾಖೆಗೆ ಮಾಹಿತಿ ನೀಡಿದ್ದಾರೆ ಎಂದು ಮಂಗಳೂರಿನ ಮೀನುಗಾರಿಕೆ ಜಂಟಿ ನಿರ್ದೇಶಕ ಸಿದ್ದಯ್ಯ ಡಿ ನ್ಯೂ ಇಂಡಿಂ–ಯನ್ ಎಕ್ಸ್‌ಪ್ರೆಸ್‌ಗೆ ತಿಳಿಸಿದರು. "ಈಗ, ಕರ್ನಾಟಕ ಸರ್ಕಾರ ತಮಿಳುನಾಡು ಸರ್ಕಾರದೊಂದಿಗೆ ಈ ವಿಷಯವನ್ನು ಪ್ರಸ್ತಾಪಿಸಿದೆ. ನಮ್ಮ ದೋಣಿಗಳ ಮೇಲೆ ದಾಳಿ ಮಾಡಿದ ಮೀನುಗಾರರ ವಿರುದ್ಧ ಕ್ರಮ ಕೈಗೊಳ್ಳುವಂತೆ ತಮಿಳುನಾಡು ಪೊಲೀಸರನ್ನು ಒತ್ತಾಯಿಸಿದ್ದೇವೆ.

ಮೀನುಗಾರರ ಹಿತಾಸಕ್ತಿ ಕಾಪಾಡಲು ಕಾನೂನು ರೂಪಿಸಲು ಎಲ್ಲಾ ಕರಾವಳಿ ರಾಜ್ಯಗಳ ಮೀನುಗಾ–ರಿಕೆ ಸಚಿವರು ಮತ್ತು ಮೀನುಗಾರ ಸಂಘದ ಮುಖಂಡರೊಂದಿಗೆ ಸಭೆ ನಡೆಸುವುದಾಗಿ ಮಾಂಕಾಳ್ ವೈದ್ಯ ಭರವಸೆ ನೀಡಿದ್ದಾರೆ," ಎಂದು ಹೇಳಿದರು.

## ಬೆಳಗಾವಿ ಪಾಲಿಕೆ 7 ಲಕ್ಷ ಉಳಿತಾಯ ಬಜೆಟ್ ಮಂಡನೆ



ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆಯ ತೆರಿಗೆ, ಹಣಕಾಸು ಮತ್ತು ಅಪೀಲುಗಳ ಸ್ಥಾಯಿ ಸಮಿತಿ ಅಧ್ಯಕ್ಷೆ ವೀಣಾಜನ ವಿಜಾಪುರೆ ಅವರು ಪಾಲಿಕೆಯ ಪ್ರಸಕ್ತ ಸಾಲಿನ ಬಜೆಟ್ ಮಂಡಿಸಿದ್ದಾರೆ.

ಬೆಳಗಾವಿ ಮಹಾನಗರ ಪಾಲಿಕೆಯ ಬಜೆಟ್ ಗಾತ್ರ, 436 ಕೋಟಿ 53.63 ಲಕ್ಷ ರೂ. ಮೊತ್ತದ ಉಳಿತಾಯದ ಬಜೆಟ್ ಮಂಡಿಸಿದ್ದು ವಿರೋಧ ಪಕ್ಷದ ನಗರ ಸೇವಕರ ಗದ್ದಲ ಗಲಾಟೆಯ ನಡುವೆ ಮೇಯರ್ ಸವಿತಾ ಕಾಂಬಳೆ ಅವರು ಬಜೆಟ್ ಗೆ ಅನುಮೋದನೆ ನೀಡಿದ್ದಾರೆ.ಬಜೆಟ್ ಪೂರ್ವದಲ್ಲಿ ವಿರೋಧ ಪಕ್ಷದ ನಗರ ಸೇವಕರನ್ನು ವಿಶ್ವಾಸಕ್ಕೆ ತೆಗೆದುಕೊಂಡಿಲ್ಲ ಎಂದು ಬಜೆಟ್ ಮಂಡನೆಯ ಸಮಯದಲ್ಲಿ ವಿರೋಧ ಪಕ್ಷದವರು ಗದ್ದಲ ಮಾಡಿದ ಪ್ರಸಂಗ ನಡೆಯಿತು. ಪ್ರಸಕ್ತ ವರ್ಷದಲ್ಲಿ 436 ಕೋಟಿ 53.63 ಲಕ್ಷ ರೂ. ಅಂ–ದಾಜು ವೆಚ್ಚ ಭರಿಸಲು ನಿರೀಕ್ಷಿಸಲಾಗಿದೆ. ಅದೇ ರೀತಿ 7.72 ಲಕ್ಷ ರೂ. ಉಳಿತಾಯ ಆಯವ್ಯಯ ಮಂಡಿಸಲಾಗಿದೆ. ರಾಜ್ಯ ಸರ್ಕಾರದಿಂದ ಬಿಡುಗಡೆಯಾಗುವ ಎಸ್.ಎಫ್.ಸಿ. ವೇತನ ಅನುದಾನವನ್ನು ಅಧಿಕಾರಿ/ಸಿಬ್ಬಂದಿಗಳ ವೇತನಕ್ಕೆ ಬಳಕೆ,ಬೆಳಗಾವಿ ನಗರ ಸ್ವಚ್ಛವಾಗಿಡಲು ಹೊರ ಗುತ್ತಿಗೆ ಸ್ವಚ್ಛತಾ ವೆಚ್ಚಕ್ಕಾಗಿ 28 ಕೋಟಿ. ರೂ. ಮೀಸಲಿಡಲಾಗಿದೆ.ನೇರ ನೇಮಕಾತಿ ಹೊಂದಿದ ಪೌರ ಕಾರ್ಮಿಕರ ವೇತನಕ್ಕಾಗಿ 18 ಕೋಟಿ ರೂ. ಕಾಯ್ದಿ–ರಿಸಲಾಗಿದೆ.ವೈಜ್ಞಾನಿಕ ಘನತ್ಯಾಜ್ಯ ವಿಲೇವಾರಿಗೆ 4 ಕೋಟಿ ನೀಡಲಾಗಿದ್ದು ಬೀದಿ ದೀಪಗಳ ನಿರ್ವಹಣೆಗೆ 2.5 ಕೋಟಿ ಅನುದಾನ ಮೀಸಲಿದೆ.

ರಸ್ತೆ, ಚರಂಡಿ, ಪಾದಾಚಾರಿ, ಮಳೆ ನೀರು ನಿರ್ವಹಣೆ, ರಸ್ತೆಗಳ ಮಾರ್ಗಸೂಚಿ ಅಳವಡಿಸಲು 10.5 ಕೋಟಿ ನಿಗದಿ ಪಡಿಸಲಾಗಿದೆ.ಬೀದಿ ನಾಯಿಗಳ ನಿರ್ವಹಣೆಗೆ 1.10 ಕೋಟಿ ನಿಗದಿಯಾಗಿದೆ.

ಈ ಬಜೆಟ್ ವಿಶೇಷತೆ ಏನೆಂದರೆ, ಬೆಳಗಾವಿ ಮಹಾನಗರ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು 25 ಲಕ್ಷ ರೂ ನಿಗದಿ ಮಾಡಲಾಗಿದ್ದು,ನಗರ ಸೇವಕರ ಅಧ್ಯಯನ ಪ್ರವಾಸಕ್ಕಾಗಿ 30 ಲಕ್ಷ ಮೀಸಲಿಡಲಾಗಿದೆ. ಮಹಾನಗರ ಪಾಲಿಕೆ ಬೆಳಗಾವಿ ನಗರದಲ್ಲಿ ಕುಡಿಯುವ ನೀರು ಸರಬರಾಜು, ತೆರೆದ ಭಾವಿಗಳ ಅಭಿವೃದ್ಧಿಗೆ ಕೇವಲ 25 ಲಕ್ಷ ನಿಗದಿಪಡಿಸಲಾಗಿದೆ. ಭಾವಿಗಳ ಅಭಿವೃದ್ಧಿಗಿಂತ ಇವ–ರಿಗೆ ಅಧ್ಯಯನ ಪ್ರವಾಸಕ್ಕೆ ಹೆಚ್ಚು ಅನುದಾನ ನಿಗದಿಯಾಗಿದೆ. ಬೆಳಗಾವಿ ಮಹಾನಗರದಲ್ಲಿ ಬೀದಿ ನಾಯಿಗಳ ಸಂತಾನ ಹರಣ ಚಿಕಿತ್ಸೆಗಾಗಿ ಕೋಟಿ,ಕೋಟಿ ಹಣ ಖರ್ಚಾದರೂ ಸಹ ಬೀದಿ ನಾಯಿಗಳ ಸಂಖ್ಯೆ ಪ್ರತಿ ವರ್ಷ ಹೆಚ್ಚಾಗುತ್ತಲೇ ಇದೆ. ಈ ವರ್ಷದ ಬಜೆಟ್ ನಲ್ಲಿ ಬೀದಿ ನಾಯಿಗಳ ನಿರ್ವಹಣೆಗಾಗಿ ಒಂದು ಕೋಟಿ ಹತ್ತು ಲಕ್ಷ ರೂ ನಿಗದಿ ಮಾಡಲಾಗಿದೆ.

## ಗಗನಯಾನ ಯೋಜನೆಗೆ ನಾಲ್ವರು ಯಾತ್ರಿಗಳ ಹೆಸರು ಘೋಷಿಸಿದ ಮೋದಿ



ನವದೆಹಲಿ: ಭಾರತದ ಮೊದಲ ಮಾನವಸಹಿತ ಬಾಹ್ಯಾಕಾಶ ಮಿಷನ್ 'ಗಗನಯಾನ'ಕ್ಕೆ ನಾಲ್ವರು ಪೈಲಟ್ ಗಳ ಹೆಸರನ್ನು ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ಘೋಷಿಸಿದ್ದಾರೆ.

ಕೇರಳದ ತಿರುವನಂತಪುರಂನ ವಿಕ್ರಮ್ ಸಾರಾಭಾಯ್ ಬಾಹ್ಯಾಕಾಶ ಕೇಂದ್ರದಲ್ಲಿ (ವಿಎಸ್ಎಸ್ಸಿ) ಗ್ರೂಪ್ ಕ್ಯಾಪ್ಟನ್ ಪಿ ಬಾಲಕೃಷ್ಣನ್ ನಾಯರ್, ಗ್ರೂಪ್ ಕ್ಯಾಪ್ಟನ್ ಅಜಿತ್ ಕೃಷ್ಣನ್, ಗ್ರೂಪ್ ಕ್ಯಾಪ್ಟನ್ ಅಂಗದ್ ಪ್ರತಾಪ್ ಮತ್ತು ವಿಂಗ್ ಕಮಾಂಡರ್ ಎಸ್ ಶುಕ್ಲಾ ಅವರು ಪೈಲಟ್ ಗಳಾಗಿದ್ದಾರೆ.

ಕೇರಳ ಪ್ರವಾಸದಲ್ಲಿರುವ ಪ್ರಧಾನಿ ಮೋದಿ ಅವರು ಕೇರಳದ ತಿರುವನಂತಪುರಂನಲ್ಲಿರುವ ವಿಕ್ರಮ್ ಸಾರಾಭಾಯ್ ಬಾಹ್ಯಾಕಾಶ ಕೇಂದ್ರಕ್ಕೆ (ವಿಎಸ್ಎಸ್ಸಿ) ಭೇಟಿ ನೀಡಿದರು, ಅಲ್ಲಿ ಅವರು ಗಗನಯಾನ ಮಿಷನ್ನ ಪ್ರಗತಿಯನ್ನು ಪರಿಶೀಲಿಸಿದರು.

"ಪ್ರಧಾನಿ ಮೋದಿ ವಿಕ್ರಮ್ ಸಾರಾಭಾಯ್ ಬಾಹ್ಯಾಕಾಶ ಕೇಂದ್ರಕ್ಕೆ ಭೇಟಿ ನೀಡುತ್ತಿರುವುದು ನಮಗೆಲ್ಲರಿಗೂ ಬಹಳ ಸಂತೋಷದ ಸಂದರ್ಭವಾಗಿದೆ" ಎಂದು ಇಸ್ರೋ ಅಧ್ಯಕ್ಷ ಎಸ್ ಸೋಮನಾಥ್ ಹೇಳಿದರು.

ಗಗನಯಾನ ಮಿಷನ್ ಭಾರತದ ಮೊದಲ ಮಾನವಸಹಿತ ಬಾಹ್ಯಾಕಾಶ ಕಾರ್ಯಾಚರಣೆಯಾಗಿದ್ದು, 2024–2025 ರ ನಡುವೆ ಉಡಾವಣೆಯ ಗುರಿಯನ್ನು ಹೊಂದಿದೆ. ಇಸ್ರೋ ಮುಂದಿನ ಗುರಿಗಳಲ್ಲಿ ಮೊದಲನೆಯದು ಗಗನಯಾನ ಯೋಜನೆ. ಮನುಷ್ಯರನ್ನು ಬಾಹ್ಯಾಕಾಶಕ್ಕೆ ಕಳುಹಿಸುವುದು ಮತ್ತು ಸುರಕ್ಷಿತವಾಗಿ ಭೂಮಿಗೆ ಕರೆತರುವುದು ಇಸ್ರೋದ ಮೊದಲ ಆದ್ಯತೆ ಆಗಿದೆ.

# ರಾಜ್ಯಸಭೆ ಚುನಾವಣೆ: 4 ಸ್ಥಾನಗಳಲ್ಲಿ ಕೈಗೆ 3, ಕಮಲಕ್ಕೆ 1 ಗೆಲುವು

ಬೆಂಗಳೂರು: ರಾಜ್ಯಸಭೆ ಚುನಾವಣೆ ಮತದಾನ ಮುಕ್ತಾಯಗೊಂಡಿದೆ. ನಾಲ್ಕು ಸ್ಥಾನಗಳಿಗೆ ನಡೆದ ಚುನಾವಣೆಯಲ್ಲಿ ಕಾಂಗ್ರೆಸ್‌ನಿಂದ ಸ್ಪರ್ಧಿಸಿದ್ದ ಮೂರು ಅಭ್ಯರ್ಥಿಗಳು ಗೆಲುವು ಸಾಧಿಸಿದ್ದು, ಬಿಜೆಪಿಯಿಂದ ಅಖಾಡಕ್ಕೆ ಇಳಿದಿದ್ದ ಓರ್ವ ಅಭ್ಯರ್ಥಿಗೆ ಗೆಲುವಾಗಿದೆ.

ಇನ್ನು ಚುನಾವಣೆಯಲ್ಲಿ ಬಿಜೆಪಿ ಶಾಸಕರಾದ ಎಸ್ ಟಿ ಸೋಮಶೇಖರ್ ಅಡ್ಡ ಮತದಾನ ಮಾಡಿದರೆ ಮತ್ತೋರ್ವ ಶಾಸಕ ಶಿವರಾಂ ಹೆಬ್ಬಾರ್ ಗೈರಾಗಿದ್ದಾರೆ. ಈ ಮೂಲಕ ನಿರೀಕ್ಷೆಯಂತೆ ಮೈತ್ರಿ ಅಭ್ಯರ್ಥಿ ಕುಪೇಂದ್ರ ರೆಡ್ಡಿಗೆ ಸೋಲಾಗಿದೆ.

ಬೆಳಗ್ಗೆ 9 ಗಂಟೆಗೆ ಮತದಾನ ಆರಂಭಗೊಂಡಿತ್ತು. ಕಾಂಗ್ರೆಸ್ 134 ಸದಸ್ಯರು ಬಂದು ಮತದಾನ ಮಾಡಿದರು. ಜೊತೆಗೆ ನಾಲ್ವರು ಪಕ್ಷೇತರ ಶಾಸಕರು ಕೂಡಾ ಕಾಂಗ್ರೆಸ್ ಗೆ ಮತ ಚಲಾಯಿಸಿದ್ದಾರೆ. ಇನ್ನು ಬಿಜೆಪಿ ಅಸಮಾಧಾನಿತ ಶಾಸಕ ಎಸ್ ಟಿ ಸೋಮಶೇಖರ್ ಅಡ್ಡ ಮತದಾನ ಮಾಡಿದ್ದಾರೆ ಎಂದು ತಿಳಿದುಬಂದಿದೆ. ಮತ್ತೋರ್ವ ಶಾಸಕ ಶಿವರಾಂ ಹೆಬ್ಬಾರ್ ಮತದಾನ ಮಾಡಲು ಆಗಮಿಸಲಿಲ್ಲ. ಇಬ್ಬರು ಶಾಸಕರ ನಡೆ ಬಿಜೆಪಿಗೆ ಮುಜುಗರ ಉಂಟು ಮಾಡಿದೆ.

ಯಾರಿಗೆ ಎಷ್ಟು ಮತ? ಚುನಾವಣೆಯಲ್ಲಿ ಸ್ಪರ್ಧಿಸಿದ್ದ ಕಾಂಗ್ರೆಸ್ ಅಭ್ಯರ್ಥಿಗಳ ಪೈಕಿ ಅಜಯ್ ಮಕನ್ ಗೆ 47, ಸೈಯದ್ ನಾಸೆರ್ ಹುಸೇನ್ ಗೆ 47 ಹಾಗೂ ಜಿ.ಸಿ ಚಂದ್ರಶೇಖರ್ ಗೆ 45 ಮತಗಳು ಬಿದ್ದಿವೆ. ಇನ್ನು ಬಿಜೆಪಿ ಅಭ್ಯರ್ಥಿ ನಾರಾಯಣ ಸಾ ಭಾಂಡಗೆಗೆ 48 ಮತಗಳು ಬಿದ್ದಿದ್ದು ಮೈತ್ರಿ ಅಭ್ಯರ್ಥಿ ಕುಪೇಂದ್ರ ರೆಡ್ಡಿಗೆ 35 ಮತಗಳು ಸಿಕ್ಕಿವೆ.

ಮತದಾನ 4 ಗಂಟೆಗೆ ಮುಕ್ತಾಯಗೊಳ್ಳಲಿದೆ. ಬಳಿಕ ಮತ ಎಣಿಕೆ ನಡೆಯಲಿದ್ದು ಅಧಿಕೃತ ಫಲಿತಾಂಶವನ್ನು ಚುನಾವಣಾಧಿಕಾರಿಗಳು ಘೋಷಣೆ ಮಾಡಲಿದ್ದಾರೆ.

ಎಸ್ ಟಿ ಸೋಮಶೇಖರ್ ವಿರುದ್ಧ ಬಿಜೆಪಿ ಜೆಡಿಎಸ್ ಪ್ರತಿಭಟನೆ: ಪಕ್ಷದ ವಿರುದ್ಧ ಮತಚಲಾಯಿಸಿದ ಶಾಸಕ ಎಸ್.ಟಿ. ಸೋಮಶೇಖರ್ ವಿರುದ್ಧ ಬಿಜೆಪಿ ಕಾರ್ಯಕರ್ತರು ಯಶವಂತಪುರ ಬಿಜೆಪಿ ಮಂಡಲ



ಕಚೇರಿ ಬಳಿ ಪ್ರತಿಭಟನೆ ನಡೆಸಲಿದರು. ಜೆಡಿಎಸ್ ಕಾರ್ಯಕರ್ತರು ಬುಧವಾರ ಪಕ್ಷದ ಕಚೇರಿಯಲ್ಲಿ ಪ್ರತಿಭಟನೆ ಹಮ್ಮಿಕೊಂಡಿದ್ದಾರೆ.

ಕಾಂಗ್ರೆಸ್ ಅಭ್ಯರ್ಥಿಗಳಿಗೆ 47+47+45 ಮತಗಳು– ಡಿಕೆಶಿ: ರಾಜ್ಯಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷದ ಮೂವರು ಅಭ್ಯರ್ಥಿಗಳಿಗೆ ತಲಾ 47+47+ 45 ಮತಗಳು ಬಂದಿವೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಹೇಳಿದರು. ವಿಧಾನಸೌಧದಲ್ಲಿ ಮಂಗಳವಾರ ಮಾತನಾಡಿದ ಅವರು, ಬಜೆಪಿ ಅಭ್ಯರ್ಥಿಗೆ 48 ಮತಗಳನ್ನು ಹಾಕಲಾಗಿದೆ ಎಂದು ಹೇಳಿದರು.

ಇನ್ನು ಎಸ್ ಟಿ ಸೋಮಶೇಖರ್ ಅಡ್ಡಮತದಾನದ ವಿಚಾರವಾಗಿ, ಎಸ್ ಟಿ ಸೋಮಶೇಖರ್ ಅಡ್ಡ ಮತದಾನ ಹಾಕಿದ ಬಗ್ಗೆ ಅವರನ್ನೇ ಕೇಳಬೇಕು. ಅಡ್ಡ ಮತದಾನ ಎಲ್ಲಿಯಾಗಿದೆ? ನನ್ನ ಮತದಾನ ಮಾತ್ರ ನಾನು ನೋಡಿದ್ದೇನೆ. ಫಲಿತಾಂಶ ಬರಲಿ, ಗೊತ್ತಾಗುತ್ತದೆ ಎಂದರು. ಅಡ್ಡ ಮತದಾನದ ಹಿನ್ನಲೆಯಲ್ಲಿ ಎಸ್ ಟಿ ಸೋಮಶೇಖರ್ ಮೇಲೆ ಕ್ರಮ ತೆಗೆದುಕೊಳ್ಳುವ ಬಗ್ಗೆ ಗೊತ್ತಿಲ್ಲ.

ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿ ಎಷ್ಟು ಸರಿಯಿದೆ? ಶಾಸಕರು ಎಲ್ಲ ಒಪ್ಪಬೇಕಲ್ಲ. ಶಾಸಕರ ಒಪ್ಪಿಗೆ ಇದ್ರೆ ಮತ ಹಾಕಬೇಕಲ್ಲ ಎಂದರು.

ಬಿಜೆಪಿ ಅಭ್ಯರ್ಥಿ 48 ಮತ ಹಾಕಿಸಿಕೊಂಡಿದ್ದಾರೆ.ಜೆಡಿಎಸ್ ಗೆ ಮತ ಹಾಕದೆ ಕೈಬಿಟ್ಟಿದ್ದಾರೆ. ಶಿವರಾಮ ಹೆಬ್ಬಾರ್ ಮತದ ಬಗ್ಗೆ ಗೊತ್ತಿಲ್ಲ ಎಂದ ಅವರು ಎನ್ ಡಿ ಎ ಮೈತ್ರಿ ಅಭ್ಯರ್ಥಿಗೆ 35 ಮತಗಳು ಬಂದಿವೆ ಎಂದು ತಿಳಿಸಿದರು. ನಿಮ್ಮ ಪಕ್ಷಕ್ಕೆ ಆತ್ಮಸಾಕ್ಷಿ ಮತ ಬಂದಿದ್ದರೆ ಆ ಶಾಸಕರಿಗೆ ಕಾನೂನಾತ್ಮಕವಾಗಿ ಎದುರಾಗುವ ಸಮಸ್ಯೆಗೆ ರಕ್ಷಣೆ ಇರುತ್ತದೆಯೇ ಎಂದು ಕೇಳಿದಾಗ, ಸಮಯ ಬರಲಿ, ಮಾತನಾಡೋಣ. ಈಗಲೇ ಎಲ್ಲವೂ ಬೇಡ. ಅಡ್ಡಮತದಾನದ ಬಗ್ಗೆ ಸ್ಪೀಕರ್ ಗೆ ದೂರಿನ ವಿಚಾರವೂ ನನಗೆ ಗೊತ್ತಿಲ್ಲ. ಸೋಮಶೇಖರ್ ಅವರು ಅವರ ಆತ್ಮಸಾಕ್ಷಿಗೆ ತಕ್ಕಂತೆ ಮತ ಹಾಕಿದ್ದಾರೆ. ಈ ಚುನಾವಣೆ ಮೈತ್ರಿ ಸರಿಯೋ? ಸರಿಯಲ್ಲವೋ? ಎಂಬ ವಿಚಾರಕ್ಕೆ ಸಂಬಂಧಿಸಿದೆ. ಬಿಜೆಪಿ ಹಾಗೂ ಜೆಡಿಎಸ್ ಮೈತ್ರಿಯನ್ನು ಮತದಾರರು, ಶಾಸಕರು, ಪದವೀಧರರು, ಶಿಕ್ಷಕರು ಒಪ್ಪಬೇಕು. ಶಿಕ್ಷಕರು ಈಗಾಗಲೇ ತಿರಸ್ಕರಿಸಿದ್ದು, ಶಾಸಕರು ಯಾವ ನಿರ್ಧಾರ ತೆಗೆದುಕೊಂಡಿದ್ದಾರೆ ನೋಡೋಣ ಎಂದರು. ಸೋಲು ಗೆಲುವು ಮುಖ್ಯವಲ್ಲ, ನಮ್ಮ ಶಾಸಕರನ್ನು ಹಿಡಿದಿಟ್ಟುಕೊಳ್ಳುವ ಪ್ರಯತ್ನ ಮಾಡಿದ್ದೇವೆ ಎಂಬ ಕುಮಾರಸ್ವಾಮಿ ಅವರ ಹೇಳಿಕೆ ಬಗ್ಗೆ ಕೇಳಿದಾಗ, ನಮ್ಮ ಸಂಖ್ಯಾಬಲ ಸ್ವಲ್ಪ ಹೆಚ್ಚು ಕಮ್ಮಿ ಆಗಿದ್ದರೆ ಏನಾಗುತ್ತಿತ್ತು ಅಂತಾ ನಮಗೆ ಗೊತ್ತಿದೆ. ನಾವಾಗಿರುವುದಕ್ಕೆ ಸುಮ್ಮನೆ ಇದ್ದೇವೆ. ಈ ವಿಚಾರವಾಗಿ ಹೆಚ್ಚು ಮಾತನಾಡುವುದಿಲ್ಲ ಎಂದು ತಿಳಿಸಿದರು.

## ವಿಎಸ್ಕೆ ವಿವಿ: ಫೆ.28 ರಿಂದ ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನ

ಬಳ್ಳಾರಿ: ಇಲ್ಲಿಯ ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಸಮಾಜ ವಿಜ್ಞಾನ ನಿಕಾಯದ ವತಿಯಿಂದ 'ಸಮಾಜ ವಿಜ್ಞಾನದಲ್ಲಿ ಬಹುಶಿಸ್ತೀಯ ಪ್ರಚಲಿತ ಸಂಶೋಧನೆಗಳು' ಎಂಬ ವಿಷಯದ ಕುರಿತು ಎರಡು ದಿನಗಳ ಅಂತಾರಾಷ್ಟ್ರೀಯ ಸಮ್ಮೇಳನವನ್ನು ಫೆ.28 ಮತ್ತು 29 ರಂದು ವಿವಿಯ ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ವಿಶ್ವವಿದ್ಯಾಲಯದ ಸಮಾಜ ವಿಜ್ಞಾನ ನಿಕಾಯದ ವಿಭಾಗಗಳಾದ ಇತಿಹಾಸ ಮತ್ತು ಪುರಾತತ್ವಶಾಸ್ತ್ರ, ಸಮಾಜಕಾರ್ಯ, ಅರ್ಥಶಾಸ್ತ್ರ, ಸಮಾಜಶಾಸ್ತ್ರ, ರಾಜ್ಯಶಾಸ್ತ್ರ, ಮಹಿಳಾ ಅಧ್ಯಯನ, ಕಾನೂನು ವಿಭಾಗ, ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನ ವಿಭಾಗ, ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗಗಳ ಜಂಟಿ ಸಹಭಾಗಿತ್ವದಲ್ಲಿ ಎರಡು ದಿನಗಳ ಸಮ್ಮೇಳನ ನಡೆಯಲಿದೆ.

ಫೆ.28 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿಯ ಕೇಂದ್ರೀಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಬಟ್ಟು ಸತ್ಯನಾರಾಯಣ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಕೊಡಗು ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ.ಅಶೋಕ್ ಆಲೂರ್ ಸಮ್ಮೇಳನದ ಮುಖ್ಯ ಭಾಷಣ ಮಾಡುವರು.

ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಡಾ.ಅನಂತ್ ಝುಂಡೇಕರ್ ಅವರು ಅಧ್ಯಕ್ಷತೆ ವಹಿಸುವರು.

ಕುಲಸಚಿವರಾದ ರುದ್ರೇಶ್.ಎಸ್.ಎನ್, ಕುಲಸಚಿವರು (ಮೌಲ್ಯಮಾಪನ) ಪ್ರೊ. ರಮೇಶ್ ಓಲೇಕಾರ್, ವಿತ್ತಾಧಿಕಾರಿ ಪ್ರೊ. ಸದ್ಯೋಜಾತಪ್ಪ ಸೇರಿದಂತೆ ವಿವಿಧ ವಿಭಾಗದ ಮುಖ್ಯಸ್ಥರು, ಡೀನರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿರುವರು. ವಿದೇಶ ಹಾಗೂ ದೇಶದ ಹಲವು ರಾಜ್ಯಗಳ ನೂರಕ್ಕೂ ಹೆಚ್ಚು ಪ್ರತಿನಿಧಿಗಳು ಸಮ್ಮೇಳನದಲ್ಲಿ ಭಾಗವಹಿಸಿ ತಮ್ಮ ಸಂಶೋಧನಾ ಪಾಂಡಿತ್ಯದ ಕುರಿತು ಪ್ರಬಂಧ ಮಂಡಿಸುವರು. ಸಮ್ಮೇಳನದಲ್ಲಿ ಭಾಗವಹಿಸಲು ಇಚ್ಛಿಸುವವರಿಗೆ ಸಮ್ಮೇಳನದಂದು ನೇರ ನೋಂದಣಿಗೆ ಅವಕಾಶ ಇದೆ ಎಂದು ಸಮ್ಮೇಳನದ ಸಂಚಾಲಕರಾದ ಪ್ರೊ. ಗೌರಿ ಮಾಣಿಕ್ ಮಾನಸ ಹಾಗೂ ಪ್ರೊ.ತಿಪ್ಪೇಸ್ವಾಮಿ ಹೆಚ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅನುದಾನ ಕೊಟ್ಟವರಿಗೆ ಮೊದಲ ಪ್ರಾಶಸ್ತ್ಯದ ಮತ ಎಂದ ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್



ಬೆಂಗಳೂರು: ರಾಜ್ಯಸಭಾ ಚುನಾವಣಾ ಮತದಾನ ಪ್ರಕ್ರಿಯೆ ಚುರುಕುಗೊಂಡಿದೆ. ಈ ನಡುವೆ ಬಿಜೆಪಿ ಶಾಸಕ ಎಸ್.ಟಿ.ಸೋಮಶೇಖರ್ ಮತದಾನದ ಬಗ್ಗೆ ಪ್ರತಿಕ್ರಿಯಿಸಿದ್ದು, ಅನುದಾನ ಕೊಟ್ಟವರಿಗೆ ನನ್ನ ಮೊದಲ ಪ್ರಾಶಸ್ತ್ಯದ ಮತ ಎಂದು ಹೇಳುವ ಮೂಲಕ ಅಚ್ಚರಿ ಮೂಡಿಸಿದ್ದಾರೆ. ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಶಾಸಕ ಎಸ್.ಟಿ.ಸೋಮಶೇಖರ್, ನಾನು ಯಾವ ಲೀಡರ್ ಗಳನ್ನೂ ಭೇಟಿಯಾಗಿಲ್ಲ. ಯಾರು ನನ್ನ ಕ್ಷೇತ್ರಕ್ಕೆ ಅನುದಾನ ಕೊಡುತ್ತೇನೆ. ಅಭಿವೃದ್ಧಿಗೆ ಸಹಕಾರ ನೀಡುವುದಾಗಿ ಗಟ್ಟಿಯಾಗಿ ಪ್ರಾಮಿಸ್ ಮಾಡ್ತಾರೆ ಅವರಿಗೆ ನನ್ನ ಮತ. ಏನಾದ್ರೂ ಆಗಲಿ ಆತ್ಮಸಾಕ್ಷಿಗೆ ಮತ ಹಾಕುತ್ತೇನೆ ಎಂದು ಹೇಳಿದ್ದಾರೆ. ಅನುದಾನ ಕೊಟ್ಟವರಿಗೆ ಮೊದಲ ಪ್ರಾಶಸ್ತ್ಯದ ವೋಟ್. ಕಳೆದ 6 ವರ್ಷಗಳಿಂದ ಇದೆಲ್ಲವನ್ನೂ ನೋಡುತ್ತಿದ್ದೇನೆ. ಎಲ್ಲರೂ ಅನುದಾನ ಕೊಡುತ್ತೇವೆ ಎಂದು ಹೇಳುತ್ತಿದ್ದಾರೆ ಹೊರತು ಯಾರೊಬ್ಬರೂ ಕ್ಷೇತ್ರಕ್ಕೆ ಅನುದಾನ ಕೊಟ್ಟಿಲ್ಲ. ಹಾಗಾಗಿ ಈ ಬಾರಿ ಬಿಜೆಪಿ, ಕಾಂಗ್ರೆಸ್, ಜೆಡಿಎಸ್ ಯಾರೇ ಆಗಲಿ ಯಾರು ನನ್ನ ಕ್ಷೇತ್ರಕ್ಕೆ ಅನುದಾನ ಕೊಡುವುದಾಗಿ ಭರವಸೆ ಕೊಡುತ್ತಾರೋ ಅವರಿಗೆ ನನ್ನ ವೋಟ್ ಇದರಲ್ಲಿ ಮುಚ್ಚುಮರೆ ಇಲ್ಲ ಎಂದು ತಿಳಿಸಿದ್ದಾರೆ.

## ಮತದಾನ ನಮ್ಮ ಸಂವಿಧಾನ ಹಕ್ಕು: ಬಸವರಾಜ್ ಹೆಗ್ಗನಾಯಕ್

ಧಾರವಾಡ: ಮತದಾನ ನಮ್ಮ ಸಂವಿಧಾನ ಹಕ್ಕು. ಎಲ್ಲರೂ ತಪ್ಪದೇ ಮತದಾನ ಮಾಡುವ ಮೂಲಕ ತಮ್ಮ ಹಕ್ಕನ್ನು ಚಲಾಯಿಸಬೇಕು ಎಂದು ಜಿಲ್ಲಾ ಪಂಚಾಯತ ಯೋಜನಾ ನಿರ್ದೇಶಕರಾದ ಬಸವರಾಜ್ ಹೆಗ್ಗನಾಯಕ್ ಹೇಳಿದರು.

ಜಿಲ್ಲಾ ಸ್ವೀಪ ಸಮಿತಿ, ಅಂಜುಮನ್ ಪದವಿ ಮಹಾವಿದ್ಯಾಲಯದ ಚುನಾವಣಾ ಸಾಕ್ಷರತಾ ಕ್ಲಬ್, ಸನ್ನಿಧಿ ಮಹಿಳಾ ಮಂಡಳ, ರೈನ್ಸ್ ಕ್ಲಬ್ ಧಾರವಾಡ, ಗ್ಯಾಲಕ್ಸಿ ಮತ್ತು ಎಂ.ಎಂ. ಜೋಶಿ ನೇತ್ರ ಸಂಸ್ಥೆ ಇವುಗಳ ಸಂಯುಕ್ತಾಶ್ರಯದಲ್ಲಿ ಉಚಿತ ಕಣ್ಣಿನ ತಪಾಸಣೆ ಕಾರ್ಯಕ್ರಮದಲ್ಲಿ ಮತದಾರರ ಜಾಗೃತಿ ಮತ್ತು ಮತದಾನದ ಮಹತ್ವ ಬಗ್ಗೆ ಅರಿವು ಮೂಡಿಸಿ, ಅವರು ಮಾತನಾಡಿದರು.




ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರಜೆಗಳೆ ಪ್ರಭುಗಳಾಗಿದ್ದು, ಸಕ್ರಿಯವಾಗಿ ಸೂಕ್ತ ವ್ಯಕ್ತಿಗೆ ಮತ ಚಲಾಯಿಸುವ ಮೂಲಕ ದೇಶದ ಅಭಿವೃದ್ಧಿಯಲ್ಲಿ ಪಾಲುದಾರರಾಗಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ನಂದಾ ಗುಳೇದಗುಡ್ಡ, ಡಾಕ್ಟರ್ ಎಸ್.ವೈ.ಸರಗಿರೋ, ಕೈರುದ್ದೀನ್ ಶೇಖ, ಅಬ್ದುಲ್ ಅಜಿತ್ ಬಡಬಡೆ, ಡಾಕ್ಟರ್ ಮುಕಾಂತರ, ಡಾಕ್ಟರ್ ನಾಗರಾಜ್ ಗುದಗನವರ, ಡಾ.ಎಸ್.ವೈ.ಶೇಖ್, ಗಿರೀಶ್ ಸಾಲುಂಕೆ, ಸನ್ನಿಧಿ ಮಹಿಳಾ ಮಂಡಲ ಸದಸ್ಯರು, ಲಯನ್ಸ್ ಕ್ಲಬ್ ಧಾರವಾಡ ಗ್ಯಾಲಕ್ಸಿ ಸದಸ್ಯರು, ಅಂಜುಮನ್ ಪದವಿ ಮಹಾವಿದ್ಯಾಲಯದ ಸಿಬ್ಬಂದಿ ಮತ್ತು ಇತರರು ಭಾಗವಹಿಸಿದ್ದರು.

## ಎನ್.ಜಿ.ಓಗಳ ಅಧಿಕಾರೇತರ ಸದಸ್ಯ ನೇಮಕಾತಿಗಾಗಿ ಅರ್ಜಿ ಆಹ್ವಾನ

ಧಾರವಾಡ: ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ (ದೌರ್ಜನ್ಯ ನಿಯಂತ್ರಣ) ನಿಯಮಗಳು 1995 ರ ಅಉಪನಿಯಮ 17(ಎ) ರತ್ಯಾ ಉಪ ವಿಭಾಗಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ರಚಿಸಲು ಸರ್ಕಾರದಿಂದ ಆದೇಶಿಸಲಾಗಿದ್ದು, ಸದರಿ ಸಮಿತಿಯಲ್ಲಿ ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರದ 2 ಎನ್.ಜಿ.ಓ ಗಳ ಅಧಿಕಾರೇತರ ಸದಸ್ಯರುಗಳನ್ನು ನೇಮಕ ಮಾಡಲು ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಸಮುದಾಯದ ಸರ್ವತೋಮುಖ ಅಭಿವೃದ್ಧಿಗಾಗಿ ಶ್ರಮಿಸಿದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡೇತರ ಎನ್.ಜಿ.ಓ ಗಳ ಆಸಕ್ತ ಸದಸ್ಯರು ನಿಗಧಿತ ನಮೂನೆಯ ಅರ್ಜಿಯನ್ನು ಪಡೆದು, ಧಾರವಾಡದ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗೆ ಮಾರ್ಚ್ 7, 2024 ರ ಸಂಜೆ 5:30 ರೊಳಗಾಗಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ. 0836-2440194 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




## ಮತ ಚಲಾಯಿಸಿದ ಶಾಸಕ ಬಾಲಚಂದ್ರ ಜಾರಕಿಹೊಳಿ

ಬೆಂಗಳೂರು: ರಾಜ್ಯ ಸಭೆಯ ಚುನಾವಣೆಯಲ್ಲಿ ಅರಭಾವಿ ಬಿಜೆಪಿ ಶಾಸಕ ಬಾಲಚಂದ್ರ ಜಾರಕಿಹೊಳಿಯವರು ಮಂಗಳವಾರದಂದು ಮತದಾನ ಮಾಡಿದರು.

ವಿಧಾನಸಭೆಯಲ್ಲಿ ಅವರಿಂದು ಮತದಾನ ಮಾಡಿದರು.

## ವಿವಿಧ ಸಮಸ್ಯೆಗಳ ಪರಿಹಾರಕ್ಕಾಗಿ ಆಗ್ರಹಿಸಿ ಎಸ್‌ಯುಸಿಐ (ಕಮ್ಯೂನಿಸ್ಟ್) ಪಕ್ಷದಿಂದ ಪ್ರತಿಭಟನೆ

ಬೆಳಗಾವಿ: ನಗರ ಸೇರಿದಂತೆ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ನೀಲನಕ್ಷೆಯನ್ನು ತಯಾರಿಸಿ, ಜನರ ಕನಿಷ್ಟ ಮೂಲಭೂತ ಸಮಸ್ಯೆಗಳು ತ್ವರಿತವಾಗಿ ಪರಿಹರಿಸುವಂತೆ ಸೋಷಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ(ಕಮ್ಯುನಿಸ್ಟ್) ಪಕ್ಷದ ನೇತೃತ್ವದಲ್ಲಿ ರೈತರು, ನರೇಗಾ ಕಾರ್ಮಿಕರು ನಗರದಲ್ಲಿ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ, ಪಕ್ಷದ ರಾಜ್ಯ ಸೆಕ್ರೆಟರಿಯೇಟ್ ಸದಸ್ಯ ಕಾಮ್ರೇಡ್ ರಾಮಾಂಜನಪ್ಪ ಆಲ್ದಳ್ಳಿ ಮಾತನಾಡಿ, ಜಿಲ್ಲೆಯಲ್ಲಿ ತೀವ್ರವಾದ ಬರಗಾಲವಿದೆ. ರೈತರು–ಕೃಷಿ ಕೂಲಿ ಕಾರ್ಮಿಕರು ತೀವ್ರವಾದ ಸಂಕಷ್ಟವನ್ನು ಎದುರಿಸುತ್ತಿದ್ದಾರೆ. ಆದರೆ ಕೇಂದ್ರ ಸರ್ಕಾರವಾಗಲಿ ಅಥವಾ ರಾಜ್ಯ ಸರ್ಕಾರವಾಗಲಿ ಬರ ಪರಿಹಾರ ನೀಡಿಲ್ಲ. ತೀವ್ರ ಬರಗಾಲವಿರುವುದರಿಂದ ಬರಗಾಲ ಕಾಮಗಾರಿ ಆರಂಭಿಸಿ ಕೂಲಿ




ಕಾರ್ಮಿಕರ ಗುಳೆಯನ್ನು ತಪ್ಪಿಸಬೇಕು ಹಾಗೂ ಜಾನುವಾರುಗಳಿಗೆ ಮೇವು ಕೇಂದ್ರಗಳನ್ನು ಸ್ಥಾಪನೆ ಮಾಡಬೇಕು ಎಂದು ಅವರು ಆಗ್ರಹಿಸಿದರು.

ಅಸಂಖ್ಯಾತ ಯುವಜನರು ನಿರುದ್ಯೋಗಿಗಳಾಗಿದ್ದು, ಸರಕಾರದ ವಿವಿಧ ಇಲಾಖೆಗಳಲ್ಲಿರುವ ಖಾಲಿ ಹುದ್ದೆಗಳನ್ನು ಕೂಡಲೇ ಭರ್ತಿ ಮಾಡಬೇಕು. ಉದ್ಯೋಗ ಸೃಷ್ಟಿಗೆ ಪೂರಕವಾದ ಉದ್ಯಮಗಳನ್ನು ಜಿಲ್ಲೆಯಲ್ಲಿ ಸ್ಥಾಪಿಸಬೇಕು. ಬೆಳಗಾವಿ ನಗರವು ರಾಜ್ಯದ ಎರಡನೇ ರಾಜಧಾನಿಯೆಂಬಂತೆ ಬಿಂಬಿತವಾಗಿ ವರ್ಷದಿಂದ ವರ್ಷಕ್ಕೆ ಬೆಳೆಯುತ್ತಲೇ ಸಾಗಿದೆ. ಇಲ್ಲಿ ಸುವರ್ಣಸೌಧವೂ ನಿರ್ಮಾಣವಾಗಿ ವರ್ಷದಲ್ಲೊಮ್ಮೆ ಕಾಟಾಚಾರಕ್ಕೆಂಬಂತೆ ಅಧಿವೇಶನ ನಡೆಯುತ್ತದೆ. ಆದರೆ ಜನರು ಬೆಂಗಳೂರಿಗೆ ಅಲೆಯುವುದೇನೂ ತಪ್ಪಿಲ್ಲ. ಅದಕ್ಕೆ ಇತ್ತೀಚೆಗೆ ನಡೆದ ಮುಖ್ಯಮಂತ್ರಿಗಳ ಜನತಾ ದರ್ಶನದಲ್ಲಿ ಹರಿದು ಬಂದ ಅರ್ಜಿಗಳೇ ಸಾಕ್ಷಿ. ಆದ್ದರಿಂದ ಸರಕಾರದ ಅರ್ಧದಷ್ಟು ಇಲಾಖೆಗಳನ್ನಾದರೂ ಸುವರ್ಣಸೌಧಕ್ಕೆ ಸ್ಥಳಾಂತರಗೊಳಿಸುವ ಕೆಲಸ ತುರ್ತಾಗಿ ಆಗಬೇಕು. ಬೆಳಗಾವಿ ಜಿಲ್ಲೆಯಲ್ಲಿ ಮರ್ನಾಲ್ಕು ದೊಡ್ಡ ನದಿಗಳಿದ್ದರೂ ಜನರು ಕುಡಿಯುವ ನೀರಿಗೆ ಹಾಹಾಕಾರ ಪಡಬೇಕಾಗಿದೆ. ಬೆಳಗಾವಿ ನಗರದಲ್ಲಿ ಈಗ ಮೂರು ದಿನಕೊಮ್ಮೆ ನೀರು ಬಿಡಲಾಗುತ್ತಿದೆ. ಅದೂ ಕೂಡಾ ಜನರ ಅವಶ್ಯಕತೆ ತಕ್ಕಂತೆ ಪೂರೈಕೆಯಾಗುತ್ತಿಲ್ಲ. ಹಳ್ಳಿಗಳ ನೀರಿನ ವ್ಯವಸ್ಥೆಯಂತೂ ಅಯೋಮಯವಾಗಿದೆ. ಜಿಲ್ಲೆಯ ಬಹುತೇಕ ಗ್ರಾಮೀಣ ರಸ್ತೆಗಳು ಹಾಳಾಗಿವೆ. ಕಸ ವಿಲೇವಾರಿ, ಚರಂಡಿ ಸ್ವಚ್ಛತೆ, ರಾಜಕಾಲುವೆಗಳ ಸ್ವಚ್ಛತೆ ನಿರಂತರವಾಗಿ ನಡೆಯುತ್ತಿಲ್ಲ. ಈ ಎಲ್ಲ ಸಮಸ್ಯೆಗಳ ಪರಿಹಾರಕ್ಕೆ ಸರಕಾರ ಆದ್ಯತೆ ನೀಡಬೇಕೆಂದು ಅವರು ಹೇಳಿದರು.

ಎಸ್‌ಯುಸಿಐ (ಕಮ್ಯೂನಿಸ್ಟ್) ಪಕ್ಷದ ನಾಯಕ ಕಾಮ್ರೇಡ್ ಲಕ್ಷ್ಮಣ ಜಡಗನ್ನವರ ಮಾತನಾಡಿ, ಜಿಲ್ಲೆಯಲ್ಲಿ ಹೊಸದಾಗಿ ಬಹು ಸೌಲಭ್ಯಗಳುಳ್ಳ ಸಾರ್ವಜನಿಕ ಜಿಲ್ಲಾ ಆಸ್ಪತ್ರೆಯ ಕಟ್ಟಡ ಉದ್ಘಾಟನೆಯಾಗಿ ವರ್ಷವೇ ಕಳೆದರೂ ಅದು ಕಾರ್ಯಾರಂಭ ಮಾಡಿಲ್ಲ. ಅದನ್ನು ಕೂಡಲೇ ಪ್ರಾರಂಭಿಸಿ ತಜ್ಞವೈದ್ಯರ ನೇಮಕ ಮಾಡಬೇಕು. ಮತ್ತು ಸಕಲ ಚಿಕಿತ್ಸೆ ಹಾಗೂ ಔಷಧಿಗಳು ಉಚಿತವಾಗಿ ಎಲ್ಲರಿಗೂ ನಿರಂತರವಾಗಿ ಸಿಗುವಂತಾಗಬೇಕು ಎಂದರು.

## ಭಾರತ್ ಮಾಲಾ ಪರಿಯೋಜನೆಯಡಿ ಬರುವ ಭೂ ಮಾಲೀಕರಿಂದ ಆಕ್ಷೇಪಣೆ ಆಹ್ವಾನ

ಶಿವಮೊಗ್ಗ: ಭಾರತ್ ಮಾಲಾ ಪರಿಯೋಜನೆ ಅಡಿಯಲ್ಲಿ ಎನ್.ಹೆಚ್.206ಕ್ಕೆ ಸಂಬಂಧಿಸಿದಂತೆ ನಾಲ್ಕು ಪಥ ನಿರ್ಮಾಣ ಕಾಮಗಾರಿಯು ಬೆಟ್ಟದಹಳ್ಳಿಯಿಂದ ಶಿವಮೊಗ್ಗದವರೆಗೆ ನಿರ್ವಹಿಸಲು ಈಗಿರುವ 66 ಕೆವಿ., 110 ಕೆವಿ ಹಾಗೂ 220 ಕೆವಿ ಪ್ರಸರಣ ಗೋಪುರಗಳನ್ನು ಸ್ಥಳಾಂತರಿಸಲು/ಮಾರ್ಪಾಡಿಸಲು ಗೋಪುರ 307,308,309,310 ಗಳ ಜಾಗಕ್ಕೆ ಸಂಬಂಧಿಸಿದ ಶಿವಮೊಗ್ಗ ತಾಲೂಕು ಮಲ್ಲಿಗೇನಹಳ್ಳಿ ಪ್ರದೇಶದ ಭೂ ಮಾಲೀಕರು ಈ ಯೋಜನೆಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಉಪ ವಿಭಾಗಾಧಿಕಾರಿಗಳು ಹಾಗೂ ಭೂ ಸ್ವಾಧೀನಾಧಿಕಾರಿಗಳು, ಶಿವಮೊಗ್ಗ ವಿಭಾಗ ಇವರ ಕಚೇರಿಗೆ ಈ ಪ್ರಕಟಣೆ ಪ್ರಕಟವಾದ 7 ದಿನಗಳೊಳಗಾಗಿ ಲಿಖಿತವಾಗಿ ಸಲ್ಲಿಸುವಂತೆ ಉಪವಿಭಾಗಾಧಿಕಾರಿಗಳು ಹಾಗೂ ಭೂ ಸ್ವಾಧೀನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

## ಸೈಟ್ ಕೊಡದ ಆಶೀರ್ವಾದ ಡೆವಲಪರ್ಸ್ ಗೆ ರೂ. 5 ಲಕ್ಷ 62 ಸಾವಿರ ದಂಡ ವಿಧಿಸಿ ಪರಿಹಾರ ನೀಡಲು ಆಯೋಗದಿಂದ ಆದೇಶ

ಧಾರವಾಡ: ಹಾವೇರಿ ಜಿಲ್ಲಾ ಗುಡ್ಡದ ಬೇವಿನಹಳ್ಳಿ ನಿವಾಸಿ ಸುರೇಶ ದೊಡ್ಡನಾಗಹಳ್ಳಿ ಮತ್ತು ದಾವಣಗೆರಿ ಜಿಲ್ಲೆಯ ಗುಡ್ಡದೇನಹಳ್ಳಿ ನಿವಾಸಿ ಚಂದ್ರಶೇಖರ ಮಹೇಶಪ್ಪ ಎಂಬುವವರು 2010ರಲ್ಲಿ ಆಶೀರ್ವಾದ ಡೆವಲಪರ್ಸ್ ರವರು ಧಾರವಾಡದ ಸತ್ತೂರು ಗ್ರಾಮದಲ್ಲಿ ನಿರ್ಮಿಸುತ್ತಿದ್ದ ಲೇಔಟನಲ್ಲಿ ಸೈಟಗಳನ್ನು ಖರೀದಿಸಲು ಇಚ್ಛಿಸಿದ್ದರು. ಅದರಂತೆ ಇಬ್ಬರು ದೂರುದಾರರು ತಮ್ಮ ಸೈಟಿಗೆ ತಗಲುವ ಎಲ್ಲ ಹಣವನ್ನು ಎದುರುದಾರರಿಗೆ 2010 ರಲ್ಲಿ ಒಟ್ಟು ರೂ.4,41,560/– ಹಣವನ್ನು ಸಂದಾಯ ಮಾಡಿದ್ದರು. ಆಗ ಇಬ್ಬರು ಎದುರುದಾರರು ಜಮೀನಿನ ಬಿನ್ ಶೇತಕಿ ಆದನಂತರ ಖರೀದಿ ಪತ್ರ ನೋಂದಾಯಿಸಿ ಕೊಡುವುದಾಗಿ ಒಪ್ಪಿಕೊಂಡಿದ್ದರು. ಅದರಂತೆ ಅವರು ದೂರುದಾರರಿಗೆ ಖರೀದಿ ಕರಾರು ಪತ್ರಗಳನ್ನು ಬರೆದುಕೊಟ್ಟಿದ್ದರು. ಮಾತುಕತೆಯಾಗಿ ಸುಮಾರು 12 ವರ್ಷಗಳ ಕಳೆದರೂ ಎದುರುದಾರರು ಲೇಔಟ ನಿರ್ಮಾಣ ಮಾಡಿಲ್ಲ ಮತ್ತು ತಮಗೆ ಪ್ಲಾಟ ಖರೀದಿ ಕೊಟ್ಟಿಲ್ಲ ಅಂತಾ ಹೇಳಿ ಅವರಿಗೆ ಹಣ ವಾಪಸ್ಸು ಕೊಡಲು ವಿನಂತಿಸಿದ್ದರು. ಎದುರುದಾರರು ದೂರುದಾರರ ಮಾತಿಗೆ ಕಿವಿಗೊಡಲಿಲ್ಲ. ಎದುರುದಾರರ ಅಂತಹ ನಡಾವಳಿಕೆ ಗ್ರಾಹಕರ ರಕ್ಷಣಾ ಕಾಯ್ದೆ ಅಡಿ ಸೇವಾ ನ್ಯೂನ್ಯತೆ ಆಗುತ್ತದೆ ಅಂತಾ ಹೇಳಿ ಹುಬ್ಬಳ್ಳಿಯ ಆಶೀರ್ವಾದ ಡೆವಲಪರ್ಸ್ ರವರ ಮೇಲೆ ಸೂಕ್ತ ಕ್ರಮ ಕೈಗೊಳ್ಳುವಂತೆ ಇಬ್ಬರು ದೂರುದಾರರು ಪ್ರತ್ಯೇಕವಾಗಿ ಎದುರುದಾರರ ಮೇಲೆ ಧಾರವಾಡ ಜಿಲ್ಲಾ ಗ್ರಾಹಕರ ಆಯೋಗಕ್ಕೆ ದಿ:14/08/2023 ರಂದು ದೂರು ಸಲ್ಲಿಸಿದ್ದರು.

ಸದರಿ ದೂರುಗಳ ಬಗ್ಗೆ ಕೂಲಂಕುಷವಾಗಿ ವಿಚಾರಣೆ ನಡೆಸಿದ ಆಯೋಗದ ಅಧ್ಯಕ್ಷರಾದ ಈಶಪ್ಪ.ಭೂತೆ, ಸದಸ್ಯರಾದ ವಿಶಾಲಾಕ್ಷಿ.ಅ. ಬೋಳಶೆಟ್ಟಿ ಹಾಗೂ ಪ್ರಭು .ಸಿ ಹಿರೇಮಠ 2010 ರಲ್ಲಿ ಇಬ್ಬರು ದೂರುದಾರ ರಿಂದ ಸೈಟ್ ಖರೀದಿ ಬೆಲೆ ಒಟ್ಟು ರೂ.4,41,560/– ಹಣ ಎದುರುದಾರರು ಪಡೆದುಕೊಂಡಿದ್ದಾರೆ. ಆ ಬಗ್ಗೆ ಅವರು ದೂರುದಾರರಿಗೆ ಖರೀದಿ ಕರಾರು ಪತ್ರ ಬರೆದು ಕೊಟ್ಟಿದ್ದಾರೆ. ನಿಗದಿತ ಅವಧಿಯಲ್ಲಿ ಲೇಔಟ ನಿರ್ಮಾಣದ ಕೆಲಸ ಮುಗಿಸಿ ಪ್ಲಾಟ ಖರೀದಿ ಹಾಕಿಕೊಡುವುದಾಗಿ ಎದುರುದಾರರು ದೂರುದಾರರಿಗೆ ಭರವಸೆ ಕೊಟ್ಟಿದ್ದರು. 12 ವರ್ಷ ಕಳೆದರೂ ಎದುರುದಾರರು ಲೇಔಟ ನಿರ್ಮಾಣ ಮುಗಿಸಿಲ್ಲ. ದೂರುದಾರರಿಗೆ ಪ್ಲಾಟಗಳನ್ನು ಖರೀದಿ ಹಾಕಿಕೊಡದೇ ಅವರ ಹಣವನ್ನು ಎದುರುದಾರರು ತಮ್ಮ ಅಭಿವೃದ್ದಿಯ ಕೆಲಸಕ್ಕೆ ಉಪಯೋಗಿಸಿಕೊಂಡಿರುವುದು ಸ್ಪಷ್ಟವಾಗಿ ರುಜುವಾತು ಆಗಿದೆ ಅಂತಾ ಆಯೋಗ ಅಭಿಪ್ರಾಯಪಟ್ಟು ತೀಪು ನೀಡಿದೆ. ತೀಪು ನೀಡಿದ ಒಂದು ತಿಂಗಳ ಒಳಗಾಗಿ ದೂರುದಾರರು ಸಂದಾಯ ಮಾಡಿದ ರೂ.4,41,560/– ಮತ್ತು ಅದರ ಮೇಲೆ ಶೇ.8% ರಂತೆ ಬಡ್ಡಿ ಲೆಕ್ಕ ಹಾಕಿ ಕೊಡುವಂತೆ ಎದುರುದಾರರಿಗೆ ಆದೇಶಿಸಿದೆ. ದೂರುದಾರರಿಗೆ ಆಗಿರುವ ಅನಾನುಕೂಲತೆ ಮತ್ತು ಮಾನಸಿಕ ಹಿಂಸೆಗಾಗಿ ತಲಾ ರೂ.50,000/– ಪರಿಹಾರ ಹಾಗೂ ಈ ಪ್ರಕರಣದ ಖರ್ಚು ವೆಚ್ಚ ಅಂತಾ ರೂ.10,000/– ನೀಡುವಂತೆ ಆಶೀರ್ವಾದ ಡೆವಲಪರ್ಸ್ ಮತ್ತು ಅದರ ಪಾಲುದಾರರಿಗೆ ಆಯೋಗ ನಿರ್ದೇಶಿಸಿದೆ.

# ಚುನಾವಣೆ ಖರ್ಚು ವೆಚ್ಚದ ಮೇಲೆ ನಿಗಾ ವಹಿಸಲು ಜಿಲ್ಲಾಧಿಕಾರಿ ಸೂಚನೆ

ಬಳ್ಳಾರಿ: ಬರುವ ಲೋಕಸಭೆ ಚುನಾವಣೆಯನ್ನು ಮುಕ್ತ ಹಾಗೂ ನ್ಯಾಯಸಮ್ಮತವಾಗಿ ನಡೆಯಲು ನಿಗಧಿಪಡಿಸಿರುವ ವೆಚ್ಚದಂತೆ ಅಭ್ಯರ್ಥಿಗಳು ಹಣ ವೆಚ್ಚ ಮಾಡುತ್ತಿರುವ ಬಗ್ಗೆ ತೀವ್ರ ನಿಗಾ ಇಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಚುನಾವಣಾ ಖರ್ಚು ವೆಚ್ಚದ ನಿಗಾ ಕುರಿತು ಜಿಲ್ಲೆಯ ಐದು ವಿಧಾನಸಭಾ ಕ್ಷೇತ್ರದ ಆರ್‌ಓ, ಎಆರ್‌ಓ ಅಧಿಕಾರಿಗಳೊಂದಿಗೆ ವಿಡಿಯೋ ಸಂವಾದ ಸಭೆ ನಡೆಸಿ ಅವರು ಮಾತನಾಡಿದರು.

ಚುನಾವಣೆ ಕರ್ತವ್ಯವನ್ನು ನಿಷ್ಪಕ್ಷ ಹಾಗೂ ನ್ಯಾಯ ಸಮ್ಮತವಾಗಿ ನಡೆಸುವ ಹಿನ್ನೆಲೆಯಲ್ಲಿ ನಿಯೋಜನೆಗೊಂಡ ಎಲ್ಲ ತಂಡಗಳೂ ಖರ್ಚು ವೆಚ್ಚಗಳ ಬಗ್ಗೆ ಗಮನ ವಹಿಸಬೇಕು. ಅಭ್ಯರ್ಥಿಗಳು ಮಾಡುವ ಖರ್ಚು ವೆಚ್ಚಗಳ ಬಗ್ಗೆಯೂ ತೀವ್ರ ನಿಗಾ ಇಡಬೇಕು ಎಂದು ತಾಕೀತು ಮಾಡಿದರು.

ಈ ಬಾರಿಯ ಚುನಾವಣೆಗಾಗಿ ಅಭ್ಯರ್ಥಿಗಳ ಮೂಲಕ ವೆಚ್ಚ ಮಾಡುವ ಹಣದ ಮಿತಿಯನ್ನು ಗರಿಷ್ಠ 95 ಲಕ್ಷ ರೂಪಾಯಿಗೆ ನಿಗದಿಪಡಿಸಿದ್ದು,



ನಿಗಧಿಪಡಿಸಿರುವ ಈ ವೆಚ್ಚದ ಖರ್ಚಿನ ಬಗ್ಗೆ ತೀವ್ರ ನಿಗಾ ಇಡುವ ಜತೆಗೆ ಚುನಾವಣಾ ಆಯೋಗದ ಮಾರ್ಗಸೂಚಿಯಂತೆ ದಾಖಲಿಸಿ ಇಟ್ಟುಕೊಂಡು ಕಾಲಕಾಲಕ್ಕೆ ಈ ಕುರಿತು ವರದಿಯನ್ನು ಕಳುಹಿಸಬೇಕು ಎಂದರು.

ಚುನಾವಣೆ ಸಂದರ್ಭದಲ್ಲಿ ಅಕ್ರಮವಾಗಿ ಬಳಕೆ ಮತ್ತು ಸಾಗಾಣಿಕೆ ಮಾಡುತ್ತಿರುವ ಬಗ್ಗೆ ಖಾತ್ರಿಪಡಿಸಿಕೊಂಡು, ಈ ಕುರಿತು ಸಾಕ್ಷಿಗಾಗಿ ವೀಡಿಯೋ ರೆಕಾರ್ಡಿಂಗ್ ಮಾಡಿಕೊಂಡು ಪರಿಸ್ಥಿತಿಗೆ ಅನುಗುಣವಾಗಿ ಪ್ರಕರಣಗಳನ್ನು ದಾಖಲಿಸಿಕೊಳ್ಳಬೇಕು ಎಂದು ಹೇಳಿದರು.

ಚುನಾವಣಾ ಮಾದರಿ ನೀತಿ ಸಂಹಿತೆ ಜಾರಿಯಾದರೆ, ಎಂಸಿಸಿ ತಂಡಗಳು ಉಲ್ಲಂಘನೆ ಆಗದಂತೆ ಎಚ್ಚರ ವಹಿಸಬೇಕು. ಸಹಾಯಕ ವೆಚ್ಚ ವೀಕ್ಷಕರು, ಫ್ಲೈಯಿಂಗ್ ಸ್ಕ್ವಾಡ್ಗಳು, ವೀಡಿಯೋ ಸರ್ವೆಲನ್ಸ್, ವೀಡಿಯೋ ವಿವ್ಹಿಂಗ್ ತಂಡಗಳು, ಸ್ಟ್ಯಾಟಿಕ್ ಸರ್ವೆಲನ್ಸ್ ತಂಡಗಳು ಇನ್ನೂ ಜಾಗೃತರಾಗಿ ಕಾರ್ಯನಿರ್ವಹಿಸಬೇಕು. ಒಟ್ಟಾರೆ ಮುಕ್ತ, ನ್ಯಾಯಸಮ್ಮತ ಚುನಾವಣೆ ನಡೆಸಲು ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಚುನಾವಣೆ ಸಂದರ್ಭದಲ್ಲಿ ಅಭ್ಯರ್ಥಿಗಳು ಹಾಗೂ ರಾಜಕೀಯ ಪಕ್ಷದವರು ವಿವಿಧ ಕಾರ್ಯಕ್ರಮಗಳಿಗೆ ಅನುಮತಿ ಪಡೆಯುವುದಕ್ಕೆ ಸಂಬಂಧಿಸಿದಂತೆ ಸುವಿಧಾ ಆಪ್ ಇದೆ. ಚುನಾವಣೆ ಸಂದರ್ಭದಲ್ಲಿ ಅಧಿಕಾರಿಗಳು ವಶಪಡಿಸಿಕೊಳ್ಳುವ ಹಣ, ಮದ್ಯ, ಉಡುಗೊರೆ ಸಾಮಗ್ರಿ ಇತ್ಯಾದಿಗಳನ್ನು ದಾಖಲಿಸುವ ಸಲುವಾಗಿಯೇ ಪ್ರತ್ಯೇಕವಾಗಿ ಆಪ್ ರೂಪಿಸಿರುವುದು ಈ ಬಾರಿಯ ವಿಶೇಷವಾಗಿದೆ ಎಂದರು.

ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ಮಾತನಾಡಿ, ಭಾರತ ಚುನಾವಣಾ ಆಯೋಗದ ಮಾರ್ಗಸೂಚಿಯನ್ವಯ ತಮ್ಮ ತಮ್ಮ ಜವಾಬ್ದಾರಿಗಳನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕಿದೆ. ಸಹಾಯಕ ಚುನಾವಣಾಧಿಕಾರಿಗಳು ತಮ್ಮ ವ್ಯಾಪ್ತಿಗೆ ಬರುವ ತಂಡಗಳ ಅಧಿಕಾರಿಗಳಿಗೆ ಸೂಕ್ತ ತರಬೇತಿ ಮತ್ತು ಮಾರ್ಗದರ್ಶನ ನೀಡಬೇಕು. ಈ ಹಿನ್ನೆಲೆಯಲ್ಲಿ ಅಭ್ಯರ್ಥಿ ಹಾಗೂ ರಾಜಕೀಯ ಪಕ್ಷಗಳಿಗೆ ನಿಗದಿಯಾಗುವ ಚುನಾವಣಾ ವೆಚ್ಚದ ಕುರಿತು ಸರಿಯಾದ ಲೆಕ್ಕಪತ್ರಗಳು ಇರಬೇಕು. ಈ ಸಂಬಂಧ ಯಾವುದೇ ಗೊಂದಲಕ್ಕೆ ಒಳಗಾಗದೇ ಎಲ್ಲ ದಾಖಲೆಗಳನ್ನು ಸರಿಯಾಗಿ ನಿರ್ವಹಿಸಬೇಕು ಎಂದು ಹೇಳಿದರು.

ನ್ಯಾಯ ಸಮ್ಮತವಾಗಿ ಮತಯಾಚನೆಗೆ ಯಾವುದೇ ನಿಬಂಧನೆಗಳಿಲ್ಲ. ಸಾರ್ವಜನಿಕ ಕಾರ್ಯಕ್ರಮಗಳಿಗೆ ನಿಯಮಾನುಸಾರ ಪೂರ್ವಾನುಮತಿ ಪಡೆಯಬೇಕಿದೆ. ಪೂರ್ವಾನುಮತಿಯಿಲ್ಲದ ಹಾಗೂ ಕಾನೂನು ಉಲ್ಲಂಘನೆಯ ಚಟುವಟಿಕೆಗಳ ಬಗ್ಗೆ ನಿಯೋಜಿತ ನಿಗಾ ತಂಡಗಳು ತಕ್ಷಣ ಕಾರ್ಯ ಪ್ರವೃತ್ತರಾಗಬೇಕು ಎಂದರು.

ಚುನಾವಣಾ ಅಭ್ಯರ್ಥಿಗೆ ಮತ್ತು ತಾರಾ ಪ್ರಚಾರಕರು ಪ್ರಚಾರಕ್ಕಾಗಿ ಬಂದಂತಹ ಸಂದರ್ಭದಲ್ಲಿ, ತಂಡಗಳು ಕಾರ್ಯಕ್ರಮ ಅಥವಾ ಸಮಾರಂಭಗಳಲ್ಲಿ ಆಗುವಂತಹ ಖರ್ಚು ವೆಚ್ಚಗಳ ಬಗ್ಗೆ ಕಟ್ಟುನಿಟ್ಟಿನ ನಿಗಾ ವಹಿಸಬೇಕು. ಮತದಾರರಿಗೆ ಆಮಿಷ ವೊಡ್ಡಲು ಹಣ, ಮದ್ಯ ಅಥವಾ ಉಚಿತ ಉಡುಗೊರೆಗಳ ಬಗ್ಗೆ ಸಂಪೂರ್ಣ ಸಾಕ್ಷ್ಯ ಸಂಗ್ರಹಿಸಬೇಕು ಎಂದು ಹೇಳಿದರು.

ಲೆಕ್ಕ ಅಧೀಕ್ಷಕ ಡಾ.ಶಶಿ ಶೇಖರ ರೆಡ್ಡಿ ಅವರು ಮಾತನಾಡಿ, ವಸ್ತುನಿಷ್ಠ ವೆಚ್ಚವನ್ನು ನಮೂದಿಸಬೇಕು. ರಾಜಕೀಯಕ್ಕಾಗಿ, ಅಭ್ಯರ್ಥಿಗಳ ಪ್ರಚಾರಕ್ಕಾಗಿ ಹಣ ಬಳಸಿ ಚುನಾವಣಾ ಮಾರ್ಗಸೂಚಿಗಳ ವಿರುದ್ಧವಿದೆಯೇ ಎಂಬುದರ ಬಗ್ಗೆ ಖಾತ್ರಿಪಡಿಸಿಕೊಂಡು ಪ್ರಕರಣ ದಾಖಲಿಸಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಅಭ್ಯರ್ಥಿಗಳು ತಮ್ಮ ಖರ್ಚು ವೆಚ್ಚಗಳನ್ನು ಸಂಪೂರ್ಣವಾಗಿ ಬ್ಯಾಂಕ್ ಖಾತೆಯ ಮುಖಾಂತರವೇ ಮಾಡಬೇಕಿದ್ದು, ಹೀಗಾಗಿ ಬ್ಯಾಂಕುಗಳ ಮೂಲಕ ನಡೆಯುವ ಹಣಕಾಸಿನ ವ್ಯವಹಾರಗಳ ಬಗ್ಗೆ ತೀವ್ರ ನಿಗಾ ಇಡುವಂತೆ ಮತ್ತು ಈ ಕುರಿತು ವರದಿ ನೀಡಬೇಕು. ಅಭ್ಯರ್ಥಿಗಳಿಂದ ಆಗುವ ವೆಚ್ಚಗಳ ಬಗ್ಗೆ ಅಧಿಕೃತ ಹಾಗೂ ನಿಖರ ಮಾಹಿತಿ ನಮೂದಿಸಿದಲ್ಲಿ ಚುನಾವಣಾ ಸುಗಮ ಕಾರ್ಯಕ್ಕೆ ಸಹಕಾರಿಯಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಸೇರಿದಂತೆ ಇನ್ನಿತರರಿದ್ದರು.

## ಬೈಕ್ ಡಿಕ್ಕಿಯಾಗಿ ವಕೀಲ ಸಾವು



ಬೆಂಗಳೂರು: ನಡೆದುಕೊಂಡು ಹೋಗುತ್ತಿದ್ದ ಶಿವಮೊಗ್ಗ ಮೂಲದ ಹಿರಿಯ ವಕೀಲರಿಗೆ ಬೈಕ್ ಡಿಕ್ಕಿಯಾಗಿ ವಕೀಲ ಮೃತಪಟ್ಟ ಘಟನೆ ಬೆಂಗಳೂರಿನಲ್ಲಿ ನಡೆದಿದೆ .

ಹಿರಿಯ ವಕೀಲ ಕೆ.ಟಿ.ಡಾಕಪ್ಪ ಮೃತಪಟ್ಟಿದ್ದಾರೆ. ನಿನ್ನೆ ರಾತ್ರಿ 9 ಗಂಟೆ ಸುಮಾರಿಗೆ ಬಸವನಗುಡಿಯ ಗಾಂಧಿ ಬಜಾರ್ ರಸ್ತೆಯಲ್ಲಿ ಅಪಘಾತ ಸಂಭವಿಸಿದೆ. ಕೆ.ಟಿ. ಡಾಕಪ್ಪ ಅವರು ಕಾರು ನಿಲ್ಲಿಸಿ ಡಿವಿಜೆ ರಸ್ತೆಯ ಕಚೇರಿಗೆ ಹೋಗಿದರು. ಬಳಿಕ ಮನೆಗೆ ಹೋಗಲು ವಾಪಸ್ ಕಾರ್ ಬಳಿ ನಡೆದುಕೊಂಡು ಬರುವಾಗ ಅಪಘಾತ ಸಂಭವಿಸಿದೆ.

ಕೆಟಿಎಂ ಬೈಕ್ನಲ್ಲಿ ಅತೀ ವೇಗವಾಗಿ ಬಂದ ಅದಿತ್ಯಾ (21) ಎಂಬ ಯುವಕ ನಡೆದುಕೊಂಡು ಹೋಗುತ್ತಿದ್ದ ವಕೀಲ ಡಾಕಪ್ಪ ಅವರಿಗೆ ಡಿಕ್ಕಿ ಹೊಡೆದಿದ್ದಾನೆ. ಅಪಘಾತದಲ್ಲಿ ಡಾಕಪ್ಪ ಅವರ ತಲೆಗೆ ತೀವ್ರ ಪೆಟ್ಟು ಬಿದ್ದಿದ್ದು ಡಾಕಪ್ಪ ಅವರನ್ನು ಸ್ಥಳೀಯರು ಮಣಿಪಾಲ್ ಆಸ್ಪತ್ರೆಗೆ ದಾಖಲಿಸಿದ್ದರು. ಆದರೆ ಚಿಕಿತ್ಸೆ ಫಲಿಸದೇ ಬೆಳಗಿನ ಜಾವ 3 ಗಂಟೆ ಸುಮಾರಿಗೆ ಡಾಕಪ್ಪ ನಿಧನರಾಗಿದ್ದಾರೆ. ಹೈ ಕೋರ್ಟ್ ಹಾಗೂ ಇತರ ನ್ಯಾಯಾಲಯದಲ್ಲಿ ಹಿರಿಯ ವಕೀಲರಾಗಿದ್ದ ಡಾಕಪ್ಪ ಶಿವಮೊಗ್ಗ ಮೂಲದ ತೀರ್ಥಹಳ್ಳಿಯ ಕೌರಿ ಮೂಲದವರು. ಬೆಂಗಳೂರಿನಲ್ಲಿ ಹಲವು ವರ್ಷಗಳಿಂದ ವಕೀಲ ವೃತ್ತಿ ಮಾಡುತ್ತಿದ್ದರು.

ವಕೀಲ ಡಾಕಪ್ಪರಿಗೆ ಗುದ್ದಿದ ಬಳಿಕ ಕಾರಿಗೆ ಡಿಕ್ಕಿ ಹೊಡೆದ ಬೈಕ್ ಸವಾರ ಆದಿತ್ಯಾನಿಗೂ ಗಂಭೀರ ಗಾಯಗಳಾಗಿದ್ದು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ. ಬಸವನಗುಡಿ ಸಂಚಾರಿ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿದ್ದಾರೆ.

## ಆಯುಷ್ಮಾನ್ ಭವಃ ಆರೋಗ್ಯ ಮೇಳಗಳಲ್ಲಿ ಜಾಗೃತಿ



ಬಳ್ಳಾರಿ: ಜೀವನ ಶೈಲಿಯ ರೋಗಗಳಾದ ರಕ್ತದೊತ್ತಡ, ಸಕ್ಕರೆ ಕಾಯಿಲೆಗಳಿಗೆ 30 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರೂ ಪ್ರತಿ ಆರು ತಿಂಗಳಿಗೊಮ್ಮೆ ಪರೀಕ್ಷೆ ಮಾಡಿಸಿಕೊಳ್ಳಬೇಕು. ಈ ಕುರಿತು ಆಯುಷ್ಮಾನ್ ಭವಃ ಉಚಿತ ಆರೋಗ್ಯ ಮೇಳಗಳಲ್ಲಿ ಜಾಗೃತಿ ನೀಡಲಾಗುತ್ತಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ. ರಮೇಶ್ಬಾಬು ಅವರು ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಹೊರಡಿಸಿರುವ ಅವರು, ಆರೋಗ್ಯ ಇಲಾಖೆಯಿಂದ ಜೀವನಶೈಲಿಯ ಕಾಯಿಲೆಗಳಿಂದ ದೂರವಿರಲು ಹೆಚ್ಚಿನ ಜಾಗೃತಿ ನೀಡಲಾಗುತ್ತಿದ್ದು, ಪ್ರತಿಯೊಬ್ಬರೂ ಕಾಲ-ಕಾಲಕ್ಕೆ ಪರೀಕ್ಷಿಸಿಕೊಂಡು ಆರೋಗ್ಯವಂತರಾಗಿರಬೇಕು ಎಂದು ಅವರು ಮನವಿ ಮಾಡಿದ್ದಾರೆ. ಎಲ್ಲ ಸಮುದಾಯ ಆರೋಗ್ಯ ಕೇಂದ್ರಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಗರ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಮ್ಮ ಕ್ಲಿನಿಕ್, ಗ್ರಾಮೀಣ ಭಾಗದ ಆರೋಗ್ಯ ಮತ್ತು ಕ್ಷೇಮ ಕೇಂದ್ರಗಳಲ್ಲಿ ಮಾಹಿತಿ ನೀಡಲಾಗುತ್ತಿದೆ. ಅದೇರೀತಿಯಾಗಿ ತಜ್ಞವೈದ್ಯರು, ವೈದ್ಯರು ಕ್ಷೇತ್ರ ಸಿಬ್ಬಂದಿಯವರು ತಪಾಸಣಾ ಕಾರ್ಯ ಕೈಗೊಂಡಿದ್ದು, ಪ್ರತಿ ಮಂಗಳವಾರ ನಡೆಯುವ ಆರೋಗ್ಯ ಶಿಬಿರಗಳ ಸದುಪಯೋಗ ಎಲ್ಲರೂ ಪಡೆಯಬೇಕು ಎಂದು ವಿನಂತಿಸಿದ್ದಾರೆ.

**ಬೇಸಿಗೆ ಹಿನ್ನೆಲೆಯಲ್ಲಿ ವಿಶೇಷ ಕಾಳಜಿ ವಹಿಸಿ:**


ಬೇಸಿಗೆಯು ಆರಂಭವಾಗಿದ್ದು, ಹೆಚ್ಚೆಚ್ಚು ನೀರು ಕುಡಿಯಬೇಕು. ಹತ್ತಿ ಬಟ್ಟೆಗಳನ್ನು ಧರಿಸಬೇಕು. ಮಧ್ಯಾಹ್ನದ 2-4 ಗಂಟೆಯ ಅವಧಿಯಲ್ಲಿ ವಯೋವೃದ್ಧರು, ಮಕ್ಕಳು, ಗರ್ಭಿಣಿಯರು ಬಿಸಿಲಿನಲ್ಲಿ ಓಡಾಡದಂತೆ ಜಾಗೃತಿ ನೀಡಲಾಗಿದ್ದು, ಪ್ರತಿಯೊಬ್ಬರೂ ಆರೋಗ್ಯದ ಕಾಳಜಿ ವಹಿಸಬೇಕು ಎಂದು ಅವರು ತಿಳಿಸಿದ್ದಾರೆ. ಆರೋಗ್ಯ ಶಿಬಿರಗಳಲ್ಲಿ ಕ್ಷಯರೋಗ ಪರೀಕ್ಷೆ ಹಾಗೂ ರೋಗ ಲಕ್ಷಣಗಳು ಉಳ್ಳುವರ ಕಫ ಪರೀಕ್ಷೆಯನ್ನು ಕೈಗೊಳ್ಳಲಾಗಿದೆ. ಜೊತೆಯಲ್ಲಿ ಸಾಮಾನ್ಯ ಆರೋಗ್ಯ ಸೇವೆಗಳನ್ನು ಸಹ ನೀಡಲಾಗುತ್ತಿದೆ. ಶಿಬಿರದಲ್ಲಿ ಬಿಪಿಎಲ್ ಕುಟುಂಬಗಳಿಗೆ 5 ಲಕ್ಷಗಳ ವರೆಗಿನ ಉಚಿತ ಚಿಕಿತ್ಸಾ ವೆಚ್ಚದ ಆಯುಷ್ಮಾನ್ ಭಾರತ-ಪ್ರಧಾನ ಮಂತ್ರಿ ಜನಾರೋಗ್ಯ ಯೋಜನೆ-ಮುಖ್ಯಮಂತ್ರಿಗಳ ಆರೋಗ್ಯ ಕರ್ನಾಟಕ ಯೋಜನೆಯ ಕಾರ್ಡ, ಡಿಜಿಟಲ್ ಹೆಲ್ತ್ಕಾರ್ಡ್ಗಳನ್ನು ಸೃಜಿಸಿ ವಿತರಿಸಲಾಗುತ್ತಿದೆ. ಅಂಗಾಂಗ ದಾನ ನೋಂದಣಿಯನ್ನೂ ಮಾಡಲಾಗುತ್ತಿದ್ದು, ಇಲ್ಲಿಯವರೆಗೆ 4355 ನೋಂದಣಿ ಮಾಡಲಾಗಿದೆ. ಅಲ್ಲದೆ ಶಿಬಿರದಲ್ಲಿ ಡೆಂಗ್ಯು ಮತ್ತು ಚಿಕುನ್ ಗುನ್ಯ ಕುಟುಂಬ ಕಲ್ಯಾಣ ವಿಧಾನಗಳು, ತಾಯಿ ಮಗುವಿನ ಆರೈಕೆ, ಟೆಲಿ ಮನಸ್ ಮಾನಸಿಕ ಆರೋಗ್ಯ ಸಹಾಯವಾಣಿ14416 ಕುರಿತು ಮಾಹಿತಿ ನೀಡಲಾಗುತ್ತಿದೆ. ಪ್ರತಿಯೊಬ್ಬ ಸಾರ್ವಜನಿಕರು ಆರೋಗ್ಯ ಸೇವೆಗಳನ್ನು ಪಡೆದುಕೊಂಡು ಆರೋಗ್ಯಯುತ ಜಿಲ್ಲೆಯನ್ನಾಗಿಸಲು ಸಹಕರಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಕೋರಿದ್ದಾರೆ.

## ವಿದ್ಯುತ್ ವ್ಯತ್ಯಯ

ಶಿವಮೊಗ್ಗ: ತ್ಯಾವರೆಚಟ್ನಹಳ್ಳಿ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ಹಮ್ಮಿಕೊಳ್ಳಲಾಗಿದ್ದು, ಪೆ. 29 ರಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಘಂಟೆಯವರೆಗೆ ಕೆಳಕಂಡ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಕುವೆಂಪು ನಗರ, ಎನ್.ಇ.ಎಸ್ ಬಡಾವಣೆ, ಶಿವಬಸವ ನಗರ, ವೀರಭದ್ರೇಶ್ವರ ಬಡಾವಣೆ, ಇಂದಿರಾಗಾಂಧಿ ಬಡಾವಣೆ, ಜ್ಯೋತಿ ನಗರ, ಜೆ.ಎನ್.ಎನ್.ಸಿ ಕಾಲೇಜು, ಪರ್ಫೇಕ್ಟ್ ಆಲಾಯಿ ಪ್ಯಾಕ್ಟರಿ, ರೆಡ್ಡಿ ಬಡಾವಣೆ , ಬೊಮ್ಮನಕಟ್ಟೆ ಎ ನಿಂದ ಹೆಚ್ ಬ್ಲಾಕ್ವರೆಗೆ, ಹಳೆಬೊಮ್ಮನಕಟ್ಟೆ, ವಿನಾಯಕ ಬಡಾವಣೆ, ದೇವಂಗಿ 2ನೇ ಹಂತದ ಬಡಾವಣೆ, ಶಾಂತಿನಗರ ಹೊನ್ನಾಳಿರಸ್ತೆ, ತ್ಯಾವರೆಚಟ್ನಹಳ್ಳಿ, ಯು.ಜಿ.ಡಿ, ಶೇಷಾದ್ರಿಪುರಂ, ಲಕ್ಷ್ಮೀ ವೇಂಕಟೇಶ್ವರ ಸಾಮಿಲ್, ತ್ರಿಮೂರ್ತಿ ನಗರ, ನವುಲೆ, ಅಶ್ವತ್ ನಗರ, ಎಲ್.ಬಿ.ಎಸ್ ನಗರ, ಕೀರ್ತಿ ನಗರ, ಬಸವೇಶ್ವರ ನಗರ, ಕೃಷಿ ನಗರ, ತರಳಬಾಳು ಬಡಾವಣೆ, ಸೇವಾಲಾಲ್ ನಗರ, ಡಾಲರ್ಸ್ ಕಾಲೋನಿ, ಪವನಶ್ರೀ ಬಡಾವಣೆ, ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಮೆಸ್ಕಾಂ ಪ್ರಕಟಣೆಯಲ್ಲಿ ತಿಳಿಸಿದೆ.

## ಹಣಕ್ಕಾಗಿ ತಂದೆಯನ್ನೇ ಹತ್ಯೆಗೈದ ಮಗ



ಮಂಡ್ಯ: ಹಣಕ್ಕಾಗಿ ಮಗನೇ ತಂದೆಯನ್ನು ಭೀಕರವಾಗಿ ಹತ್ಯೆಗೈದಿರುವ ಘಟನೆ ಮಂಡ್ಯದ ಸುಂಡಹಳ್ಳಿ ಗ್ರಾಮದಲ್ಲಿ ನಡೆದಿದೆ.

ಸುಂಡಹಳ್ಳಿ ಗ್ರಾಮದ ನಂಜಪ್ಪ (65) ಎಂಬವರು ಹತ್ಯೆಯಾದ ದುರ್ದೈವಿ. ಮಹದೇವ್ ಕೊಲೆ ಆರೋಪಿಯಾಗಿದ್ದು, ಹಣಕ್ಕಾಗಿ ಕೊಲೆ ಮಾಡಿದ್ದಾನೆ ಎಂದು ತಿಳಿದು ಬಂದಿದೆ. ತಂದೆಯನ್ನು ಹತ್ಯೆಗೈದ ಬಳಿಕ ಆರೋಪಿ ತಲೆ ಮರೆಸಿಕೊಂಡಿದ್ದಾನೆ.

ನಂಜಪ್ಪ ತಮ್ಮ ಜಮೀನನ್ನು ಮಗನಿಗೆ ಹಾಗೂ ಮಗಳಿಗೆ ಹಂಚಿದ್ದರು. ಇತ್ತೀಚೆಗೆ 20 ಗುಂಟೆ ಜಮೀನನ್ನು ಮಾರಾಟ ಮಾಡಿ, ಬಂದ ಹಣದಲ್ಲಿ ಒಂದು ಭಾಗ ಮಗನಿಗೆ, ಒಂದು ಭಾಗ ಮಗಳು ಸೌಭಾಗ್ಯ ಎಂಬವರಿಗೆ ನೀಡಿದ್ದರು. ಸ್ವಲ್ಪ ಹಣವನ್ನು ನಂಜಪ್ಪ ಅವರು ಇಟ್ಟುಕೊಂಡಿದ್ದರು. ಆರೋಪಿ ಮಹದೇವ್ ತಂದೆ ನೀಡಿದ್ದ ಹಣ ಖರ್ಚು ಮಾಡಿಕೊಂಡು, ತಂದೆಯ ಬಳಿ ಹಣಕ್ಕಾಗಿ ಆಗಾಗ ಜಗಳ ಆಡುತ್ತಿದ್ದ ಎಂದು ತಿಳಿದು ಬಂದಿದೆ.

ಹಣದ ವಿಚಾರಕ್ಕೆ ಸೋಮವಾರ ರಾತ್ರಿ ಸಹ ತಂದೆಯ ಮನೆಗೆ ನುಗ್ಗಿ, ತಂದೆ-ತಾಯಿಗಳ ಮೇಲೆ ಮಹದೇವ್ ಹಲ್ಲೆ ಮಾಡಿದ್ದಾನೆ. ಬಳಿಕ ತಂದೆಯ ತಲೆಯ ಮೇಲೆ ಕಲ್ಲು ಹಾಕಿ ಹತ್ಯೆ ಮಾಡಿ ಪರಾರಿಯಾಗಿದ್ದಾನೆ. ಈ ಸಂಬಂಧ ಮಂಡ್ಯ ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಆರೋಪಿಗಾಗಿ ಪೊಲೀಸರು ಬಲೆ ಬೀಸಿದ್ದಾರೆ.

## ಸಂವಿಧಾನ ಜಾಗೃತಿ ಜಾಥಾ: ಸಂವಿಧಾನ ಮೌಲ್ಯಗಳ ಸ್ಮರಣೆ



ಬಳ್ಳಾರಿ: ಜಿಲ್ಲೆಯಲ್ಲಿ "ಸಂವಿಧಾನ ಜಾಗೃತಿ ಜಾಥಾ" ಕಾರ್ಯಕ್ರಮವು ಮಾ.01 ರ ವರೆಗೂ ಮುಂದುವರೆದ ಹಿನ್ನಲೆಯಲ್ಲಿ ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಸಂವಿಧಾನದ ಆಶಯ ಮತ್ತು ಮೌಲ್ಯಗಳ ಜಾಗೃತಿಯನ್ನು ಮೂಡಿಸಲು ಟ್ಯಾಬ್ಲೊ ಮೂಲಕ ಜಾಥಾವು ಸೋಮವಾರದಂದು ನಗರದ ವಿವಿಧ ಕಾಲೇಜುಗಳಿಗೆ ಸಂಚರಿಸಿತು.

ನಗರದ ನಲ್ಲಚೇರುವು ಪ್ರದೇಶದ ವಾಲ್ಮೀಕಿ ಭವನ, ಹೆಚ್.ಆರ್. ಗವಿಯಪ್ಪ ವೃತ್ತ, ಎಸ್.ಪಿ.ವೃತ್ತ, ದುರ್ಗಮ್ಮಗುಡಿ ಮಾರ್ಗದ ಮೂಲಕ ಗಾಂಧಿ ನಗರದ ಅಲ್ಲಂ ಸುಮಂಗಳಮ್ಮ ಕಾಲೇಜಿಗೆ ಆಗಮಿಸುತ್ತಿದ್ದಂತೆಯೇ ಕಾಲೇಜಿನ ಪ್ರಾಚಾರ್ಯರು ಹಾಗೂ ಉಪನ್ಯಾಸಕ ವೃಂದದವರು, ವಿದ್ಯಾರ್ಥಿಗಳು ಜಾಥಾವನ್ನು ಸ್ವಾಗತಿಸಿದರು. ಕಾಲೇಜಿನ ಪಾಚಾರ್ಯರು ಸಂವಿಧಾನ ಪೀಠಿಕೆಯನ್ನು ವಿದ್ಯಾರ್ಥಿಗಳಿಗೆ ಭೋಧಿಸಿದರು.

ಅತಿಥಿ ಉಪನ್ಯಾಸಕರಾದ ಸುಂದರ್ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಡಾ.ಬಾಬಾ ಸಾಹೇಬ ಅಂಬೇಡ್ಕರ್ ಅವರು ಸಮಗ್ರತೆ, ಭ್ರಾತೃತ್ವ ಹಾಗೂ ಸಮಾನತೆಗಳ ಕುರಿತು ಬೇರೆ ಬೇರೆ ದೇಶಗಳ ಸಂವಿಧಾನಗಳನ್ನು ಅಧ್ಯಯನ ಮಾಡಿ, 2 ವರ್ಷ, 11 ತಿಂಗಳು, 18 ದಿನಗಳ ಕಾಲ ಹಗಲು-ರಾತ್ರಿ ಶ್ರದ್ಧೆಯಿಂದ ಸಂವಿಧಾನವನ್ನು ರಚಿಸಿದರು.

ಸಂವಿಧಾನದ ಪ್ರಸ್ತಾವನೆಯು ಮಹತ್ವದ್ದಾಗಿದೆ. ಸಂವಿಧಾನವು ನಮ್ಮೆಲ್ಲರಿಗೆ ಶ್ರೇಷ್ಠವಾಗಿದ್ದು, ಸಂವಿಧಾನದ ಆಶಯಗಳನ್ನು ಈಡೇರಿಸಲು ನಾವೆಲ್ಲರೂ ಬದ್ಧರಾಗಿರಬೇಕಿದೆ ಎಂದರು.

ಬಳಿಕ ಜಾಗೃತಿ ಜಾಥಾವು ಟ್ಯಾಬ್ಲೊ ಮೂಲಕ ಗಾಂಧಿನಗರದ ಶ್ರೀ ಗುರುತಿಪ್ಪೇರುದ್ರ ಕಾಲೇಜಿಗೆ ತೆರಳಿತು. "ಸಂವಿಧಾನ ಜಾಗೃತಿ ಜಾಥಾ"ವನ್ನು ಕಾಲೇಜಿನ ಪ್ರಾಂಶುಪಾಲರು ಹಾಗೂ ಅಧ್ಯಕ್ಷರು ಸ್ವಾಗತ ಮಾಡಿಕೊಂಡರು.

ಕಾಲೇಜಿನ ಪ್ರಾಂಶುಪಾಲರು ಸಂವಿಧಾನ ಪೀಠಿಕೆಯನ್ನು ವಿದ್ಯಾರ್ಥಿ ಗಳೊಂದಿಗೆ ಭೋಧಿಸಿದರು.

ಜಿ.ನಾಗರಾಜ ಅವರು ಅಧ್ಯಕ್ಷತೆ ವಹಿಸಿ ಮಾತನಾಡಿ, ಸಂವಿಧಾನ ಒಂದೇ ಜಾತಿ, ಧರ್ಮಕ್ಕೆ ಸಂಬಂಧಿಸಿಲ್ಲ, ಬದಲಾಗಿ ಎಲ್ಲಾ ವರ್ಗದವರಿಗೂ ಸಂಬಂಧಿಸಿದೆ. ಹೀಗಾಗಿ ನಾವೆಲ್ಲರೂ ಸಂವಿಧಾನವನ್ನು ಉಳಿಸಿ ಬೆಳೆಸಿ ಕಾಪಾಡಿಕೊಂಡು ಹೋಗುವುದು ನಮ್ಮ ಕರ್ತವ್ಯವಾಗಿದೆ ಎಂದು ಅಭಿಪ್ರಾಯ ಪಟ್ಟರು.

ಜಾಥಾ ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ವರ್ಗದವರು, ಕಾಲೇಜು ವಿದ್ಯಾರ್ಥಿಗಳು ಹಾಗೂ ಇನ್ನೀತರರು ಪಾಲ್ಗೊಂಡಿದ್ದರು.

## ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದಿಂದ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರಗೆ ಸನ್ಮಾನ



ಬೆಂಗಳೂರು: ಗ್ರಾಮೀಣ ಪತ್ರಕರ್ತರ ಶ್ರಮ ಮತ್ತು ಕಾರ್ಯಕ್ಷಮತೆಯನ್ನು ಗುರುತಿಸಿ ಅವರ ಬಹುವರ್ಷಗಳ ಬೇಡಿಕೆ ಈಡೇರಿಸಿದ್ದಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅಭಿನಂದನೆ ಸಲ್ಲಿಸಿದರು.

ಗ್ರಾಮೀಣ ಪತ್ರಕರ್ತರ ಉಚಿತ ಬಸ್ ಪಾಸ್ ಬೇಡಿಕೆಯನ್ನು ಈ ಬಾರಿಯ ಬಜೆಟ್ ನಲ್ಲಿ ಈಡೇರಿಸಿದ್ದಕ್ಕಾಗಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಪತ್ರಕರ್ತರ ಸಂಘ ಮತ್ತು ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರ ನಿರಂತರ ಶ್ರಮದಿಂದಾಗಿ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ದೊರಕಿದೆ. ಇವರ ಬೇಡಿಕೆ ಮತ್ತು ಹೋರಾಟವನ್ನು ಮುಖ್ಯಮಂತ್ರಿಗಳ ಗಮನಕ್ಕೆ ತಂದ ಸಂದರ್ಭದಲ್ಲಿ ಅವರು ಸ್ಪಂದಿಸಿದ ರೀತಿಯನ್ನು ಕೆ.ವಿ.ಪ್ರಭಾಕರ್ ವಿವರಿಸಿದರು.

ಪತ್ರಕರ್ತ ಹುದ್ದೆಗೆ ಬರುವವರಲ್ಲಿ ಹೆಚ್ಚಿನವರು ಕಷ್ಟದ ಕುಟುಂಬಗಳಿಂದ ಬರುವವರು. ಆದ್ದರಿಂದ ಸರ್ಕಾರ ಈ ಸಮುದಾಯದ ಬೇಡಿಕೆಗಳಿಗೆ ಸ್ಪಂದಿಸಬೇಕಾಗುತ್ತದೆ ಎಂದರು.

ಪತ್ರಕರ್ತರ ಪೆನ್ಷನ್ ಮತ್ತು ನಿವೇಶನ ಸೇರಿ ಪತ್ರಕರ್ತರಿಗೆ ಇಲಾಖೆಯಿಂದ, ಸರ್ಕಾರದಿಂದ ಸಿಗಬೇಕಾದ ಸವಲತ್ತುಗಳು ಸಿಗದಂತೆ ಅಡ್ಡಿ ಆಗಿರುವ ಎಲ್ಲಾ ತಾಂತ್ರಿಕ ಅಡೆ ತಡೆಗಳನ್ನು ನಿವಾರಿಸಲು ಸತತ ಪ್ರಯತ್ನ ಮತ್ತು ಸಭೆ ನಡೆಸುತ್ತಿದ್ದೇವೆ. ಹಂತ ಹಂತವಾಗಿ ಬಗೆಹರಿಸಲಾಗುವುದು ಎಂದರು.

ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು ಅಧ್ಯಕ್ಷತೆ ವಹಿಸಿದ್ದರು. ರಾಜ್ಯ ಮತ್ತು ಜಿಲ್ಲಾ ಸಂಘಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಬೆಳಗಾವಿ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ.ನಿ; ಚುನಾವಣಾ ವೇಳಾ ಪಟ್ಟಿ ಪ್ರಕಟ

ಬೆಳಗಾವಿ: ಮಾನ್ಯ ಆಯುಕ್ತರು ಸಹಕಾರ ಚುನಾವಣಾ ಪ್ರಾಧಿಕಾರ ಬೆಂಗಳೂರು ಇವರ ಆದೇಶದ ಮೇರೆಗೆ ಬೆಳಗಾವಿ ಜಿಲ್ಲಾ ಸಹಕಾರಿ ಹಾಲು-ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದ ಆಡಳಿತ ಮಂಡಲಿ ಚುನಾವಣೆಯನ್ನು ಮಾರ್ಚ 17, 2024 ರಂದು ಜರುಗಿಸಲಾಗುವುದು ಎಂದು ಬೆಳಗಾವಿ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದ ರಿಟರ್ನಿಂಗ್ ಅಧಿಕಾರಿ ರಾಜಶ್ರೀ ಜೈನಾಪೂರ ಅವರು ತಿಳಿಸಿದ್ದಾರೆ.

ರಾಯಬಾಗ, ಕಾಗವಾಡ, ನಿಪ್ಪಾಣಿ, ಚಿಕ್ಕೋಡಿ, ಹುಕ್ಕೇರಿ, ರಾಮದುರ್ಗ, ಗೋಕಾಕ್, ಮೂಡಲಗಿ, ಬೆಳಗಾವಿ, ಖಾನಾಪೂರ, ಕಿತ್ತೂರು, ಬೈಲಹೊಂಗಲ, ಸವದತ್ತಿ, ಯರಗಟ್ಟಿ, ಹಾಗೂ ಜಿಲ್ಲೆಯಲ್ಲಿನ ಮಹಿಳಾ ಹಾಲು ಉತ್ಪಾದಕರ ಸಹಕಾರ ಸಂಘಗಳ ವತಿಯಿಂದ ತಲಾ 1 ರಂತೆ ಆಯ್ಕೆಯಾಗಬೇಕಾದ ಆಡಳಿತ ಮಂಡಲಿಯ ಸದಸ್ಯರ ಒಟ್ಟು 16 ಸ್ಥಾನಗಳಿರುತ್ತವೆ.

**ಚುನಾವಣೆಯ ವೇಳಾ ಪಟ್ಟಿ:**

ಒಕ್ಕೂಟದ ಆಡಳಿತ ಕಚೇರಿಯಲ್ಲಿ ಮಾರ್ಚ 2 ರಿಂದ ಮಾ.9 ರವರೆಗೆ ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 3 ಗಂಟೆಯವರೆಗೆ ನಾಮಪತ್ರ ಸಲ್ಲಿಸಬಹುದಾಗಿದೆ. ಮಾ. 10 ರಂದು ನಾಮಪತ್ರ ಪರಿಶೀಲಿಸಲಾಗುವುದು ಬಳಿಕ ಅದೇ ದಿನ ಕ್ರಮಬದ್ಧವಾಗಿ ನಾಮಪತ್ರ ಸಲ್ಲಿಸಿದ ಅಭ್ಯರ್ಥಿಗಳ ಪಟ್ಟಿಯನ್ನು ಒಕ್ಕೂಟದ ಕಚೇರಿಯ ನೋಟಿಸ್ ಬೋರ್ಡಿನ ಮೇಲೆ ಪ್ರಕಟಿಸಲಾಗವುದು.

ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳಲು ಮಾ.11 ಕೊನೆಯ ದಿನಾಂಕ ನಿಗದಿಪದಿಸಲಾಗಿದೆ. ಅಂತಿಮವಾಗಿ ಸ್ಪರ್ಧೆಯಲ್ಲಿ ಉಳಿದ ಅರ್ಹ ಉಮೇದುವಾರರ ಪಟ್ಟಿಯನ್ನು ಮಾ.11 ರಂದು ಪ್ರಕಟಿಸಿ ಸ್ಪರ್ಧೆಯಲ್ಲಿ ಉಳಿದ ಅರ್ಹ ಉಮೇದುವಾರರಿಗೆ ಚಿಹ್ನೆಗಳನ್ನು ನೀಡಲಾಗುವುದು.

ಉಮೇದುವಾರರ ಹೆಸರು ಮತ್ತು ಅವರಿಗೆ ಹಂಚಿಕೆ ಮಾಡಲಾದ ಚುನಾವಣಾ ಚಿಹ್ನೆಯನ್ನೊಳಗೊಂಡ ಮಾದರಿ ಮತಪತ್ರ ಮಾ.13 ರಂದು ಒಕ್ಕೂಟದ ಕಚೇರಿ ನೋಟಿಸ ಬೋರ್ಡಿನಲ್ಲಿ ಪ್ರಕಟಿಸಲಾಗುವದು.

ಬೆಳಗಾವಿ ಮಾಳಮಾರುತಿ ಬಡಾವಣೆಯ ಅಂಜನೇಯ ನಗರದ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದಲ್ಲಿ ಮಾ.17 ರಂದು ಬೆಳಿಗ್ಗೆ 9 ರಿಂದ ಸಂಜೆ 4 ಗಂಟೆಯವರೆಗೆ ಮತದಾನ ಪ್ರಕ್ರಿಯೆ ನಡೆಯಲಿದೆ. ಮತದಾನ ಮುಗಿದ ನಂತರ ಸಂಬಂಧಿಸಿದ ಮತಗಟ್ಟೆಗಳಲ್ಲಿ ಮಾ.17 ರಂದು ಮತ ಎಣಿಕೆ ನಡೆಯಲಿದೆ

ಬಳಿಕ ಅದೇ ದಿನ (ಮಾ.17) ಒಕ್ಕೂಟದ ಆಡಳಿತ ಕಚೇರಿಯಲ್ಲಿ ಚುನಾವಣಾ ಪಲಿತಾಂಶ ಪ್ರಕಟಿಸಲಾಗುವದು ಎಂದು ಬೆಳಗಾವಿ ಜಿಲ್ಲಾ ಸಹಕಾರಿ ಹಾಲು ಉತ್ಪಾದಕರ ಸಂಘಗಳ ಒಕ್ಕೂಟ ನಿಯಮಿತದ ರಿಟರ್ನಿಂಗ್ ಅಧಿಕಾರಿ ಹಾಗೂ ರಾಣಿ ಚನ್ನಮ್ಮ ವಿಶ್ವ ವಿದ್ಯಾದಲಯದ ಕುಲಪತಿ ರಾಜಶ್ರೀ ಜೈನಾಪೂರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆಬಿಯಲ್ಲಿ ಡಿಆರ್ಎಚ್ಪಿ ಫೈಲ್ ಮಾಡಿದ ಟೋಲಿನ್ಸ್ ಟೈರ್ಸ್ ಲಿಮಿಟೆಡ್

ಹುಬ್ಬಳ್ಳಿ: ಟೈರ್ ಮತ್ತು ಟ್ರೆಡ್ಸ್ ಉದ್ಯಮದಲ್ಲಿ ಪ್ರಮುಖರಾಗಿರುವ, ಅಖಿಲ ಭಾರತ ಉಪಸ್ಥಿತಿ ಹೊಂದಿರುವ ಕೇರಳ ಮೂಲದ ಕಂಪನಿ ಟೋಲಿನ್ಸ್ ಟೈರ್ಸ್ ಲಿಮಿಟೆಡ್, ಅದರ ಡ್ರಾಫ್ಟ್ ರೆಡ್ ಹೆರಿಂಗ್ ಪ್ರಾಸ್ಪೆಕ್ಟಸ್ (ಡಿಆರ್ಎಚ್ಪಿ) ನ್ನು ಮಾರುಕಟ್ಟೆ ನಿಯಂತ್ರಕ ಸೆಕ್ಯುರಿಟೀಸ್ ಮತ್ತು ಎಕ್ಸ್ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಗೆ ಸಲ್ಲಿಸಿದೆ.

ಕಂಪನಿಯ ಇನಿಷಿಯಲ್ ಪಬ್ಲಿಕ್ ಆಫರಿಂಗ್ ರೂ 200 ಕೋಟಿಗಳವರೆಗಿನ ಹೊಸ ಸಂಚಿಕೆಯನ್ನು ಒಳಗೊಂಡಿರುತ್ತದೆ ಮತ್ತು ಸೆಲ್ಲಿಂಗ್ ಷೇರ್ ಹೋಲ್ಡರ್ ಗಳ ರೂ 30 ಕೋಟಿಗಳವರೆಗಿನ ಒಟ್ಟು ಈಕ್ವಿಟಿ ಷೇರುಗಳ ಆಫರ್ ಫಾರ್ ಸೇಲ್ ಒಳಗೊಂಡಿದೆ.


ಆಫರ್ ಸೇಲ್ ಕಂಪನಿಯ ಪ್ರಮೋಟರ್, ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕ ಡಾ.ಕಲಂಪರಂಬಿಲ್ ವರ್ಕಿ ಟೋಲಿನ್ ಅವರ ರೂ 15 ಕೋಟಿಯವರೆಗಿನ ಮತ್ತು ಪ್ರಮೋಟರ್, ನಾನ್ ಎಕ್ಸಿಕ್ಯೂಟಿವ್ ಆಂಡ್ ನಾನ್ ಇಂಡಿಪೆಂಡೆಂಟ್ ಡೈರೆಕ್ಟರ್ ಜೆರಿನ್ ಟೋರಿನ್ ಅವರ ರೂ 15 ಕೋಟಿಯವರೆಗಿನ ಈಕ್ವಿಟಿ ಷೇರುಗಳನ್ನು ಒಳಗೊಂಡಿದೆ.

ಕಂಪನಿ ಪಡೆದಿರುವ ಕೆಲವು ಬಾಕಿ ಸಾಲಗಳ ಮರುಪಾವತಿ/ಪೂರ್ವಪಾವತಿಗೆ ರೂ 62.5 ಕೋಟಿ ನಿವ್ವಳ ಆದಾಯ ಬಳಸಿಕೊಳ್ಳಲು, ರೂ 75 ಕೋಟಿಗಳನ್ನು ದೀರ್ಘಾವಧಿಯ ಕಾರ್ಯನಿರತ ಬಂಡವಾಳದ ಅಗತ್ಯಗಳಿಗೆ ಮತ್ತು ರೂ 24.3 ಕೋಟಿಗಳು ತಮ್ಮ ಸಂಪೂರ್ಣ ಸ್ವಾಮ್ಯದ ಅಂಗಸಂಸ್ಥೆಯಾದ ಟೋಲಿನ್ ರಬ್ಬರ್ಸ್ ಪ್ರೈವೇಟ್ ಲಿಮಿಟೆಡ್ನಲ್ಲಿ ಹೂಡಿಕೆ ಮರುಪಾವತಿಸಲು ಅಥವಾ ಪೂರ್ವಪಾವತಿ ಮಾಡಲು ಮತ್ತು ಅದರ ಅಲ್ಪಾವಧಿ ಮತ್ತು ದೀರ್ಘಾವಧಿಯ ಎರವಲು ಮತ್ತು ಅದರ ಕಾರ್ಯನಿರತ ಬಂಡವಾಳದ ಅಗತ್ಯಗಳನ್ನು ಹೆಚ್ಚಿಸುವುದಕ್ಕೆ ಪ್ರಸ್ತಾಪಿಸಿದೆ.

ಟೋಲಿನ್ಸ್ ಟೈರ್ಸ್ ಲಿಮಿಟೆಡ್ ತನ್ನ ಕಾರ್ಯಾಚರಣೆಯನ್ನು 1982ರಲ್ಲಿ ಆರಂಭಿಸಿತು. ಟ್ರೇಡ್ ರಬ್ಬರ್ ತಯಾರಿಕೆಯ ಕಂಪನಿಯಾಗಿ ಸಂಯೋಜಿತಗೊಂಡಿದ್ದು 2003ರಲ್ಲಿ. 2005ರಲ್ಲಿ ಉತ್ಪಾದನೆ ಮತ್ತು ಮಾರಾಟ ಪ್ರಾರಂಭಿಸಿತು. 2004ರಿಂದಲೂ ಶ್ರೀಮತಿ ಜೆರಿನ್ಟೋಲಿನ್, ಪ್ರಮೋಟರ್, ನಾನ್ ಎಕ್ಸಿಕ್ಯೂಟಿವ್ ಆಂಡ್ ನಾನ್ ಇಂಡಿಪೆಂಡೆಂಟ್ ಡೈರೆಕ್ಟರ್ ಆಗಿದ್ದಾರೆ. ಟೈರ್ ರಿಟ್ರೆಡಿಂಗ್ ಪರಿಹಾರ ಉತ್ಪನ್ನಗಳನ್ನು ಒದಗಿಸುವ ಕಂಪನಿಯು ಮೂರು ಉತ್ಪಾದನಾ ಘಟಕಗಳಿಂದ ತನ್ನ ವ್ಯವಹಾರವನ್ನು ನಿರ್ವಹಿಸುತ್ತಿದೆ. ಅದರಲ್ಲಿ ಎರಡು ಕೇರಳದ ಕಾಲಡಿಯಲ್ಲಿವೆ ಮತ್ತು ಮೂರನೆಯದು ಯುಎಇಯ ರಾಸ್ ಅಲ್ ಖೈಮಾದಲ್ಲಿದೆ.

ಪ್ರಸ್ತುತ, ಇದು ವಾರ್ಷಿಕ 1.51 ಮಿಲಿಯನ್ ಟೈರ್ ಉತ್ಪಾದನೆ ಸಾಮರ್ಥ್ಯ, ವಾರ್ಷಿಕ 12,486 ಟನ್ ಟ್ರೇಡ್ ರಬ್ಬರ್ ಉತ್ಪಾದನೆ ಸಾಮರ್ಥ್ಯದ ಮತ್ತು 17,160 ಟನ್ ರಬ್ಬರ್ ಕಾಂಪೌಂಡ್ಗಳನ್ನು ಉತ್ಪಾದಿಸುವ ಸಾಮರ್ಥ್ಯ ಹೊಂದಿದೆ. ಪ್ರಸ್ತುತ, ಇದು ತನ್ನ ಸುಮಾರು 25%ನಷ್ಟು ಸರಾಸರಿ ಸಾಮರ್ಥ್ಯ ಬಳಸುವ ಮೂಲಕ ಕಾರ್ಯನಿರ್ವಹಿಸುತ್ತಿದೆ ಮತ್ತು ಮುಂದಿನ ಕೆಲವು ವರ್ಷಗಳಲ್ಲಿ ಸಾಮರ್ಥ್ಯದ ಬಳಕೆಯನ್ನು 75% ವರೆಗೆ ಹೆಚ್ಚಿಸಲು ಉದ್ದೇಶಿಸಿದೆ. ಇಂಡಾಗ್ ರಬ್ಬರ್ ಲಿಮಿಟೆಡ್, ವಂಶಿ ರಬ್ಬರ್ ಲಿಮಿಟೆಡ್, ಟಿವಿಎಸ್ ಶ್ರೀಚಕ್ರ ಲಿಮಿಟೆಡ್, ಜಿಆರ್ಪಿ ಲಿಮಿಟೆಡ್ ಮತ್ತು ಎಲ್ಗಿ ರಬ್ಬರ್ ಕಂಪನಿ ಲಿಮಿಟೆಡ್ನಂತಹ ಲಿಸ್ಟೆಡ್ ಸಂಸ್ಥೆಗಳೊಂದಿಗೆ ಸ್ಪರ್ಧಿಸುವ ಟೋಲಿನ್ಸ್ ಟೈರ್ಸ, ಮಾರ್ಚ್ ಆರ್ಥಿಕ ವರ್ಷ 23ಕ್ಕೆ ರೂ 4.99 ಕೋಟಿಗಳ ಸ್ವತಂತ್ರ ನಿವ್ವಳ ಲಾಭ ದಾಖಲಿಸಿದೆ. ಹಿಂದಿನ ವರ್ಷ ರೂ0.63 ಕೋಟಿ ಲಾಭ ದಾಖಲಾಗಿತ್ತು. ಇದೇ ಅವಧಿಯಲ್ಲಿ, ಕಾರ್ಯಾಚರಣೆಗಳಿಂದ ಅದರ ಆದಾಯ ರೂ 113.4 ಕೋಟಿಗಳಿಂದ ರೂ 118.3 ಕೋಟಿಗಳಿಗೆ ಏರಿತ್ತು.

## ದ್ವಿತೀಯ ಪಿಯು ಪರೀಕ್ಷೆ: ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ತೊಂದರೆಯಾಗದಂತೆ ನಿಗಾವಹಿಸಿ: ಜಿಲ್ಲಾಧಿಕಾರಿ ದಿವ್ಯ ಪ್ರಭು



ಧಾರವಾಡ: ಮಾರ್ಚ್ 1 ರಿಂದ 22 ರವರೆಗೆ ನಡೆಯುವ ದ್ವಿತೀಯ ಪಿ.ಯು.ಸಿ ಪರೀಕ್ಷೆಗೆ ಜಿಲ್ಲೆಯಾದ್ಯದಂತ ಒಟ್ಟು 43 ಪರೀಕ್ಷಾ ಕೇಂದ್ರಗಳನ್ನು ಸಿದ್ದಪಡಿಸಲಾಗಿದೆ. ಪರೀಕ್ಷಾ ಕೇಂದ್ರಗಳಲ್ಲಿ ಯಾವುದೇ ತೊಂದರೆಯಾಗದಂತೆ ಪರೀಕ್ಷಾ ಕೇಂದ್ರದ ಮೇಲ್ವಿಚಾರಕರು ಹಾಗೂ ಕಾಲೇಜಿನ ಪ್ರಾಂಶುಪಾಲರು ನಿಗಾವಹಿಸಬೇಕೆಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಅವರು ಹೇಳಿದರು.

ಅವರು ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿಯ ನೂತನ ಸಭಾಗಂಣದಲ್ಲಿ ದ್ವಿತೀಯ ಪಿಯುಸಿ ಪರೀಕ್ಷಾ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಕಲಾ ವಿಭಾಗ, ವಿಜ್ಞಾನ ವಿಭಾಗ, ವಾಣಿಜ್ಯ ವಿಭಾಗ ಸೇರಿದಂತೆ ಒಟ್ಟು 26,411 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ. ಧಾರವಾಡ. ಹುಬ್ಬಳ್ಳಿ. ಕಲಘಟಗಿ. ಕುಂದಗೋಳ. ನವಲಗುಂದ ಸೇರಿದಂತೆ 12,704 ಗಂಡು ಮಕ್ಕಳು, 12,707 ಹೆಣ್ಣು ಮಕ್ಕಳು ಪರೀಕ್ಷೆ ಬರೆಯಲಿದ್ದಾರೆ. ಕೇಂದ್ರಗಳಲ್ಲಿ ಯಾವುದೆ ಲೊಪವಾಗದಂತೆ ಕಾರ್ಯನಿರ್ವಹಿಸಬೇಕು. ವಿದ್ಯಾರ್ಥಿಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆಯನ್ನು ಕಲ್ಪಿಸಬೇಕು ಎಂದರು.

ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಮಾತನಾಡಿ, ಪ್ರತಿ ಪರೀಕ್ಷಾ ಕೇಂದ್ರಕ್ಕೆ ಉಪನ್ಯಾಸಕರನ್ನು ವಿಶೇಷ ಜಾಗೃತ ದಳದ ಸದಸ್ಯರನ್ನಾಗಿ ನೇಮಿಸಲಾಗಿದೆ. ಕೊಠಡಿ ಮೇಲ್ವಿಚಾರಕರನ್ನು ಹೊರೆತುಪಡಿಸಿ ಬೇರೆಯವರು ಮೊಬೈಲ್ ಬಳಕೆ ಮಾಡಲು ನಿಷೇದಿಸಲಾಗಿದೆ, ಪರೀಕ್ಷಾ ಕೇಂದ್ರಗಳ ಸುತ್ತ ಮುತ್ತಲು ಅನುಮಾನಸ್ಪದ ಜನರು ಕಂಡುಬಂದಲ್ಲಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು. ಪ್ರತಿ ಪರೀಕ್ಷಾ ಕೇಂದ್ರಗಳ ಸುತ್ತಲೂ 200 ಮೀ. ವ್ಯಾಪ್ತಿಯಲ್ಲಿ ಜೆರಾಕ್ಸ್ ಅಂಗಡಿಗಳನ್ನು ಮತ್ತು ಕಂಪ್ಯೂಟರ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಬಂದ ಮಾಡಲು ಕ್ರಮ ಜರುಗಿಸಲಾಗುವುದು. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಸೂಕ್ತ ಪೊಲೀಸ್ ಬಂದೋಬಸ್ತ ಮಾಡಲಾಗುವುದು ಎಂದು ಅವರು ಹೇಳಿದರು.

ಜಿಲ್ಲೆಯ ಎಲ್ಲ ಪರೀಕ್ಷಾ ಕೇಂದ್ರಗಳಿಗೆ ಪ್ರಶ್ನೆ ಪತ್ರಿಕೆಗಳನ್ನು ವಿತರಣೆ ಮಾಡಲು ವಿವಿಧ ತಾಲ್ಲೂಕಿನಲ್ಲಿ 16 ಮಾರ್ಗಗಳನ್ನು ಗುರುತಿಸಲಾಗಿದೆ. ಒಂದು ತಂಡಕ್ಕೆ 03 ಜನ ಸದಸ್ಯರನ್ನು ನೇಮಿಸಲಾಗಿದೆ. ಮಾರ್ಗಾಧಿಕಾರಿಗಳ ತಂಡದ 1ನೇ ಅಧಿಕಾರಿ ಅವರ ಸರಕಾರಿ ವಾಹನಕ್ಕೆ ಉಪನಿರ್ದೇಶಕರು ಇರುವರು. ಪದವಿ ಪೂರ್ವ ಶಿಕ್ಷಣ ಇಲಾಖೆ ಧಾರವಾಡ ಇವರ ಕಛೇರಿ ವತಿಯಿಂದ ಪರೀಕ್ಷೆ ಪ್ರಾರಂಭವಾಗುವ 3 ದಿನ ಮುಂಚಿತವಾಗಿ ಜಿಪಿಎಸ್ನ್ನು ಅಳವಡಿಸಲಾಗುವುದು. ಜಿಲ್ಲಾ ತ್ರಿಸದಸ್ಯ ಸಮಿತಿ ವತಿಯಿಂದ ಮಾರ್ಗಾಧಿಕಾರಿಗಳು ಧಾರವಾಡ ಶಹರದ ಹಾಗೂ ಗ್ರಾಮೀಣ ಪ್ರದೇಶದ ಪರೀಕ್ಷಾ ಕೇಂದ್ರಗಳನ್ನು ಹೊರತುಪಡಿಸಿ, ತಾಲ್ಲುಕಿನ ಮಾರ್ಗಾಧಿಕಾರಿಗಳು 2:30 ಗಂಟೆಗೆ ಪರೀಕ್ಷೆ ಪ್ರಾರಂಭದ ಮುಂಚಿತವಾಗಿ ಹಾಜರಿರಬೇಕು, ಉಳಿದ ಮಾರ್ಗಾಧಿಕಾರಿಗಳು 2 ಗಂಟೆ ಮುಂಚಿತವಾಗಿ ಜಿಲ್ಲಾ ಖಜಾನೆಗೆ ಹಾಜರಿದ್ದು, ಪರೀಕ್ಷಾ ಸಾಮಗ್ರಿಗಳನ್ನು ಸ್ವೀಕರಿಸಿ ಸೂಕ್ತ ಪೊಲೀಸ್ ಸಿಬ್ಬಂದಿ ತಂಡದ ಸದಸ್ಯರು, ಪರೀಕ್ಷಾ ಕೇಂದ್ರಗಳ ಮುಖ್ಯ ಅಧಿಕ್ಷಕರು ಮತ್ತು ಪ್ರಶ್ನೆ ಪತ್ರಿಕೆ ಪಾಲಕರಿಗೆ ನೀಡಿ ಸ್ವೀಕೃತಿ ಪಡೆಯಬೇಕೆಂದು ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಹೇಳಿದರು. ಪ್ರತಿ ಪರೀಕ್ಷಾ ಕೇಂದ್ರಕ್ಕೆ ಸರಕಾರಿ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರನ್ನು ಪ್ರಶ್ನೆ ಪತ್ರಿಕೆ ಪಾಲಕರನ್ನಾಗಿ ನೇಮಿಸಲಾಗಿದೆ ಎಂದು ಜಿಲ್ಲೆಯ ಡಿ.ಡಿ.ಪಿ.ಯು ಸುರೇಶ ಕೆ. ಅವರು ಸಭೆಯನ್ನು ನಿರೂಪಿಸಿ, ಮಾತನಾಡಿದರು. ಸಭೆಯಲ್ಲಿ ಧಾರವಾಡ ಜಿಲ್ಲೆಯ ವಿವಿಧ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸರ್ಕಾರಿ ಮತ್ತು ಅನುದಾನಿತ ಖಾಸಗಿ ಕಾಲೇಜಿನ ಪ್ರಾಂಶುಪಾಲರು ಸೇರಿದಂತೆ ಜಿಲ್ಲಾ ಶಿಕ್ಷಣ ಇಲಾಖೆಯ ವಿವಿಧ ಅಧಿಕಾರಿಗಳು ಭಾಗವಹಿಸಿದ್ದರು.

## ಸಾಮೂಹಿಕ ವಿವಾಹ ಪ್ರತಿಯೊಬ್ಬರು ಪ್ರೋತ್ಸಾಹಿಸಿ: ರಾಹುಲ್ ಜಾರಕಿಹೊಳಿ



ಕೊಪ್ಪಳ: ಸಾಮೂಹಿಕ ವಿವಾಹಗಳು ಜಾತ್ಯಾತೀತ ವೇದಿಕೆಗಳಾದಾಗ ಮಾತ್ರ ಸಾಮೂಹಿಕ ವಿವಾಹದ ಉದ್ದೇಶ ಸಾರ್ಥಕತೆ ಪಡೆದುಕೊಳ್ಳಲು ಸಾಧ್ಯವಾಗುತ್ತದೆ ಎಂದು ಸತೀಶ್ ಶುಗರ್ಸ್ನಿರ್ದೇಶಕ, ಯುವ ನಾಯಕ ರಾಹುಲ್ ಜಾರಕಿಹೊಳಿ ಅವರು ಹೇಳಿದರು.

ಕುಷ್ಟಗಿ ತಾಲೂಕಿನ ನಿಲೋಗಲ್ಲ ಗ್ರಾಮದಲ್ಲಿ ಹಮ್ಮಿಕೊಂಡಿದ್ದ ಶ್ರೀ ಮಹರ್ಷಿ ವಾಲ್ಮೀಕಿ ನೂತನ ದೇವಸ್ಥಾನದ ಲೋಕಾರ್ಪಣೆ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ, ವಾಲ್ಮೀಕಿ ನೌಕರರ ಸನ್ಮಾನ ಸಮಾರಂಭ, ಸಾಮೂಹಿಕ ವಿವಾಹ ಹಾಗೂ ಶ್ರೀ ಪ್ರಸನ್ನಾನಂದಪುರಿ ಮಹಾಸ್ವಾಮಿಗಳ ತುಲಾಭಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಸಾಮೂಹಿಕ ವಿವಾಹಗಳು ಅರ್ಥ ಕಳೆದುಕೊಳ್ಳು ತ್ತಿವೆ. ಆದ್ದರಿಂದ ಸಾಮೂಹಿಕ ವಿವಾಹಗಳು ಮೂಲ ಉದ್ದೇಶದೊಂದಿಗೆ ಕಾರ್ಯನಿರ್ವಹಿಸಬೇಕಾದ ಅವಶ್ಯಕತೆ ಇದೆ . 'ಈ ಹಿಂದೆ ಸಾಮೂಹಿಕ ವಿವಾಹಗ ಳ ಬಗ್ಗೆ ಸಮಾಜದಲ್ಲಿ ಎಲ್ಲಿಲ್ಲದ ಗೌರವ, ಧನ್ಯತಾ ಭಾವ ಇರುತ್ತಿತ್ತು. ಆದರೆ ಇತ್ತೀಚಿನ ವರ್ಷಗಳಲ್ಲಿ ಸಾಮೂಹಿಕ ವಿವಾಹಗಳ ಅರ್ಥ ಕಳೆದುಕೊಳ್ಳುತ್ತಿವೆ. ಹೀಗಾಗಿ ಸಾಮೂಹಿಕ ವಿವಾಹಗಳು ಮೂಲ ಅರ್ಥದತ್ತ ಬರಬೇಕಾದರೆ ಸಮಾಜದಲ್ಲಿನ ಪ್ರತಿಯೊಬ್ಬರೂ ಸಾಮೂಹಿಕ ವಿವಾಹಗಳಲ್ಲಿ ವಿವಾಹ ಬಂಧನಕ್ಕೆ ಒಳಗಾಗುವ ಮೂಲಕ ಸಾಮೂಹಿಕ ವಿವಾಹಗಳನ್ನು ಪ್ರೋತ್ಸಾಹಿಸಬೇಕಿದೆ' ಎಂದು ಕರೆ ನೀಡಿದರು.

ಸಾಮೂಹಿಕ ವಿವಾಹಗಳು ಜಾತ್ಯತೀತ ವೇದಿಕೆಗಳಂತೆ ಕಾರ್ಯನಿರ್ವಹಿಸಬೇಕು. ಅಂದಾಗ ಮಾತ್ರ ಶ್ರೇಣಿಕೃತ ಸಮಾಜದಲ್ಲಿ ಸಮಾನತೆ ಮೂಡಲು ಸಾಧ್ಯ. 12ನೇ ಶತಮಾನದಲ್ಲಿಯೇ ಬಸವಾದಿ ಶರಣರು ಸಮಾಜದಲ್ಲಿ ನೆಲೆಯೂರಿರುವ ಜಾತೀಯತೆ ಮನೋಭಾವ ನಿರ್ಮೂಲನೆ ಮಾಡಿ ಸಮಾನತೆಯ ವೇದಿಕೆ ನಿರ್ಮಿಸುವ ನಿಟ್ಟಿನಲ್ಲಿ ಸಾಕಷ್ಟು ಶ್ರಮಿಸಿದ್ದಾರೆ. ಜಾತ್ಯತೀತ ಮನೋಭಾವ ನೆಲೆಸುವುದಕ್ಕಾಗಿ ಅಂತರಜಾತಿ ವಿವಾಹಗಳಿಗೆ ಆದ್ಯತೆ ನೀಡಿದ್ದರು.

ವಾಸ್ತವಾಂಶ ಹೀಗಿದ್ದರೂ ಸಮಾಜದಲ್ಲಿ ಇಂದಿಗೂ ಜಾತೀಯತೆ ಉಳಿದುಕೊಂಡಿರುವುದು ಕಳಕವಳಕಾರಿ ಸಂಗತಿಯಾಗಿದೆ ಎಂದು ಹೇಳಿದರು.

ನಿಲೋಗಲ್ಲ ಗ್ರಾಮದಲ್ಲಿ ಇಂದು ಮಹರ್ಷಿ ವಾಲ್ಮೀಕಿ ನೂತನ ದೇವಸ್ಥಾನದ ಲೋಕಾರ್ಪಣೆ ಮಾಡುತ್ತಿರುವುದು ನನ್ನ ಸೌಭಾಗ್ಯ. ಇನ್ನು ವಾಲ್ಮೀಕಿ ಸಮಾಜ ಶೋಷಣೆ ಒಳಗಾದ ಸಮಾಜ. ಡಾ. ಬಿ. ಆರ್. ಅಂಬೇಡ್ಕರ್ ಅವರು ನೀಡಿರುವ ಸಂವಿಧಾನದಿಂದ ಇಂದು ವಾಲ್ಮೀಕಿ ಸಮಾಜ ಸದೃಢವಾಗುತ್ತಿದೆ. ಕಾರಣ ಸಮಾಜದ ಪ್ರತಿಯೊಬ್ಬರು ಶಿಕ್ಷಕ್ಕೆ ಆದ್ಯತೆ ನೀಡಬೇಕೆಂದ ಅವರು, ಶ್ರೀ ಮಹರ್ಷಿ ವಾಲ್ಮೀಕಿ ಗುರುಪೀಠದ ಜಗದ್ಗುರು ಶ್ರೀ ಪ್ರಸನ್ನಾನಂದಪುರಿ ಮಹಾಸ್ವಾಮಿ ವಾಲ್ಮೀಕಿ ಸಮಾಜ ಸೇರಿದಂತೆ ಎಲ್ಲಾ ಸಮುದಾಯದ ಪ್ರಗತಿಗೆ ಜಾತ್ಯತೀತವಾಗಿ ಶ್ರಮಿಸುತ್ತಿರುವುದನ್ನು ಶ್ಲಾಘಿಸಿದರು.

ಇದೇ ವೇಳೆ ರಾಜನಹಳ್ಳಿ ಮಹರ್ಷಿ ವಾಲ್ಮೀಕಿ ಗುರುಪೀಠದ ಜಗದ್ಗುರು ಶ್ರೀ ಪ್ರಸನ್ನಾನಂದಪುರಿ ಮಹಾಸ್ವಾಮೀಜಿ ಅವರ ತುಲಾಭಾರ ಕಾರ್ಯಕ್ರಮ ನೆರವೇರಿಸಲಾಯಿತು. ಈ ಸಂದರ್ಭದಲ್ಲಿ ಶಾಸಕ ಅಮರೇಗೌಡ ಬಯ್ಯಾಪುರ, ಮುಖಂಡರಾದ ಬಸ್ಸು ಜತ್ತಿ, ಶಿವನಗೌಡ ಪಾಟೀಲ್ ಸೇರಿದಂತೆ ಕುಷ್ಟಗಿ, ನಿಲೋಗಲ್ಲ ಗ್ರಾಮದ ವಾಲ್ಮೀಕಿ ಸಮಾಜದ ಮುಖಂಡರು ಇದ್ದರು.

## ಯುವನಿಧಿ ಯೋಜನೆ: ಸ್ವಯಂ ಘೋಷಣೆ ಗೆ ಫೆ.29 ರವರಗೆ ವಿಸ್ತರಣೆ

ಬೆಳಗಾವಿ: ಕರ್ನಾಟಕ ಸರ್ಕಾರದ ಐದನೇ ಗ್ಯಾಂಟಿ ಯೋಜನೆಯಾದ ಯುವನಿಧಿ ಯೋಜನೆ ಅನುಷ್ಠಾನಗೊಳಿಸುವ ಭಾಗವಾಗಿ ಯುವನಿಧಿ ಯೋಜನೆಯ ನೋಂದಣಿ ಪ್ರಕ್ರಿಯೆಯು ಈಗಾಗಲೇ ಪ್ರಾರಂಭಿಸಲಾಗಿದೆ. ಯುವನಿಧಿ ಯೋಜನೆಯಡಿ ಅರ್ಹತೆ ಹೊಂದಿದ್ದ ಅಭ್ಯರ್ಥಿಗಳು ಈಗಾಗಲೇ ಸೇವಾ ಸಿಂಧು ಪೋರ್ಟಲ್ ನಲ್ಲಿ ಫೆಬ್ರವರಿ-29 ರ ವರೆಗೆ ಸೇವಾ ಸಿಂಧು ಪೋರ್ಟಲ್ ನಲ್ಲಿ ಸ್ವಯಂ ಘೋಷಣೆ ಪ್ರಮಾಣ ಪತ್ರ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಫಲಿತಾಂಶದ ನಂತರ ನಿರುದ್ಯೋಗಿಗಳಾಗಿ 180 ದಿವಸಗಳು ಪೂರೈಸಿದ ಅಭ್ಯರ್ಥಿಗಳಿಗೆ ಜನೆವರಿ-2024 ರಂದು ನೇರ ನಗದು ವರ್ಗಾವಣೆ ಮಾಡಲಗಾಗಿದೆ. ಈ ಯೋಜನೆಯಡಿ ಪ್ರತಿ ತಿಂಗಳು ಪಡೆಯಬೇಕಾದರೆ ಪ್ರತಿ ತಿಂಗಳಲ್ಲಿ ತಾನು ನಿರುದ್ಯೋಗಿಯೆಂದು, ವ್ಯಾಸಂಗ ಮುಂದುವರೆಸುತ್ತಿಲ್ಲ, ಸ್ವಯಂಉದ್ಯೋಗ ಇಲ್ಲ ಎಂದು ಸ್ವಯಂಘೋಷಣೆ ಮಾಡ ಬೇಕಾಗಿರುತ್ತದೆ. ಪ್ರಯೋಜನ ಪಡೆಯುತ್ತಿರುವ ಅಭ್ಯರ್ಥಿಗಳು ಪ್ರತಿ ತಿಂಗಳು 25 ರೊಳಗೆ ಸ್ವಯಂಘೋಷಣೆಕಡ್ಡಾಯವಾಗಿ ಮಾಡಬೇಕು. ಘೋಷಣೆ ಮಾಡದೇಇರುವ ಅಭ್ಯರ್ಥಿಗಳಿಗೆ ನೇರ ನಗದು ವರ್ಗಾವಣೆ ಮಾಡಲಾಗುವುದಿಲ್ಲ. https://sevasindhugs.karnataka.gov.in ವೆಬ್‌ಸೈಟ್ ವೀಕ್ಷಿಸಬಹುದು.

ಹೆಚ್ಚಿನ ವಿವರಗಳಿಗೆ. 0831-2443948 ಸಂಖ್ಯೆಗೆ ಸಂಪರ್ಕಿಸ ಬಹುದು ಎಂದು ಬೆಳಗಾವಿ ಜಿಲ್ಲಾ ಉದ್ಯೋಗ ವಿನಿಮಯ ಅಧಿಕಾರಿಗಳು, ಇವರು ತಿಳಿಸಿದ್ದಾರೆ.

## ಡೇ-ನಲ್ಮ್ ವಿಭಾಗದಲ್ಲಿ ಸಿ.ಆರ್.ಪಿ ಹುದ್ದೆಗೆ ಅರ್ಜಿ ಆಹ್ವಾನ

ಬೆಳಗಾವಿ: ಮಚ್ಚೆ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿನ 2023-24 ನೇ ಸಾಲಿನ ಡೇ-ನಲ್ಮ್ ಯೋಜನೆಯಡಿಲ್ಲಿ "ಸಮುದಾಯ ಸಂಪನ್ಮೂಲ ವ್ಯಕ್ತಿಗಳ" ಹುದ್ದೆಗಳನ್ನು ಗೌರವಧನ ಆಧಾರದ ಮೇಲೆ ತಾತ್ಕಾಲಿಕವಾಗಿ ನೇಮಕಾತಿ ಮಾಡಿಕೊಳ್ಳಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

18 ರಿಂದ 45 ವಯೋಮಿತಿ ಒಳಗಿರಬೇಕು, ಒಂದು ಹುದ್ದೆ ಮಾತ್ರ ಇದ್ದು ಸಂಪನ್ಮೂಲ ವ್ಯಕ್ತಿಗಳಾಗಿ ನೇಮಕವಾಗುವವ-ರಿಗೆ ಮಾಸಿಕ ಗೌರವಧನ ಮೇಲೆ ರೂ.8000 ಪ್ರಯಾಣ ದರ ರೂ.2000 ನೀಡಲಾಗುವುದು. ಕನಿಷ್ಠ ದ್ವಿತಿಯ ಪಿಯುಸಿ ಉತ್ತೀರ್ಣರಾಗಿರಬೇಕು.

ಒಂದು ವೇಳೆ ಹೆಚ್ಚುವರಿ ವಿದ್ಯಾರ್ಹತೆ ಹೊಂದಿದ್ದಲ್ಲಿ ಅಂತಹ ಸದಸ್ಯರಿಗೂ ಸಹ ಆಧ್ಯತೆ ನೀಡುವುದು. ಅವರು ಡೇ-ನಲ್ಮ ನ ಪ್ರದೇಶ ಮಟ್ಟದ ಒಕ್ಕೂಟ/ ಸ್ವ-ಸಹಾಯ ಸಂಘದಲ್ಲಿ 3 ವರ್ಷಗಳ ಅವಧಿಗೆ ಸದಸ್ಯರಾಗಿರಬೇಕು, ಒಂದು ವೇಳೆ 3 ವರ್ಷಗಳ ನಂತರದಲ್ಲಿ ನಗರ ಸ್ಥಳೀಯ ಸಂಸ್ಥೆಗಳು ಹೊಸದಾಗಿ ಸೃಜನೆಯಾಗಿದ್ದಲ್ಲಿ. ಅಂತಹ ನಗರ ಸ್ಥಳೀಯ ಸಂಸ್ಥೆಗಳ ಸದಸ್ಯತ್ವದ ಅವಧಿಯು ಅನ್ವಯವಾಗುವುದಿಲ್ಲ, ಕನಿಷ್ಠ ಕಂಪ್ಯೂಟರ್ ನಿರ್ವಹಣೆಯ ಜ್ಞಾನ ಹೊಂದಿರಬೇಕು ಹಾಗೂ ಪ್ರಮಾಣ ಪತ್ರ ಹೊಂದಿರಬೇಕು, ಸ್ವ-ಸಹಾಯ ಸಂಘವು ಪ್ರದೇಶ ಮಟ್ಟದ ಒಕ್ಕೂಟದ ಸದಸ್ಯತ್ವವನ್ನು ಪಡೆದಿರಬೇಕು.

ಒಂದು ವೇಳೆ ಹೊಸದಾಗಿ ರಚಿಸುವ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಒಕ್ಕೂಟಗಳು ಇಲ್ಲದಿದ್ದಲ್ಲಿ ಒಕ್ಕೂಟದಲ್ಲಿ ಸದಸ್ಯತ್ವದ ಅಂಶವು ಅನ್ವಯವಾಗುವುದಿಲ್ಲ, ಅಭ್ಯರ್ಥಿಯು ಸ್ವ-ಸಹಾಯ ಸಂಘದಿಂದ ಸಾಲ ಪಡೆದು, ಮರುಪಾವತಿಸಬೇಕು/ ಚಾಲ್ತಿಯಲ್ಲಿರಬೇಕು, ಅಭ್ಯರ್ಥಿಯು ಸ್ವ-ಸಹಾಯ ಸಂಘದಿಂದ ಪಡೆದ ಸಾಲ ಮರುಪಾವತಿಸದೇ ಸುಸ್ತಿದಾರರಾಗಿರಬಾರದು, ಸಮುದಾಯ ಸಂಪನ್ಮೂಲ ವ್ಯಕ್ತಿಗಳು ಸಂಬಂಧಪಟ್ಟ ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ ವಾಸಿಸುತ್ತಿರಬೇಕು ಹಾಗೂ ಇತರೆ ಅಂಶಗಳನ್ನು ಪರಿಗಣಿಸಲಾಗುವುದು.

ಅರ್ಹ ಫಲಾನುಭವಿಗಳು ಮಾರ್ಚ 12, ಸಂಜೆ 5 ರೊಳಗಾಗಿ ಸ್ವಯಂ ದೃಡೀಕೃತ ದಾಖಲೆಗಳೊಂದಿಗೆ ಕಾರ್ಯಾಲಯದ ಅವಧಿಯಲ್ಲಿ ಅರ್ಜಿ ನಮೂನೆಯನ್ನು ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಮಚ್ಚೆ ಪಟ್ಟಣ ಪಂಚಾಯತಿ ಕಾರ್ಯ ಲಯಕ್ಕೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಯಾಗಿ ಪಟ್ಟಣ ಪಂಚಾಯತಿ ಕಾರ್ಯಾಲಯಕ್ಕೆ ಸಂಪರ್ಕಿಸಬೇಕು ಎಂದು ಮಚ್ಚೆ ಪಟ್ಟಣ ಪಂಚಾಯತಿ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂಟರ್ ಶಿಪ್ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಮಚ್ಚೆ ಪಟ್ಟಣ ಪಂಚಾಯತಿ ಕಾರ್ಯಾಲಯ 2023-24 ನೇ ಸಾಲಿನ ಡೇ-ನಲ್ಮ್ ಅಭಿಯಾನ ಮತ್ತು ಪಿ.ಎಂ.ಸ್ವ-ನಿಧಿ ಯೋಜನೆಯಡಿ ನಗರ ಕಲಿಕಾ ಪ್ರಯೋಗಿಕ ತರಬೇತಿ ಕಾರ್ಯಕ್ರಮ ( The Urban Learning Intership Programme – TULIP) ಅನುಷ್ಠಾನಗೊಳಿಸಲು, ಮಚ್ಚೆ ಪಟ್ಟಣದ ಅಭ್ಯರ್ಥಿಗಳಿಗೆ ಇಂಟರ್ ಶಿಪ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಸಲ್ಲಿಕೆಯಾದ ಅರ್ಜಿಗಳಲ್ಲಿ 02 ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ತರಬೇತಿ ಅವಧಿಯು 8 ರಿಂದ 12 ವಾರಗಳವರೆಗೆ ನೀಡಲಿದ್ದು, ಆಸಕ್ತಿ ಇರುವ ಅಭ್ಯರ್ಥಿಗಳು https://internship.aicteindia.org/module ulb/Dashboard/TulipMain/ ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್ ಒಂದು ಪ್ರತಿಯನ್ನು ಪಟ್ಟಣ ಪಂಚಾಯತಿ ಮಚ್ಚೆ ಡೇ-ನಲ್ಮ್ ಶಾಖೆಗೆ ಸಲ್ಲಿಸಬೇಕು.


ಅರ್ಹತೆಗಳು ವಿದ್ಯಾರ್ಥಿಗಳಿಗೆ ಪದವಿ/ಸ್ನಾತಕೋತರ ಪದವಿ/ ಡಿಪ್ಲೋಮಾ ಮುಗಿಸಿದ 3 ವರ್ಷದೊಳಗಿನವರಾಗಿರಬೇಕು. ನಗರ ಸ್ಥಳೀಯ ಸಂಸ್ಥೆಯಲ್ಲಿ ವಿವಿಧ ವಿಭಾಗಳಿಲ್ಲಿ ಕೆಸಲ ಕಾರ್ಯಗಳ ತಾತ್ಕಾಲಿಕ ಪ್ರಾಯೋಗಿಕ ತರಬೇತಿ ಪಡೆದುಕೊಳ್ಳಲು ಆಸಕ್ತಿ ಹೊಂದಿರಬೇಕು.

ಶಿಬಿರಾರ್ಥಿಯು ಯಶಸ್ವಿಯಾಗಿ ತರಬೇತಿ ಪೂರೈಸಿ ಪ್ರೆಸೆಂಟೇಶನ ನೀಡಿದ ನಂತರದಲ್ಲಿ ತುಣುಕುಗಳನ್ನು ಪರಿಶೀಲಿಸಿ ಪ್ರಮಾಣ ಪತ್ರ ನೀಡಲಾಗುವುದು. 5000 ರೂ ಸರ್ಕಾರದ ನಿಯಮದಂತೆ ಗೌರವಧನ ಬಿಡುಗಡೆ ಮಾಡಲಾಗುವುದು. ಸ್ಥಳೀಯ ಸಂಸ್ಥೆ ವ್ಯಾಪ್ತಿಯ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು.

ಅರ್ಹ ಫಲಾನುಭವಿಗಳು ಕೊನೆಯ ಮಾ.12 ಸಂಜೆ 5 ಗಂಟೆಯ ಒಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಮಚ್ಚೆ ಪಟ್ಟಣ ಪಂಚಾಯತಿ ಕಾರ್ಯಾಲಯಕ್ಕೆ ಸಂಪರ್ಕಿಸಬೇಕು ಎಂದು ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಾ.2ರಂದು ಲಿಂಗಪೂಜೆ ಮೂಲಕ ಬ್ರಹತ್ ಪ್ರತಿಭಟನೆ

# ಮೀಸಲಾತಿ ಸಿಗುವವರೆಗೂ ಹೋರಾಟ ನಿಲ್ಲದು: ಜಯಮೃತ್ಯುಂಜಯ ಶ್ರೀ



ಕೆಂಭಾವಿ: ನಮ್ಮ ಹೋರಾಟದಿಂದಲೆ ಅಧಿಕಾರಕ್ಕೆ ಬಂದ ಶಾಸಕರು, ಸಚಿವರುಗಳು ಮೀಸಲಾತಿ ಕು-ರಿತು ಮುಖ್ಯಮಂತ್ರಿಗಳ ಮುಂದೆ ಮಾತನಾಡುವದಕ್ಕೆ ಹಿಂದೆ ಮುಂದೆ ನೋಡುತ್ತಿದ್ದಾರೆ. ವಿರೋಧ ಪಕ್ಷದಲ್ಲಿದ್ದಾಗ ಜೋರಾಗಿ ಮಾತನಾಡುತ್ತಿದ್ದವರೆಲ್ಲರೂ ಇಂದು ಮೌನಕ್ಕೆ ಶರಣಾಗಿದ್ದಾರೆ ಎಂದು ಪಂಚಮಸಾಲಿ ಮಹಾಪೀಠದ ಜಗದ್ಗುರು ಬಸವ ಜಯಮೃತ್ಯುಂಜಯ ಸ್ವಾಮೀಜಿ ಹೇಳಿದರು.

ಪಟ್ಟಣದ ಸೊನ್ನದ ಬಡಾವಣೆಯ ಸಿದ್ದೇಶ್ವರ ದೇವಸ್ಥಾನದಲ್ಲಿ ಪಂಚಮಸಾಲಿ 2ಎ ಮೀಸಲಾತಿಗೆ ಆಗ್ರಹಿಸಿ ನಡೆದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಪಂಚಮಸಾಲಿ ಸಮುದಾಯಕ್ಕೆ 2ಎ ಮೀಸಲಾತಿ ಸಿಗುವವರೆಗೂ ಹೋರಾಟ ನಿಲ್ಲದು. ಯಾವದೆ ಪಕ್ಷದ ಸರಕಾರ ಬಂದರೂ ನಾವು ಎದೆಗುಂದದೆ ಹೋರಾಟ ನಡೆಸುತ್ತೆವೆ ಸುಮಾರು 3 ವರ್ಷಗಳಿಂದ ಸತತವಾಗಿ ಮೀಸಲಾತಿಗಾಗಿ ಹೋರಾಟ ಮಾಡುತ್ತಾ ಬರುತ್ತಿದ್ದೆವೆ.

ಎರಡು ಸರಕಾರಗಳು ಬದಲಾದವು, ಮೂರು ಮುಖ್ಯಮಂತ್ರಿಗಳು ಬದಲಾದರೂ ನಮ್ಮ ಸಮುದಾಯಕ್ಕೆ ಇನ್ನೂ ನ್ಯಾಯ ಸಿಕ್ಕಿಲ್ಲ. ಎಲ್ಲ ಮುಖ್ಯಮಂತ್ರಿಗಳು ಕೇವಲ ಮಾಡುತ್ತೆವೆ, ನೋಡುತ್ತೆವೆ ಎನ್ನುವದಕ್ಕೆ ಸೀಮಿತವಾಗಿದ್ದಾರೆ. ನಮ್ಮ ಸಮಾಜದ ಮಕ್ಕಳಿಗೆ ಶೈಕ್ಷಣಿಕವಾಗಿ, ಔದ್ಯೋಗಿಕವಾಗಿ ಮೀಸಲಾತಿಯಿಂದ ಸಾಕಾಷ್ಟು ಲಾಭ ದೊರೆಯುತ್ತದೆ. ಮಾ.2, ಶನಿವಾರದಂದು ಹುಣಸಗಿ ಪಟ್ಟಣದ ಹೆದ್ದಾರಿಯಲ್ಲಿ ಯಾದಗಿರಿ ಜಿಲ್ಲೆಯ ವತಿಯಿಂದ ಲಿಂಗಪೂಜೆ ಮೂಲಕ ಪಂಚಮಸಾಲಿ ಬೃಹತ್ ಹೋರಾಟವನ್ನು ಮಾಡಲಾಗುವದು. ಮಾ.10 ರಂದು ಕಲಬುರಗಿಯಲ್ಲಿ ಪ್ರಥಮ ಬಾರಿಗೆ ಕಲ್ಯಾಣ ಕರ್ನಾಟಕ ಪಂಚಮಸಾಲಿಯ ಬೃಹತ್ ಹೋರಾಟವನ್ನು ಹಮ್ಮಿಕೊಳ್ಳಲಾಗುವದು. ಸಮಾಜದ ಬಾಂಧವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

> ನಮ್ಮ ಹೋರಾಟ ಯಾವದೇ ಪಕ್ಷದ ಪರ ವಿರೋಧವಲ್ಲ. ಯಾರೆ ಸರಕಾರದಲ್ಲಿದ್ದರೂ ನಾವು ಅವರ ವಿರುದ್ಧ ಹೋರಾಡುತ್ತೆವೆ. ನಮ್ಮ ಪಂಚಮಸಾಲಿ ಸಮಾಜಕ್ಕೆ ನ್ಯಾಯ ಸಿಗುವವರೆಗೂ ಹೋರಾಟ ಮುಂದುವರೆಯುತ್ತದೆ. ಪಂಚಮಸಾಲಿ, ದೀಕ್ಷಾ ಪಂಚಮಸಾಲಿಯನ್ನು ಪ್ರವರ್ಗ 2ಎಗೆ ಸೇರಿಸಬೇಕು ಹಾಗೂ ಕೇಂದ್ರದಲ್ಲಿ ವೀರಶೈವ ಲಿಂಗಾಯತವನ್ನು ಓಬಿಸಿ ವರ್ಗಕ್ಕೆ ಸೇರಿಸಬೇಕು ಎಂಬುದು ನಮ್ಮ ಒತ್ತಾಯ.
>
> -ಪಂಚಮಸಾಲಿ ಮಹಾಪೀಠದ ಜಗದ್ಗುರು ಬಸವ ಜಯಮೃತ್ಯುಂಜಯ ಸ್ವಾಮೀಜಿ

ಪ್ರಮುಖರಾದ ಶರಣಪ್ಪ ಬಂಡೋಳಿ, ಬಸವರಾಜ ಅಂಗಡಿ ಮಾತನಾಡಿದರು. ಸಮಾಜದ ಜಿಲ್ಲಾಧ್ಯಕ್ಷ ಮಲ್ಲನಗೌಡ, ಮುಖಂಡರಾದ ಸಂಗಣ್ಣ ತುಂಬಗಿ, ಬಸವರಾಜ ಮಲಗಲದಿನ್ನಿ, ಮುರೆಗೆಣ್ಣ ದೇಸಾಯಿ, ಭೀಮು ಮಲ್ಲಾಪುರ, ಶಿವಣ್ಣ ಬಳಬಟ್ಟಿ, ಈರಣ್ಣ ಸೊನ್ನದ, ರಮೇಶ ಸೊನ್ನದ, ಮಲ್ಲನಗೌಡ, ರಮೇಶ ತುಂಬಗಿ, ಭೋಗಪ್ಪ ಅಸ್ಕಿ, ಬಸವರಾಜ ಬೈಚಬಾಳ, ಚೆನ್ನು ವಾಲಿ, ಚಂದ್ರು ಡೊಣ್ಣುರು, ಚಂದ್ರು ಮನಗೂಳಿ, ನಿಂಗಣ್ಣ ಅವಟಿ, ವೀರೇಶ ಮಲ್ಲಾ, ಸೋಮು, ಸಂತೋಷ, ಶಂಕರ ಬಿರಾದಾರ ಸೇ-ರಿದಂತೆ ಇತರರಿದ್ದರು.

ಇದೇ ಸಂದರ್ಭದಲ್ಲಿ ಹೊನ್ನಪ್ಪಗೌಡ ಮೇಟಿ ಮುದನೂರ ಇವರನ್ನು ಪಂಚಮಸಾಲಿ ಸಮುದಾಯದ ಯಾದಗಿರಿ ಜಿಲ್ಲಾ ಉಪಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಯಿತು. ನಾಗಭೂಷಣ ನಿರೂಪಿಸಿದರು. ಡಿ.ಸಿ.ಪಾಟೀಲ ಸ್ವಾಗತಿಸಿದರು. ಗೀರೀಶ ಬ್ಯಾಕೋಡ ವಂದಿಸಿದರು.

## ವೀರರಾಣಿ ಬೆಳವಡಿ ಮಲ್ಲಮ್ಮನ ಉತ್ಸವ -2024

## ಜ್ಯೋತಿ ಯಾತ್ರೆಯನ್ನು ಸ್ವಾಗತಿಸಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ



ಬೆಳಗಾವಿ: ಬೆಳವಡಿಯಲ್ಲಿ ವೀರರಾಣಿ ಬೆಳವಡಿ ಮಲ್ಲಮ್ಮನ ಉತ್ಸವದ ಹಿನ್ನಲೆಯಲ್ಲಿ ಮಂಗಳವಾರ (ಫೆ.27) ನಗರಕ್ಕೆ ಆಗಮಿಸಿದ ವೀರ ಜ್ಯೋತಿಯನ್ನು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಕಿತ್ತೂರು ರಾಣಿ ಚನ್ನಮ್ಮ ವೃತ್ತದಲ್ಲಿ ಪೂಜೆ ಸಲ್ಲಿಸುವ ಮೂಲಕ ಅದ್ದೂರಿಯಾಗಿ ಬರಮಾಡಿಕೊಂಡರು.

ಬಳಿಕ ವೀರರಾಣಿ ಬೆಳವಡಿ ಮಲ್ಲಮ್ಮನ ಉತ್ಸವದ ವೀರ ಜ್ಯೋತಿಯನ್ನು ಬೈಲಹೊಂಗಲ ವರೆಗೆ ಸಂಚರಿಸಲು ಬೀಳ್ಕೊಡಲಾಯಿತು.

ಈ ಸಂದರ್ಭದಲ್ಲಿ ಬೆಳಗಾವಿ ತಹಶೀಲ್ದಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ ವಿವಿಧ ಇಲಾಖೆಯ ಅಧಿಕಾ-ರಿಗಳು, ಸಿಬ್ಬಂದಿಗಳು, ಮತ್ತಿತರು ಹಾಜರಿದ್ದರು.

ಬೈಲಹೊಂಗಲ ಅನಿಗೋಳ-ನಯಾನಗರ- ಸಂಗೊಳ್ಳಿ-ಪಟ್ಟಿಹಾಳ.ಕೆ.ಬಿ ಮಾರ್ಗವಾಗಿ ಸಿದ್ದಸಮುದ್ರ ಮಠಕ್ಕೆ ಜ್ಯೋತಿ ಆಗಮಿಸಿ, ವಾಸ್ತವ್ಯ ಇರಲಿದೆ.

ಫೆ 28 ಬೆಳಿಗ್ಗೆ 10 ಗಂಟೆಗೆ ಬೆಳವಡಿಗೆ ಜ್ಯೋತಿಯ ಆಗಮನ ವಾಗಲಿದ್ದು, ಬೈಲಹೊಂಗಲ ಶಾಸಕ ಮಹಾಂತೇಶ ಕೌಜಲಗಿ ಅವರು ಜ್ಯೋತಿಯನ್ನು ಸ್ವಾಗತಿಸಲಿದ್ದಾರೆ ಎಂದು ಬೈಲಹೊಂಗಲ ಉಪ ವಿಭಾಗಾಧಿಕಾರಿಗಳು ಹಾಗೂ ಜ್ಯೋತಿ ಉಪಸಮಿತಿ ಅಧ್ಯಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಮ್ಸ್ ಆಸ್ಪತ್ರೆ ರಾಷ್ಟ್ರ ಮಟ್ಟದಲ್ಲಿ ಹೆರಿಗೆ ಮತ್ತು ಚಿಕ್ಕಮಕ್ಕಳ ಶಾಸ್ತ್ರ ವಿಭಾಗದಲ್ಲಿ ಉತ್ತಮ

ಬೆಳಗಾವಿ: ಬೆಳಗಾವಿ ಬಿಮ್ಸ್ ಭೋದಕ ಆಸ್ಪತ್ರೆಯಲ್ಲಿ ಹಲವಾರು ವಿಭಾಗಗಳು ಕಾರ್ಯನಿರ್ವಹಿಸುತ್ತಿದ್ದು, ಎಮ್.ಸಿ.ಹೆಚ್ ಬ್ಲಾಕಿನ್ ಹೆ-ರಿಗೆ ವಿಭಾಗ, ಹೆರಿಗೆ ಶಸ್ತ್ರ ಚಿಕಿತ್ಸಾ ವಿಭಾಗ ಚಿಕ್ಕ ಮಕ್ಕಳ ಶಾಸ್ತ್ರದಲ್ಲಿ ಓ.ಪಿ.ಡಿ, ಚಿಕ್ಕಮಕ್ಕಳ ವಾರ್ಡ, ಎನ್.ಆರ್.ಸಿ ಮತ್ತು ನವಜಾತ ಶಿಶುಗಳ ತಿರ್ವ ನಿಘಾ ಘಟಕದಲ್ಲಿ (ಸಿಎನ್‌ಸಿಯು) ರಾಷ್ಟ್ರಮಟ್ಟದ ಖಾತ್ರಿ ಗುಣಮಟ್ಟದ ಮೌಲ್ಯಮಾಪನಕ್ಕೆ ಒಳಪಟ್ಟು ನೂರಕ್ಕೆ 97.98% ಮತ್ತು ಪ್ರತಿಶತ ಅಂಕ ಪಡೆದು ಪ್ಲಾಟಿನಮ್ ಗ್ರೇಡ್‌ನಲ್ಲಿ ಪ್ರಶಸ್ತಿ ಪಡೆದುಕೊಂಡಿದೆ. ಬೆಳಗಾವಿ ಬಿಮ್ಸ್ ಆಸ್ಪತ್ರೆ ಹೆರಿಗೆ ಮತ್ತು ಚಿಕ್ಕಮಕ್ಕಳ ಶಾಸ್ತ್ರ ವಿಭಾಗದಲ್ಲಿ ರಾಷ್ಟ್ರ ಮಟ್ಟದಟಲ್ಲಿ ಉತ್ತಮ ಗುಣಮಟ್ಟ ಪಡೆದಿದೆ. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಮದುರ್ಗ ಪುರಸಭೆ: ವಿವಿಧ ಸೌಲಭ್ಯಗಳಿಗಾಗಿ ಅರ್ಜಿ ಅಹ್ವಾನ

ಬೆಳಗಾವಿ: ರಾಮದುರ್ಗ ಪುರಸಭೆಯ ಸನ್ 2022-23 ಹಾಗೂ 2023-24 ನೇ ಸಾಲಿನ ಪುರಸಭೆ ನಿಧಿ ಅನುದಾನದ ಅಡಿಯಲ್ಲಿ ಶೇ. 24.10 ರ ಯೋಜನೆಯಲ್ಲಿ ಪರಿಶಿಷ್ಟ ಜಾತಿ/ಪಂಗಡದ (ಟಿ.ಎಸ್.ಪಿ) ಮ್ಯಾಟ್ರಿಕ್ ನಂತರದ ಅರ್ಹ ವಿದ್ಯಾರ್ಥಿಗಳಿಗೆ ಸಹಾಯಧನ ನೀಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಶೇ.7.25 ರಷ್ಟು ಬಡ ಜನರ ಮನೆಗಳಿಗೆ ಸೋಲಾರ ದೀಪ ಅಳವಡಿಸುವದು. ಶೇ.5 ರಷ್ಟು ಪುರಸಭೆ ವ್ಯಾಪ್ತಿಯಲ್ಲಿನ ಅಂಗವಿಕಲ-ರಿಗೆ ಅಂಗದೃಷ್ಠಿ ದೋಶ ಹಾಗೂ ಶ್ರವಣದೋಷ ಇರುವ ಅರ್ಹ ಫಲಾನುಭವಿಗಳಿಗೆ ಶ್ರವಣಯಂತ್ರ ಹಾಗೂ ಕನ್ನಡಕ ಪೂರೈಸಲಾಗುವುದು. ಶೇ. 24.10 ಕಾಯ್ದಿರಿಸಿದ ಯೋಜನೆ ಅಡಿಯಲ್ಲಿ ಪ.ಜಾ/ಪ.ಪಂ ಜನರ ಮನೆಗಳಿಗೆ ಹಾಗೂ ಇತರೆ ಬಡ ಜನರ ಶೇ.7.25 ರಷ್ಟು, ಅಂಗವಿಕಲರ ಮನೆಗಳಿಗೆ ಶೇ.5 ರಷ್ಟು ಮನೆ ಮನೆಗೆ ಒಳಚರಂಡಿ ಸಂಪರ್ಕ ಕಲ್ಪಿಸುವದು. ಅರ್ಜಿ ಸಲ್ಲಿಸುವವರು ಪಟ್ಟಣದ ಖಾಯಂ ರಹವಾಸಿಗಳಾಗಿ ರಬೇಕು ಹಾಗೂ ಪುರಸಭೆಯಿಂದ ಹಿಂದೆ ಯಾವುದೆ ಸೌಲಭ್ಯವನ್ನು ಪಡೆದಿರಬಾರದು ಫೆ.29 ರಂದು ಸಂಜೆ 5 ಗಂಟೆಯವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಯಾಲಯದ ಅವಧಿಯಲ್ಲಿ ವಿಷಯ ನಿರ್ವಾಹಕರಿಂದ ಮಾಹಿತಿ ಪಡೆಯಬಹುದು ಎಂದು ರಾಮದುರ್ಗ ಪುರಸಭೆ ಮುಖ್ಯಾಧಿಕಾ-ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಷ್ಟ್ರೀಯ ರಸ್ತೆ ಸುರಕ್ಷಾ ಮಾಸಾಚರಣೆ: ಜಾಗೃತಿ ಜಾಥಾ

ಬೆಳಗಾವಿ: ರಾಷ್ಟ್ರೀಯ ರಸ್ತೆ ಸುರಕ್ಷಾ ಮಾಸಾಚರಣೆ-2024ರ ಸಮಾರೋಪದ ಹಿನ್ನಲೆಯಲ್ಲಿ ಜಿಲ್ಲಾಡಳಿತ, ಸಾರಿಗೆ, ಪೊಲೀಸ್ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಸಂಂ-ಮುಕ್ತಾಶ್ರಯದಲ್ಲಿ ಗುರುವಾರ (ಫೆ.29) ರಸ್ತೆ ಸುರಕ್ಷತೆಗಾಗಿ ಕಾಲ್ನಡಿಗೆ ಜಾಥಾವನ್ನು ಹಮ್ಮಿಕೊಳ್ಳಲಾಗಿದೆ.

ಆರ್ಟಿ.ಓ ವೃತ್ತದಿಂದ ಪ್ರಾರಂಭವಾದ ಜಾಥಾ ರಾಣಿ ಚನ್ನಮ್ಮ ವೃತ್ತದ ಮಾರ್ಗವಾಗಿ ಕೊಲ್ಲಾಪುರ ಸರ್ಕಲ್ ವರೆಗೆ ಸಂಚರಿಸಿ ಬಳಿಕ ಮತ್ತೆ ರಾಣಿ ಚನ್ನಮ್ಮ ವೃತ್ತದವರೆಗೆ ಬಂದು ತಲುಪಲಿದೆ ಎಂದು ಬೆಳಗಾವಿ ಪ್ರಾದೇಶಿಕ ಸಾರಿಗೆ ಅಧಿಕಾ-ರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಸಮುದಾಯ ಭವನದ ಭೂಮಿ ಪೂಜೆ



ಬೆಳಗಾವಿ: ಶಿಂದೋಳಿ ಗ್ರಾಮದ ಗಂಗಾಧರ ನಗರದಲ್ಲಿ ಮಾನ್ಯ ರಾಜ್ಯಸಭಾ ಸದಸ್ಯರಾದ ಶ್ರೀ ಈರಣ್ಣ ಕಡಾಡಿಯವರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ನಿರ್ಮಿಸಲು ಉದ್ದೇಶಿಸಿರುವ ಸಮುದಾಯ ಭವನದ ಭೂಮಿ ಪೂಜೆಯನ್ನು ಶ್ರೀಯುತ ಈರಣ್ಣ ಕಡಾಡಿಯವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಶಿಂದೋಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ಸತೀಶ್ ಶಾಪೂರಕರ್, ಧನಂ-ಜಯ ಜಾಧವ, ನಿತೀನ ಚೌಗುಲೆ, ಬಾಲಚಂದ್ರ ಬೆಳವಲ, ಗುಂಡಪ್ಪ ಕಣಬರಗಿ, ವೀರಭದ್ರಯ್ಯ ಪೂಜಾರ, ಶೇರಶಿಂಗ, ಶಿವಯೋಗಿ ಕರಡಿಗುದ್ದಿ, ಶಿವಾಪೂರ, ಸಂಜೀವ ತಳವಾರ, ರಾಜು ಪಾಟೀಲ, ಮಂಜುನಾಥ ಹುಬ್ಬಳ್ಳಿ, ಯಲ್ಲೇಶ ಕೋಲ್ಕಾರ, ಯಲ್ಲಪ್ಪ ಶಾಪೂರಕರ್ ಮತ್ತು ನಗರದ ನಿವಾಸಿಗಳು ಉಪಸ್ಥಿತರಿದ್ದರು.

## ಕೆಎಲ್‌ಇ ಶತಮಾನೋತ್ಸವ ಚಾರಿಟಬಲ್ ಆಸ್ಪತ್ರೆಯಲ್ಲಿ ನೋವಿಲ್ಲದ ಮೊನಕಾಲು ಬದಲಾವಣೆ ಶಸ್ತ್ರಚಿಕಿತ್ಸೆ



ಬೆಳಗಾವಿ: ನಗರದ ಕೆ ಎಲ್ ಇ ಶತಮಾನೋತ್ಸವ ಚಾರಿಟಬಲ್ ಆಸ್ಪತ್ರೆಯ ಹೆಸರಾಂತ ಎಲುಬು ಕೀಲು ತಜ್ಞರಾದಡಾ. ಜಗದೀಶ ಸುರಣ್ಣವರ ಅವರಿಂದ 65 ವರ್ಷದವ್ಯಕ್ತಿಗೆ ನೋವಿಲ್ಲದ ಮೊನಕಾಲಿನ ಚಿಪ್ಪು ಬದಲಾವಣೆಯನ್ನು ಯಶಸ್ವಿಯಾಗಿ ಮಾಡಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಡಾ. ಜಗದೀಶ ಸುರಣ್ಣವರ ಅವರು"ಸಾಮಾನ್ಯವಾಗಿ ಮೊನಕಾಲಿನ ಚಿಪ್ಪಿನ ಬದಲಾವಣೆಯ ಸಂದರ್ಭದಲ್ಲಿ ಕೆಲ ರೋಗಿಗಳು ನೋವಿನ ಕಾರಣದಿಂದ ಹಿಂಜರಿಯುವದುಂಟು ಆದರೆ ಇತ್ತೀಚಿನ ವೈದ್ಯಕೀಯ ಸಂಶೋಧನೆಗಳ ಫಲಶ್ರುತಿಯಾಗಿ ರೋಗಿಗಳಿಗೆ ಸಣ್ಣ ಪ್ರಮಾಣದಲ್ಲಿ ಕತ್ತ-ರಿಸುವಿಕೆಗೆ ಒಳಗಾಗಿ, ಕಡಿಮೆರಕ್ತಸ್ರಾವ, ಸಣ್ಣ ಪ್ರಮಾಣದ ಅರವಳಿಕೆ, ಮಾಂಸ ಖಂಡದ ಕತ್ತರಿಸುವಿಕೆಯಿಲ್ಲದೇ (ಸಬ್ ವ್ಯಾಸ್ಟಸ ಅಪ್ರೋಚ), ಶಸ್ತ್ರಚಿಕಿತ್ಸೆಯ ನಂತರ ಭೌತಿಕ ಚಿಕಿತ್ಸೆಯ ಅವಶ್ಯವಿಲ್ಲದೇ, ನೋವು ಅನುಭವಕ್ಕೆ ಬಾರದೇ ಶಸ್ತ್ರಚಿಕಿತ್ಸೆಯಾದ ಕೇವಲ ಆರೇಘಂಟೆಯಲ್ಲಿ ಎದ್ದು ಅಡ್ಡಾಡುವಂತೆ ಮಾಡಬಹುದಾದ ಇಂತಹ ಶಸ್ತ್ರಚಿಕಿತ್ಸೆಯಂತಹ ಕೆಲಸಗಳು ಸರಾಗವಾಗಿ ಸಾಗುವಂತೆ ಮಾಡಿದೆ. "ಎಂದು ಮಾತನಾಡಿದರು.

ಎಲುಬು ಕೀಲು ಶಸ್ತ್ರಚಿಕಿತ್ಸಜ್ಞಡಾ. ಜಗದೀಶ ಸುರಣ್ಣವರ, ಅವರ ತಂಡ ಕಾರ್ಯದಲ್ಲಿ ಆಸ್ಪತ್ರೆಯ ಡಾ. ರೇವಂತ ಜಿ ಎಸ್ ಹಾಗೂ ಅರವಳಿಕೆ ತಜ್ಞಡಾ. ಆರ ಜಿ ನೆಲವಿಗಿ ಅವರ ಸಹಯೋಗದಲ್ಲಿ ಸಫಲವಾಗಿ ಮಾಡಲಾಗಿದೆ. ಈ ಸಂದರ್ಭದಲ್ಲಿ ಎಲುಬು ಕೀಲು ವಿಭಾಗದ ಮುಖ್ಯಸ್ಥರು ಹಾಗೂ ಇನ್ನುಳಿದ ವೈದ್ಯರು ಸಫಲವಾಗಿ ಶಸ್ತ್ರಚಿಕಿತ್ಸೆ ಮಾಡಿದ ವೈದ್ಯರಿಗೆ ಶುಭಾಶಯ ಕೋರಿದರು.

ಈ ಸಂದರ್ಭದಲ್ಲಿ ಕೆ ಎಲ್ ಇ ಶತಮಾನೋತ್ಸವ ಚಾರಿಟೆಬಲ್ ಆಸ್ಪತ್ರೆಯ ನಿರ್ದೇಶಕರಾದ ಡಾ.ಎಸ್ ಸಿ ಧಾರವಾಡ ಅವರು, ಯುಎಸ್‌ಎಮ್ ಕೆ ಎಲ್ ಇ ಯ ನಿರ್ದೇಶಕರಾದ ಡಾ. ಹೆಚ್ ಬಿ ರಾಜಶೇಖರ ಅವರು ವೈದ್ಯರ ತಂಡಕ್ಕೆ ಅಭಿನಂದಿಸಿದ್ದಾರೆ. ಕೆ ಎಲ್ ಇ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಡಾ.ಪ್ರಭಾಕರ ಕೋರೆ ಅವರು ಮೆಚ್ಚುಗೆ ವ್ಯಕ್ತ ಪಡಿಸಿದ್ದಾರೆ.

## ದ್ವಿತೀಯ ಪಿ.ಯು.ಸಿ ವಾರ್ಷಿಕ ಪರೀಕ್ಷೆ: ನಿಷೇಧಾಜ್ಞೆ ಜಾರಿ

ಬೆಳಗಾವಿ: ಜಿಲ್ಲೆಯಾದ್ಯಂತ ಮಾ. 01 ರಿಂದ ಮಾ. 22 ರ ವರೆಗೆ ದ್ವಿತೀಯ ಪಿ.ಯು.ಸಿ. ವಾರ್ಷಿಕ ಪರೀಕ್ಷೆಗಳಿಗೆ ನಡೆಯಲಿದ್ದು, ವಾರ್ಷಿಕ ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾಧಿಕಾರಿ ನಿತೇಶ ಪಾಟೀಲ ಅವರು ಆದೇಶ ಹೊರಡಿಸಿರುತ್ತಾರೆ.

ಪರೀಕ್ಷೆಗಳ ಸಮಯದಲ್ಲಿ ಯಾವುದೇ ರೀತಿಯ ಲೋಪದೋಷಗಳಾಗದಂತೆ ಹಾಗೂ ಯಾವುದೇ ರೀತಿಯ ಅವ್ಯವಹಾರಗಳು ಜರುಗದಂತೆ ಕಟ್ಟುನಿಟ್ಟಿನ ಕ್ರಮ ಜರುಗಿಸುವ ಸಲುವಾಗಿ ಮತ್ತು ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತ ದೃಷ್ಟಿಯಿಂದ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಸಿ.ಆರ್.ಪಿ.ಸಿ.1973 ಕಲಂ 144ರ ಅಡಿಯಲ್ಲಿ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿರುತ್ತದೆ. ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200ಮೀ. ವ್ಯಾಪ್ತಿಯಲ್ಲಿ ಮುಂಜಾಗ್ರತಾ ಕ್ರಮವಾಗಿ ಯಾವುದೇ ಅಹಿತಕರ ಘಟನೆಗಳು ಜರುಗದಂತೆ ನೋಡಿಕೊಳ್ಳಲು ಹಾಗೂ ಕಾನೂನು ಮತ್ತು ಸುವ್ಯವಸ್ಥೆಯನ್ನು ಕಾಪಾಡುವ ಹಿತ ದೃಷ್ಟಿಯಿಂದ ನಿಷೇಧಾಜ್ಞೆ ಜಾ-ರಿಗೊಳಿಸಲಾಗಿದೆ ಎಂದು ಬೆಳಗಾವಿ ಜಿಲ್ಲಾ ದಂಡಾಧಿಕಾರಿಗಳಾದ ನಿತೇಶ್.ಕೆ.ಪಾಟೀಲ ಅವರು ಆದೇಶದಲ್ಲಿ ತಿಳಿಸಿದ್ದಾರೆ.

## ಎಸ್ ಎಸ್ ಎಲ್ ಸಿ ಮಕ್ಕಳಿಗೆ ಕಾರ್ಯಾಗಾರ; ಪೂರ್ವ ತಯಾರಿ, ಆತ್ಮವಿಶ್ವಾಸವಿದ್ದಲ್ಲಿ ಆತಂಕ ಇರಲ್ಲ



ಹುಕ್ಕೇರಿ: ಪರೀಕ್ಷಾ ದಿನಗಳು ಹತ್ತಿರದಲ್ಲಿದ್ದು ವಿದ್ಯಾರ್ಥಿಗಳು ಮತ್ತು ಪಾಲಕ ಪೋಷಕರು ಒತ್ತಡದಲ್ಲಿರುತ್ತಾರೆ ಪರೀಕ್ಷಾ ಪೂರ್ವದ ಸಿದ್ಧತೆ ಗಟ್ಟಿಯಾಗಿದ್ದರೆ ಪರೀಕ್ಷೆಯು ಆತಂಕವಾಗುವುದಿಲ್ಲ ಕೇವಲ ಅಂಕಗಳನ್ನು ದೃಷ್ಟಿಯಲ್ಲಿಟ್ಟುಕೊಂಡು ಪೋಷಕರಾಗಲಿ, ವಿದ್ಯಾರ್ಥಿಗಳಾಗಲಿ ಪರೀಕ್ಷೆಯನ್ನು ಎದುರಿಸಬಾರದು, ಅಂಕ ಗಳಿಕೆಯೇ ಮುಖ್ಯ ಎಂದು ಭಾವಿಸಬಾರದು ಎಂದು ಬೆಳಗಾವಿಯ ಡಾ ಸ ಜ ನಾಗಲೋತಿಮಠ ವಿಜ್ಞಾನ ಕೇಂದ್ರದ ಯೋಜನಾ ಸಂಂ-ಯೋಜಕ ರಾಜಶೇಖರ ಪಾಟೀಲ ಅಭಿಪ್ರಾಯಪಟ್ಟರು.

ಮಹಿಳಾ ಕಲ್ಯಾಣ ಸಂಸ್ಥೆ, ಬೆಳಗಾವಿ ಹಾಗೂ ಜಯಭಾರತ ಫೌಂಡೇಶನ, ಬೆಳಗಾವಿ ಜಂಟಿಯಾಗಿ ಹುಕ್ಕೇರಿ ತಾಲೂಕಿನ ಹಿಡಕಲ್ ಡ್ಯಾಂ ನಲ್ಲಿ ಎಸ್ ಎಸ್ ಎಲ್ ಸಿ ಮಕ್ಕಳಿಗಾಗಿ ಆಯೋಜಿಸಿದ್ದ ಪ್ರೇರಣಾ ಶಿಬಿರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ನಿವೃತ್ತ ಶಿಕ್ಷಕ ನಾರಾಯಣ ಖನಗಾವಿ ಮಾತನಾಡಿ ಪರೀಕ್ಷೆಯನ್ನು ಒಂದು ಹಬ್ಬವಾಗಿ ಸಂಭ್ರಮಿಸಬೇಕು, ಜ್ಞಾಪಕ ಶಕ್ತಿಯನ್ನು ಹೆಚ್ಚಿಸಿಕೊಂಡು, ಮನಸ್ಸನ್ನು ಕೇಂದ್ರಿಕರಿಸಿ ಓದಿದಲ್ಲಿ ಪರೀಕ್ಷೆಯನ್ನು ಲೀಲಾಜಾಲವಾಗಿ ಎದು-ರಿಸಬಹುದೆಂದರು.

ವಿಷಯ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ್ದ ಯಮಕನಮರಡಿಯ ಸಿ ಇ ಎಸ್ ಪ್ರೌಢಶಾಲೆಯ ಆಂಗ್ಲ ಭಾಷಾ ಶಿಕ್ಷಕ ಅಜಯ ಉದೋಶಿ, ಹಾರುಗೊಪ್ಪ ಸರಕಾರಿ ಪ್ರೌಢಶಾಲೆಯ ವಿಜ್ಞಾನ ಶಿಕ್ಷಕ ಮಹೇಶ ಅಂಗಡಿ, ಮಲ್ಲಾಪೂರ ಸರಕಾರಿ ಪ್ರೌಢಶಾಲೆಯ ಗಣಿತ ಶಿಕ್ಷಕ ಶಿವನಗೌಡಾ ಗಿರಪ್ಪಗೌಡರ ಇಂಗ್ಲಿಷ, ವಿಜ್ಞಾನ ಹಾಗೂ ಗಣಿತ ವಿಷಯಗಳಲ್ಲಿ ಉತ್ತಮ ಅಂಕ ಗಳಿಕೆ, ಹೆಚ್ಚು ಒತ್ತು ನೀಡಿ ಅಭ್ಯಾಸ ಮಾಡಬೇಕಾದ ಅಧ್ಯಾಯಗಳು, ಉತ್ತರ ಬಿಡಿಸುವಿಕೆ ಮುಂತಾದವುಗಳ ಬಗ್ಗೆ ಮಕ್ಕಳಿಗೆ ಮನವರಿಕೆ ಮಾಡಿದರು.

ಕಾರ್ಯಕ್ರಮದಲ್ಲಿ ಮಹಿಳಾ ಕಲ್ಯಾಣ ಸಂಸ್ಥೆಯ ಸುರೇಖಾ ಪಾಟೀಲ ಉಪಸ್ಥಿತರಿದ್ದರು. ಪ್ರಾರಂಭದಲ್ಲಿ ಕರ್ನಾಟಕ ಪಬ್ಲಿಕ ಶಾಲೆಯ ಪ್ರಾಚಾರ್ಯ ಕಿರಣ ಚೌಗಲಾ ಪ್ರಾಸ್ತಾವಿಕವಾಗಿ ಮಾತನಾಡಿದರು ಶಂಕರ ಕತ್ತಿ ನಿರೂಪಿಸಿ ವಂದಿಸಿದರು, ವಿವಿಧ ಗ್ರಾಮಗಳ 100 ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರೇರಣಾ ಶಿಬಿರದ ಲಾಭ ಪಡೆದುಕೊಂಡರು.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089